ಸಂಪುಟ: ೦೬/ ಸಂಚಿಕೆ: ೨೬೧/ಶನಿವಾರ ದಿನಾಂಕ : ೧೪-೧೨-೨೦೨೪/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 06/ ISSUE : 261/ SATURDAY Date : 14-12-2024/ RNI No. KARKAN/2019/77640/ Postal Reg No. PMG/KA/NK/BM/135/21-24 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

## ರೋಗನಿರೋಧಕ ಶಕ್ತಿ ಹೆಚ್ಚಿಸಲು ಸಿರಿಧಾನ್ಯ ಸಹಕಾರಿ: ಮುಖ್ಯಮಂತ್ರಿ



ಬೆಳಗಾವಿ: ಜನರಲ್ಲಿ ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸಲು ಹಾಗೂ ಸಕ್ಕರೆ ಕಾಯಿಲೆಯನ್ನು ನಿಯಂತ್ರಿಸಲು ಸಿರಿಧಾನ್ಯದ ಬಳಕೆ ಸಹಕಾರಿಯಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ಬೆಳಗಾವಿ ಸುವರ್ಣಸೌಧದಲ್ಲಿ ಅಂತರರಾಷ್ಟ್ರೀಯ ಸಾವಯವ ಮತ್ತು ಸಿರಿಧಾನ್ಯ ವಾಣಿಜ್ಯ ಮೇಳದ ಪೂರ್ವಭಾವಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಿರಿಧಾನ್ಯದಲ್ಲಿ ಪ್ರೊಟೀನ್ ಹಾಗೂ ನಾರಿನ ಅಂಶ ಹೆಚ್ಚಾಗಿದ್ದು, ರೈತರು ಹೆಚ್ಚಿನ ಸಂಖ್ಯೆಯಲ್ಲಿ ಸಿರಿಧಾನ್ಯ ಕೃಷಿಯನ್ನು ತೊಡಗಿಕೊಳ್ಳಬೇಕು ಎಂದರು.

ದೇಶದಲ್ಲಿ ಕರ್ನಾಟಕ ರಾಜ್ಯ ಸಿರಿಧಾನ ಉತ್ಪಾದನೆಯಲ್ಲಿ ಮೂರನೇ ಸ್ಥಾನದಲ್ಲಿದೆ. ಸುಮಾರು 18.38 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ 22.16 ಲಕ್ಷ ಟನ್ ಗಳಷ್ಟು ಸಿರಿಧಾನ್ಯವನ್ನು ರಾಜ್ಯದಲ್ಲಿ ಬೆಳೆಯಲಾಗುತ್ತಿದೆ ಎಂದು ತಿಳಿಸಿದರು.

ದೇಶ ವಿದೇಶಗಳಲ್ಲಿ ಸಿರಿಧಾನ್ಯಗಳ ಬೇಡಿಕೆ ಹೆಚ್ಚಾಗುತ್ತಿದ್ದು, ವಿಶ್ವದಲ್ಲಿ 903.61 ಲಕ್ಷ ಟನ್ ಗಳಷ್ಟು ಸಿರಿಧಾನ್ಯವನ್ನು ಬೆಳೆಯಲಾಗುತ್ತಿದೆ. ಭಾರತದಲ್ಲಿ 31.50 ರಷ್ಟು ಸಿರಿಧಾನ್ಯವನ್ನು ಬೆಳೆಯುತ್ತಿದ್ದು, ವಿಶ್ವದಲ್ಲಿ ಅತ್ಯಂತ ಹೆಚ್ಚು ಸಿರಿಧಾನ್ಯ ಬೆಳೆಯುವ ದೇಶವಾಗಿದೆ ಎಂದರು.

ಬೆಂಗಳೂರಿನ ನಗರದ ತ್ರಿಪುರವಾಸಿನಿ ಅರಮನೆ ಮೈದಾನದಲ್ಲಿ ಅಂತರರಾಷ್ಟ್ರೀಯ ಸಾವಯವ ಮತ್ತು ಸಿರಿಧಾನ್ಯ ವಾಣಿಜ್ಯ ಮೇಳವನ್ನು ಡಿಸೆಂಬರ್ 23, 24 ಮತ್ತು 25 ರಂದು ಹಮ್ಮಿಕೊಳ್ಳಲಾಗಿದ್ದು, ಮೇಳದ ಪೂರ್ವಭಾವಿ ಕಾರ್ಯಕ್ರಮಕ್ಕೆ ಚಾಲನೆ ನೀಡಿರುವುದಾಗಿ ತಿಳಿಸಿದರು.

ಈ ಕಾರ್ಯಕ್ರಮದಲ್ಲಿ, ವಿಧಾನ ಪರಿಷತ್ತು ಸಭಾಪತಿ ಬಸವರಾಜ ಹೊರಟ್ಟಿ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕೃಷಿ ಸಚಿವ ಎನ್.ಚಲುವರಾಯಸ್ವಾಮಿ, ಅರಣ್ಯ ಸಚಿವ ಈಶ್ವರ ಖಂಡ್ರೆ, ಸಣ್ಣ ನೀರಾವರಿ ಸಚಿವ ಎನ್.ಎಸ್.ಬೋಸರಾಜು, ಮಾಜಿ ಸಚಿವ ಆರ್.ವಿ. ದೇಶಪಾಂಡೆ, ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ.ಶಾಲಿನಿ ರಜನೀಶ್ ಸೇರಿದಂತೆ ಇತರೆ ಗಣ್ಯರು ಉಪಸ್ಥಿತ-ರಿದ್ದರು.

******

## ರಾಜ್ಯ ದಲ್ಲಿ ಹೊಸದಾಗಿ 3988 ಅಂಗನವಾಡಿ ತೆರೆಯಲು ಕೇಂದ್ರಕ್ಕೆ ಪ್ರಸ್ತಾವನೆ: ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್



ಬೆಳಗಾವಿ ಸುವರ್ಣಸೌಧ,ಡಿ.13 : ರಾಜ್ಯದಲ್ಲಿ ಹೊಸದಾಗಿ 3988 ಅಂಗನವಾಡಿ ಕೇಂದ್ರಗಳನ್ನು ತೆರೆಯಲು ಕೇಂದ್ರ ಸರ್ಕಾರದ ಅನುಮೋದನೆಗೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವೆ ಲಕ್ಷ್ಮಿ ಆರ್ ಹೆಬ್ಬಾಳ್ಕರ್ ಹೇಳಿದರು.

ಅವರು ಇಂದು ವಿಧಾನ ಪರಿಷತ್ತಿನಲ್ಲಿ ಸದಸ್ಯ ಜವರಾಯಗೌಡ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದರು.

ಹೊಸದಾಗಿ ಅಂಗನವಾಡಿ ಕೇಂದ್ರ ಪ್ರಾರಂಭಿಸಲು ಕೇಂದ್ರ ಸರ್ಕಾರದ ಅನುಮೋದನೆ " ಅವಶ್ಯಕವಿರುತ್ತದೆ. ಏಕೆಂದರೆ ಅಂಗನವಾಡಿ ಕೇಂದ್ರದಲ್ಲಿ ಫಲಾನುಭವಿಗಳಿಗೆ ಪೂರೈಸಲಾಗುವ ಪೂರಕ ಪೌಷ್ಟಿಕ ಆಹಾರ ಯೋಜನೆಯಡಿ ಹಂಚಿಕೆ ಅನುದಾನದಲ್ಲಿ ಕೇಂದ್ರದ ಪಾಲು ಶೇ 20ರಷ್ಟು ಇರುತ್ತದೆ.

ಅಂಗನವಾಡಿ ಕಾರ್ಯಕರ್ತೆಯರ ಮತ್ತು ಸಹಾಯಕಿಯರ ಗೌರವಧನ ಪಾವತಿಯಲ್ಲಿ ಆಡಳಿತ ವೆಚ್ಚದಡಿ ಅನುದಾನ ಹಂಚಿಕೆಯಲ್ಲಿ ಕೇಂದ್ರ ಸರ್ಕಾರದ ಪಾಲು ಶೇ 30ರಷ್ಟಿರುತ್ತದೆ.

ಮುಂದುವರೆದು ಸಬ್ಸಿಡಿ ದರದಲ್ಲಿ ಅಕ್ಕಿ ಮತ್ತು ಗೋಧಿಯನ್ನು ಸಹ ಕೇಂದ್ರ ಸರ್ಕಾರವು ರಾಜ್ಯಗಳಿಗೆ ಹಂಚಿಕೆ ಮಾಡುತ್ತದೆ.

ಹಾಲಿ ಕರ್ನಾಟಕ ರಾಜ್ಯದಲ್ಲಿ ಕೇಂದ್ರ ಸರ್ಕಾರದ ಅನುಮೋದಿತ 65931 ಅಂಗನವಾಡಿ ಕೇಂದ್ರಗಳು ಹಾಗೂ ರಾಜ್ಯ ಸರ್ಕಾರದ ವತಿಯಿಂದ ಅನುದಾನಿತ 3988 ಅಂಗನವಾಡಿ ಕೇಂದ್ರಗಳು ಕಾರ್ಯ ನಿರ್ವಹಿಸುತ್ತಿವೆ. ಸದರಿ 3988 ಅಂಗನವಾಡಿ ಕೇಂದ್ರಗಳಿಗೆ ಕೇಂದ್ರ ಸರ್ಕಾರದ ಅನುಮೋದನೆಗಾಗಿ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ ಎಂದರು.

ರಾಜ್ಯದಲ್ಲಿ ಸ್ವಂತ ಕಟ್ಟಡವಿಲ್ಲದ ಅಂಗನವಾಡಿ ಕೇಂದ್ರಗಳಿಗೆ ಹೊಸದಾಗಿ ಕಟ್ಟಡ ನಿರ್ಮಿಸಲು ಕಳೆದ 2 ವರ್ಷಗಳಲ್ಲಿ ರೂ. 22,923 ಲಕ್ಷ ಅನುದಾನ ಬಿಡುಗಡೆಯಾಗಿರುತ್ತದೆ. ಒಟ್ಟು 337 ಅಂಗನವಾಡಿ ಕಟ್ಟಡಗಳ ಕಾಮಗಾರಿ ಪೂರ್ಣಗೊಂಡಿದೆ ಎಂದರು.

********

## ಕಾನೂನು ಕೈಗೆ ತೆಗೆದುಕೊಂಡರೆ ಸರ್ಕಾರ ಸುಮ್ಮನಿರಲ್ಲ: ಸಿಎಂ ಸಿದ್ಧರಾಮಯ್ಯ

ಬಿಜಾಪುರ: ರಾಜ್ಯದ ಮುಖ್ಯಮಂತ್ರಿ ಸಿದ್ಧರಾಮಯ್ಯನವರು ನಗರಕ್ಕೆ ಶುಕ್ರವಾರದಂದು ಭೇಟಿ ನೀಡಿದ್ದರು. ಈ ಸಂದರ್ಭದಲ್ಲಿ ತಮ್ಮನ್ನು ಭೇಟಿಯಾದ ಸುದ್ದಿಗಾರರ ಕೆಲ ಪ್ರಶ್ನೆಗಳಿಗೆ ಉತ್ತರಿಸಿದ್ದಾರೆ.

ನೀವು ಪಂಚಮಸಾಲಿ ಸಮುದಾಯಕ್ಕೆ 2ಎ ಮೀಸಲಾತಿ ಏಕೇ ಕೊಡುತ್ತಿಲ್ಲ ಎಂಬ ಪ್ರಶ್ನೆಗೆ ಕಾನೂನು ಇದೆ ಕಾನೂನು ಪ್ರಕಾರ ನಾವು ಮಾಡುತ್ತೇವೆ. ಬಿಜೆಪಿ ಅವಧಿಯಲ್ಲೆ ಅವರಿಗೆ ಮೀಸಲಾತಿ ಸಿಕ್ಕಿಲ್ಲ. ಈ ಹಿಂದೆ ಬಿಜೆಪಿ ಪಕ್ಷ ಅಧಿಕಾರದಲ್ಲಿ ಇದ್ದಾಗ, ಅಂದಿನ ಪರಮನೆಂಟ್ ಬ್ಯಾಕ್‌ವಾಡ ಕ್ಲಾಸ್ ಕಮಿಷನ್ ಅಧ್ಯಕ್ಷರಾಗಿದ್ದ ಜಯಪ್ರಕಾಶ ಹೆಗಡೆ ಅವರು ಒಂದು ವರದಿ ಕೊಟ್ಟಿದ್ದರು. ಅದೇನೆಂದರೆ 2ಎ ಮತ್ತು 2ಬಿ ಮೀಸಲಾತಿಗೆ ಹೊಸದಾಗಿ ಯಾರನ್ನು ಸೇರಿಸಬಾರದು. 2ಬಿಗೆ ಇರುವ 4 ಪರಸೆಂಟ್ ಮೀಸಲಾತಿಯನ್ನು ಮುಂದುವರೆಸಬೇಕು. ರದ್ದುಪಡಿಸಬಾರದು ಎಂದು ವರದಿ ಮಾಡಿದ್ದಾರೆ. ಹೀಗಾಗಿ ನಾವು ಅವರು ಹೇಳಿದಂತೆ ನಡೆದುಕೊಳ್ಳುತ್ತಿದ್ದೇವೆ. ಕಾನೂನು ಏನು ಹೇಳುತ್ತೋ ನಾವು ಆ ಪ್ರಕಾರ ಮಾಡುತ್ತೇವೆ ಎಂದು ಉತ್ತರಿಸಿದರು.

ಆದರೂ ಕೂಡ ಮತ್ತೆ ಈಗ ಪಂಚಮಸಾಲಿ ಸಮಾಜದ ಜನರು ಕೂಡಲ ಸಂಗಮ ಸ್ವಾಮೀಜಿ ನೇತೃತ್ವದಲ್ಲಿ ಹೊಸದಾಗಿ ಧ್ವನಿ ಎತ್ತಿದ್ದಾರೆ. ಮತ್ತೆ ಈಗ ನಾವು ಪರಮನೆಂಟ್ ಬ್ಯಾಕ್‌ವಾಡ ಕ್ಲಾಸ್ ಕಮಿಷನ್ ಎದುರು ಹೋಗೋಣ.

ಅವರು ಪರಿಶೀಲನೆ ನಡೆಸಿ ಯಾವ ರೀತಿ ವರದಿ ನೀಡುತ್ತಾರೆ ನೋಡೋಣ. ಆ ನಂತರ ನಾವು ಕಾನೂನು ಪ್ರಕಾರ ತೀರ್ಮಾನ ತೆಗೆದುಕೊಳ್ಳತ್ತೇವೆ ಎಂದು ಸ್ಪಷ್ಟಪಡಿಸಿದರು.

ಲಾಠಿ ಪ್ರಹಾರದ ಕುರಿತ ಪ್ರಶ್ನೆಗೆ ಉತ್ತರಿಸಿದ ಅವರು ಚಳುವಳಿ ಹೋರಾಟ ಮಾಡುವ ಹಕ್ಕು ಎಲ್ಲರಿಗೂ ಇದೆ. ಅವರ ಹೋರಾಟಕ್ಕೆ ನನ್ನ ವಿರೋಧವಿಲ್ಲ. ಆದರೆ ಕಾನೂನು ಕೈಗೆ ತೆಗೆದುಕೊಂಡರೆ ಸರ್ಕಾರ ಸಮ್ಮನೆ ಇರಲ್ಲ. ಅವರು ಕಾನೂನು ಕೈಗೆ ತೆಗೆದುಕೊಂಡು ಕಲ್ಲು ತೋರಾಟ ನಡೆಸಿದರೆ ಸಮ್ಮನೆ ಇರಬೇಕಾ, ನಮ್ಮ ಬಳಿ ಅವರು ಕಲ್ಲು ತೂರಾಟ ನಡೆಸಿ ಪೊಲೀಸರನ್ನು ಗಾಯಗೊಳಿಸಿರುವ ಪೋಟೋ ಇವೆ. ಅವರ ಆರೋಪ ಆಧಾರ ರಹಿತ ಆರೋಪ ಎಂದರು.

ಈ ಸಂದರ್ಭದಲ್ಲಿ ಸಚಿವ ಎಚ್.ಕೆ. ಪಾಟೀಲ, ಕಾಂಗ್ರೇಸ್ ಪಕ್ಷದ ಮುಖಂಡರಾದ ಪ್ರಕಾಶ ರಾಠೋಡ, ಅಬ್ದುಲ್‌ಹಮೀದ್ ಮುಶ್ರೀಫ್, ಮಾಂತೇಶ ಬಿರಾದಾರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಗಾಜನೂರು ನೀರು ಶುದ್ಧೀಕರಣ ಘಟಕ ನಿರ್ಮಾಣ

### ಅರಣ್ಯ ಇಲಾಖೆ ಎನ್.ಓ.ಸಿ ಪಡೆಯಲು ಪ್ರಯತ್ನ: ಸಚಿವ ಬಿ.ಎಸ್.ಸುರೇಶ್

ಬೆಳಗಾವಿ ಡಿ.13 : ಶಿವಮೊಗ್ಗ ನಗರಕ್ಕೆ ಕುಡಿಯುವ ನೀರು ಸರಬರಾಜು ಮಾಡಲು ಗಾಜನೂರು ಬಳಿ ಹೊಸದಾಗಿ ನೀರು ಶುದ್ಧೀಕರಣ ಘಟಕ ನಿರ್ಮಿಸಲು ಯೋಜನೆ ರೂಪಿಸಲಾಗಿದೆ. ಈ ಸ್ಥಳ ಅರಣ್ಯ ಪ್ರದೇಶದಲ್ಲಿ ಇರುವುದ-ರಿಂದ ಶೀಘ್ರವೇ ಅರಣ್ಯ ಇಲಾಖೆಯಿಂದ ಎನ್.ಓ.ಸಿ ಪಡೆದು ಕಾಮಗಾರಿ ಪ್ರಾರಂಭಿಸಲು ಪ್ರಯತ್ನಿಸಲಾಗುತ್ತಿದೆ. ಒಂದು ವೇಳೆ ಎನ್.ಓ.ಸಿ ಲಭಿಸದಿದ್ದರೆ, ಸೂಕ್ತವಾದ ಬದಲಿ ಜಾಗವನ್ನು ಸಹ ಗುರುತಿಸಲು ಜಿಲ್ಲಾಧಿಕಾರಿಗಳಿಗೆ ನಿರ್ದೇಶನ ನೀಡಿದ್ದೇನೆ ಎಂದು ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವ ಬಿ.ಎಸ್.ಸುರೇಶ್ ಹೇಳಿದರು.

ಬೆಳಗಾವಿ ಸುವರ್ಣಸೌಧಲ್ಲಿ ನಡೆಯುತ್ತಿರುವ ಚಳಿಗಾಲ ಅಧಿವೇಶನದಲ್ಲಿ ಶುಕ್ರವಾರ (ಡಿ.13) ಪ್ರಶ್ನೋತ್ತರ ಕಲಾಪದಲ್ಲಿ ಶಾಸಕ ಚನ್ನಬಸಪ್ಪ ಅವರ ಚುಕ್ಕೆ ಗುರುತಿನ ಪ್ರಶ್ನಗೆ ಅವರು ಉತ್ತರಿಸಿದರು.

ಶಿವಮೊಗ್ಗ ನಗರಕ್ಕೆ ನೀರು ಸರಬರಾಜು ಮಾಡುತ್ತಿರುವ ಕೃಷ್ಣ ರಾಜೇಂದ್ರ ನೀರು ಸರಬರಾಜು ಕೇಂದ್ರದಲ್ಲಿ 1976ರಲ್ಲಿ 13.62 ಎಂ.ಎಲ್.ಡಿ, 1996ರಲ್ಲಿ 13.38 ಎಂ.ಎಲ್.ಡಿ ಹಾಗೂ 2009 ರಲ್ಲಿ 57 ಎಂ.ಎಲ್.ಡಿ ಸೇರಿ ಒಟ್ಟು 84 ಎಂ.ಎಲ್.ಡಿ ಸಾಮರ್ಥ-್ಯದ ನೀರು ಶುದ್ಧೀಕರಣ ಘಟಕಗಳನ್ನು ಸ್ಥಾಪಿಸಲಾಗಿದೆ. ಇದರಲ್ಲಿ 1976 ಮತ್ತು 1996ರಲ್ಲಿ ನಿರ್ಮಿಸಿರುವ ಶುದ್ಧೀಕರಣ ಘಟಕಗಳು ಶಿಥಿಲಾವಸ್ಥೆಯಲ್ಲಿವೆ.

ಇವುಗಳ ಬದಲು ಹೊಸದಾಗಿ ಶುದ್ಧೀಕರಣ ಘಟಕ ನಿರ್ಮಿಸಲು ಶಿವಮೊಗ್ಗ ನಗರ ವ್ಯಾಪ್ತಿಯಲ್ಲಿ ಸ್ಥಳಾವಕಾಶ ಇಲ್ಲದ ಕಾರಣ, ಗಾಜನೂರು ಅರಣ್ಯ ಪ್ರದೇಶದಲ್ಲಿ ಸ್ಥಳ ಗುರುತಿಸಲಾಗಿದೆ. ಈ ಸ್ಥಳದಿಂದ ಗುರುತ್ವಾಕರ್ಷಣೆ ಮೂಲಕ ಶಿವಮೊಗ್ಗ ನೀರು ಸರಬರಾಜು ಮಾಡಬಹುದು. ಈ ಸಂಬಂಧ ಸರ್ವೆ ಕಾರ್ಯ ಹಾಗೂ ವಿಸ್ತೃತ ಯೋಜನಾ ವರದಿಯನ್ನು ಸಿದ್ದಪಡಿಸಲಾಗಿದೆ ಎಂದು ಸಚಿವ ಬಿ.ಎಸ್.ಸುರೇಶ ತಿಳಿಸಿದರು.

ಶಿವಮೊಗ್ಗ ನಗರದಲ್ಲಿ ಶೇ.74 ರಷ್ಟು ಒಳಚರಂಡಿ ವ್ಯವಸ್ಥೆ ಇದೆ. ರೂ.115 ಕೋಟಿ ವೆಚ್ಚದಲ್ಲಿ 3ನೇ ಹಂತದ ಸಮಗ್ರ ಒಳಚರಂಡಿ ಯೋಜನೆಯಡಿ, ಏರೇಟೆಡ್ ಲಗೂನ್ ತಂತ್ರಜ್ಞಾನ ಆಧರಿಸಿ 35.58 ಎಂ.ಎಲ್.ಡಿ ತ್ಯಾಜ್ಯ ನೀರು ಶುದ್ದೀಕರಣ ಘಟಕ, 03 ವೆಟ್‌ವೆಲ್, 262 ಕಿ.ಮೀ ಉದ್ದದ ಗ್ರಾಮಸಾರ ಕೊಳವೆ ಮಾರ್ಗವನ್ನು ನಿರ್ಮಿಸಲಾಗಿದೆ. ಅಮೃತ್ ಯೋಜನೆಯಡಿ ರೂ.58 ಕೋಟಿ ಹಾಗೂ ರೂ.7 ಕೋಟಿ ಹೆಚ್ಚುವರಿ ಅನುದಾನದಡಿ ಮಹಾನಗರ ವ್ಯಾಪ್ತಿಯ ವಿವಿಧ ಪ್ರದೇಶದಲ್ಲಿ ಗೃಹ ಸಂಪರ್ಕಿತ ಒಳಚರಂಡಿ ಕೊಳವೆ ಮಾರ್ಗ, ಹಳೆ ಕೊಳವೆ ಮಾರ್ಗಗಳ ಪುನರುಜ್ಜೀವನ, 4 ವೆಟ್‌ವಲ್, 6 ಪಂಪಿಂಗ್ ಮೆಷನರಿ, ಡಿ.ಜಿ. ರೂಮ್, ಡಿ.ಜೆ.ಸೆಟ್ ಮತ್ತು ಟ್ರಾನ್ಸ್‌ಫಾರ್ಮರ್ ಸಬ್ ಸ್ಟೇಷನ್, 11 ಕೆ.ವಿ. ಎಕ್ಸ್‌ಪ್ರೆಸ್ ಫೀಡರ್ ವಿದ್ಯುತ್ ಲೈನ್, 5.13 ಎಂ.ಎಲ್.ಡಿ ಸಾಮರ್ಥ್ಯದ ತ್ಯಾಜ್ಯ ನೀರಿನ ಶುದ್ದೀಕರಣ ಘಟಕ ನಿರ್ಮಿಸಲಾಗಿದೆ. ಈ ಎಲ್ಲಾ ಕಾಮಗಾರಿಗಳು ಸುಸ್ಥಿತಿಯಲ್ಲಿದ್ದು, ಶಿವಮೊಗ್ಗ ಮಹಾನಗರ ಪಾಲಿಕೆಗೆ ಹಸ್ತಾಂತರಿಸಲಾಗಿದೆ. ನಗರದಲ್ಲಿ ಹಾದುಹೋಗಿರುವ ತುಂಗಾ ನದಿಗೆ ಕೊಳಚೆ ನೀರು ಸೇರದಂತೆ ತಡೆಯಲು ಒಳಚರಂಡಿ ವ್ಯವಸ್ಥೆಯಲ್ಲಿನ ಮಿಸಿಂಗ್ ಲಿಂಕ್ಸ್ ಸ್ಥಳಗಳಲ್ಲಿಯೂ ರಾಷ್ಟ್ರೀಯ ಹಸಿರು ನ್ಯಾಯಮಂಡಳಿಯ ರೂ.40 ಕೋಟಿ ಅನುದಾನದಲ್ಲಿ ಒಳಚರಂಡಿ ವ್ಯವಸ್ಥೆಯನ್ನು ನಿರ್ಮಿಸಿ, ತ್ಯಾಜ್ಯ ನೀರು ಸಂಸ್ಕರಣ ಘಟಕ ನಿರ್ಮಿಸುವುದಾಗಿ ಸಚಿವ ಬಿ.ಎಸ್.ಸುರೇಶ್ ಹೇಳಿದರು.

ಮಹಾನಗರಗಳಿಗೆ ರೂ.2000 ಕೋಟಿ ಅನುದಾನ: ಸರ್ಕಾರ ರಾಜ್ಯ ಹಣಕಾಸು ನಿಮಗದಿಂದ ಬೃಹತ್ ಬೆಂಗಳೂರು ಸೇರಿ ಇತರೆ 10 ಮಹಾನಗರ ಪಾಲಿಕೆಗಳಿಗೆ ಒಟ್ಟು ರೂ.2000 ಕೋಟಿ ಅನುದಾನ ನೀಡಿದೆ. ಇದರಲ್ಲಿ ಶಿವಮೊಗ್ಗ ನಗರಕ್ಕೆ ರೂ.140 ಕೋಟಿ ಅನುದಾನವನ್ನು ಒದಗಿಸಲಾಗಿದೆ ಎಂದು ಸಚಿವ ಬಿ.ಎಸ್.ಸುರೇಶ್ ಸದನದಲ್ಲಿ ಮಾಹಿತಿ ನೀಡಿದರು.

ಶಾಸಕ ಚನ್ನಬಸಪ್ಪನವರು ರಾಜ್ಯ ಹಣಕಾಸು ನಿಮಗದಿಂದ ನಿಗಮದಿಂದ ನೀಡಿದ ಅನುದಾನದಲ್ಲಿ ಶೇ.20 ರಷ್ಟು ಮಾತ್ರ ಕುಡಿಯುವ ನೀರಿನ ಕಾಮಗಾ-ರಿಗಳಿಗೆ ಬಳಸಿಕೊಳ್ಳಲು ಅವಕಾಶವಿದೆ. ಈ ಮಿತಿಯನ್ನು ಸಡಿಲಗೊಳಿಸಿ ಹೆಚ್ಚಿನ ಅನುದಾನವನ್ನು ಕುಡಿಯುವ ನೀರಿನ ಕಾಮಗಾರಿಗಳಿಗೆ ಬಳಸಿಕೊಳ್ಳಲು ಸರ್ಕಾರ ಅನುಮತಿ ನೀಡುವಂತೆ ಕೋರಿದರು.

## ಪರ್ಯಾಯ ಭೂಮಿ ಗುರುತಿಸುವ ಕಾರ್ಯ ಪ್ರಗತಿಯಲ್ಲಿ: ಕೃಷ್ಣ ಭೈರೇಗೌಡ

ಬೆಳಗಾವಿ ಸುವರ್ಣಸೌಧ ಡಿ.13: ಡಿ-ನೋಟಿಫಿಕೇಶನ್ ಪ್ರಸ್ತಾವನೆಗಳನ್ನು ನಿರ್ವನೀಕರಣಗೊಳಿಸುವ (disforest) ಪ್ರಕ್ರಿಯೆ ಚಾಲ್ತಿಯಲ್ಲಿರುವ ಕಾರಣದಿಂದ ರೈತರ ಪಹಣಿ ಪತ್ರಿಕೆಯಲ್ಲಿ ಮಂಜೂರಿದಾರರ ಹೆಸ-ರಿನ ಬದಲಾಗಿ ಈವರೆಗೂ ಅರಣ್ಯ ಇಲಾಖೆಯ ಹೆಸರೇ ಮುಂದುವರೆದಿರುತ್ತದೆ. ಪ್ರಸ್ತುತ ಸರ್ಕಾರದಿಂದ ಮತ್ತು ಜಿಲ್ಲಾಧಿಕಾರಿಯವರ ಸಮಿತಿಯಿಂದ ಅಂಗೀಕೃತವಾದ 1978ರ ಪೂರ್ವದ ಅರಣ್ಯ ಒತ್ತುವರಿ ಪ್ರಕರಣಗಳನ್ನು ಕರ್ನಾಟಕ ಅರಣ್ಯ ಅಧಿನಿಯಮ, 1963ರ ಸೆಕ್ಷನ್ 28 ರಂತೆ ಡಿ-ನೋಟಿಫಿಕೇಶನ್ ಮಾಡಲು ಪರಿಹಾರಾತ್ಮಕವಾಗಿ (Compansatory Afforestation) ಜಿಲ್ಲೆಯಲ್ಲಿ 2499 ಪ್ರಕರಣಗಳಿಗೆ 1293.253 ಹೆಕ್ಟೇರ್ ಪರ್ಯಾಯ ಭೂಮಿಯ ಅವಶ್ಯಕತೆಯಿರುತ್ತದೆ. ಪರ್ಯಾಯ ಭೂಮಿಯನ್ನು ಗುರುತಿಸುವ ಕಾರ್ಯ ಪುಗತಿಯಲ್ಲಿದೆ ಎಂದು ಕಂದಾಯ ಸಚಿವರಾದ ಕೃಷ್ಣ ಬೈರೇಗೌಡ ಅವರು ತಿಳಿಸಿದ್ದಾರೆ.

ದಿನಾಂಕ 27-04-1978 ಪೂರ್ವದ ಅರಣ್ಯ ಅತಿಕ್ರಮಣ ಸಕ್ರಮಗೊಳಿಸಲು ಸರ್ಕಾರವು ಸ್ಪಷ್ಟ ಮಾರ್ಗಸೂಚಿ ಹೊರಡಿಸಿದ ಹಿನ್ನೆಲೆಯಲ್ಲಿ ಉತ್ತರ ಕನ್ನಡ ಜಿಲ್ಲೆಯಲ್ಲಿ ಒಟ್ಟು 1832 ಪ್ರಕರಣಗಳಲ್ಲಿ ಜಿಲ್ಲಾಧಿಕಾರಿಗಳು ಸಕ್ರಮ ಆದೇಶ ಹೊರಡಿಸಿದ್ದು ಇರುತ್ತದೆ.

ಹೀಗೆ ಸಕ್ರಮಗೊಳಿಸಿದ ಪ್ರಕರಣಗಳಲ್ಲಿ ಅತೀಕ್ರಮಣ ಜಮೀನು, ಅರಣ್ಯ ಕಾಯಿದೆ 1962 ಕಲಂ 28ರಡಿ diforest donatory ಆಗದೇ ಇರುವುದರಿಂದ ಪಹಣಿ ಪತ್ರಿಕೆಯಲ್ಲಿ ಮಂಜೂ-ರಿದಾರರ ಹೆಸರಿಗೆ ಬದಲಾಗಿ ಈವರೆಗೆ ಅರಣ್ಯ ಇಲಾಖೆಯ ಹೆಸರೇ ಮುಂದುವರೆದಿರುತ್ತದೆ. ಇದರಿಂದ ಮಂಜೂರಿದಾರರು ಸರಕಾರದ ಸೌಲಭ್ಯಗಳಿಂದ ವಂಚಿತರಾಗಿದ್ದಾರೆ.

ಆದ್ದರಿಂದ ರೈತರ ಸಮಸ್ಯೆಯನ್ನು ನಿವಾ-ರಿಸುವ ದೃಷ್ಟಿಯಿಂದ ಹೀಗೆ disforest donatory ಆಗದೆ ಇರುವ ಪ್ರಕರಣಗಳಲ್ಲಿ ಸರ್ಕಾರ ಸೂಕ್ತ ಪ್ರಸ್ತಾವನೆ ಸಲ್ಲಿಸಿ ಕ್ರಮಬದ್ಧಗೊಳಿಸುವ ಬಗ್ಗೆ ವಿಧಾನ ಪರಿಷತ್ ಸದಸ್ಯರಾದ ಶಾಂತಾರಾಮ್ ಬುಡ್ನಾಸಿದ್ಧಿ ಅವರು ಡಿ.13ರಂದು ವಿಧಾನ ಪರಿಷತ್ತಿನಲ್ಲಿ ನಿಯಮ 72ರಡಿ ಗಮನ ಸೆಳೆಯುವ ಸೂಚನೆಗೆ ಸಚಿವರು ಲಿಖಿತ ಉತ್ತರ ನೀಡಿದ್ದಾರೆ.

## ತಂದೆ ತಾಯಿಗಳ ಋಣತೀರಿಸುವಕಾರ್ಯ ಕೈಗೊಳ್ಳಿ – ತುಕಾರಾಮ ವಾಯ್. ಮಾದರ



ಮೂಡಲಗಿ : "ವ್ಯಕ್ತಿಯಜೀವನದಲ್ಲಿ ಶಿಕ್ಷಣ ಬಹುಪ್ರಮುಖವಾದ-ಅಂಶವಾಗಿದ್ದುಪ್ರತಿಯೊಬ್ಬರೂ ಪ್ರಾಥಮಿಕ ಶಿಕ್ಷಣದಿಂದ ಹಿಡಿದು ಪದವಿ ಶಿಕ್ಷಣದವರೆಗೆ ಗಳಿಸಿದ ಜ್ಞಾನದಿಂದ ತಮಗೆ ಇಷ್ಟವಾದ ಕಾರ್ಯದ ಜೊತೆಗೆದಯೆ, ಅನುಕಂಪ, ಮಾನವೀಯತೆಯನ್ನು ಮೈಗೂಡಿಸಿಕೊಂಡು ತಂದೆ ತಾಯಿಗಳ ಕಷ್ಟವನ್ನು ಅರಿತು ಕೊಂಡುಉತ್ತಮ ನಾಗರಿಕರಾಗಿ ಬಾಳಿ ಅವರಋಣ ತೀರಿಸಿ" ಎಂದು ಪುರಸಭೆ ಮುಖ್ಯಾಧಿಕಾರಿ ತುಕಾರಾಮ ಮಾದರ ಹೇಳಿದರು.

ಅ ವ ್ ರ ್ ು ಸ ್ಥ ಳೀ ೦ ು ್ ು ಶ್ರೀಶ್ರೀಪಾದಬೋಧ ಸ್ವಾಮೀಜಿ ಸರಕಾರಿ ಪ್ರಥಮ ದರ್ಜೆ ಕಾಲೇಜು ಮೂಡಲಗಿಯಲ್ಲಿ ಹಮ್ಮಿಕೊಂಡ 2024-25ನೇ ಸಾಲಿನ ಸಾಂಸ್ಕೃತಿ-ಕ, ಕ್ರೀಡೆ. ಎನ್,ಎಸ್,ಎಸ್, ಭಾರತ್ ಸ್ಕೌಟ್&ಗೈಡ್ಸ, ಯುವ ರೆಡ್ ಕ್ರಾಸ್ ಘಟಕ ಇವುಗಳ ಕಾರ್ಯಚಟುವಟಿ-ಕೆಗಳ ಉದ್ಘಾಟನಾ ಸಮಾರಂಭ ಹಾಗೂ ಪ್ರಥಮ ವರ್ಷದ ಪದವಿ ವಿದ್ಯಾರ್ಥಿಗಳ ಸ್ವಾಗತ ಸಮಾರಂಭದಲ್ಲಿ ಮಾತನಾಡಿದರು,

ಸಾಂಸ್ಕೃತಿಕ ಸಂಯೋಜಕರಾದ ಶ್ರೀ ಶಿವಾನಂದ ಚಂಡಕೆ ಪ್ರಾಸ್ತಾವಿಕವಾಗಿ ಮಾತನಾಡಿದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಮಹೇಶ ವಾಯ್.ಕಂಬಾರ ಅಧ್ಯಕ್ಷತೆ ವಹಿಸಿ ಮಾತನಾಡಿ ವಿದ್ಯಾರ್ಥಿಗಳ ಸರ್ವತೋಮುಖ ಬೆಳವಣಿಗೆಯ ನಿಟ್ಟಿನಲ್ಲಿ ಅವರ ಅಗತ್ಯಗಳನ್ನು ಪೂರೈಸಲು ಸದಾ ಸಿದ್ಧವಿದೆ. ಇಲ್ಲಿರುವ ಪ್ರತಿಯೊಬ್ಬ ಪ್ರಾಧ್ಯಾಪಕರು ವಿದ್ಯಾರ್ಥಿಗಳ ಕಾಳಜಿಯ ಜೊತೆಗೆ ಅವರನ್ನು ಸನ್ಮಾರ್ಗದಲ್ಲಿ ಮುನ್ನಡೆಸುವ ಕಾರ್ಯ ಮಾಡುತ್ತಿದ್ದಾರೆ. ಮಹಾವಿದ್ಯಾಲಯದ ವಿದ್ಯಾರ್ಥಿಗಳು ಉನ್ನತ ಶಿಕ್ಷಣ ಪಡೆದು ವಿವಿಧ ಕ್ಷೇತ್ರಗಳಲ್ಲಿ ಕಾರ್ಯನಿರ್ವಹಿಸಿ ನಿಮ್ಮ ಹೆತ್ತವರಿಗೂ ಕಲಿಸಿದ ಗುರುಗಳಿಗೂ ಕೀರ್ತಿತರಬೇಕು "ಎಂದರು.

ಈ ಒಂದು ಕಾರ್ಯಕ್ರಮದಲ್ಲಿ 2023-24 ನೇ ಸಾಲಿನಲ್ಲಿ ಮಹಾವಿದ್ಯಾಲಯದಲ್ಲಿ ಅಧ್ಯಯನ ಮಾಡಿ ಉನ್ನತ ಶ್ರೇಣಿ ಪಡೆದ ಬಿ.ಎ, ಬಿ.ಕಾಂ, ಬಿ.ಎಸ್ಸಿ, ಬಿ.ಬಿ.ಎ ಹಾಗೂ ಬಿ.ಎಸ್.ಡಬ್ಲ್ಯು ವಿಭಾಗದ ವಿದ್ಯಾರ್ಥಿಗಳಿಗೆ ಸತ್ಕರಿಸಲಾಯಿತು. ಇಡೀ ಮಹಾವಿದ್ಯಾಲಯಕ್ಕೆ ಅತಿ ಹೆಚ್ಚು ಅಂಕ ಪಡೆದಬಿ.ಎಸ್. ಡಬ್ಲ್ಯು ಮಹಾವಿದ್ಯಾಲಯಕ್ಕೆ ಆಗಮಿಸಿದ ಏಳು ಜನ ಸಹಾಯಕ ಪ್ರಾಧ್ಯಾಪಕರನ್ನು ಆತ್ಮೀಯವಾಗಿ ಸ್ವಾಗತಿಸಲಾಯಿತು. ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿನಿಯರುಗಳನ್ನು ನಗದು ಬಹುಮಾನ ನೀಡಿ ಹಾಗೂ ಪುರಸಭೆಯ ಅಧ್ಯಕ್ಷೆ ಖುರಷಾದ ನದಾಫ್ ಸತ್ಕರಿಸಲಾಯಿತು.

ಕಾ ೦ ು ್ ರ್ ಕ ್ರ ವ ್ ು ದ ್ ಲ್ಲಿ ಮಹಾವಿದ್ಯಾಲಯದ ಸಿಡಿಸಿ ಸದಸ್ಯ ಸಂಜು ಮೊಕಾಶಿ, ಐ.ಕ್ಯೂ.ಎ.ಸಿ ಹಾಗೂ ಕ್ರೀಡಾ ಸಂಯೋಜ-ಕ ಚೇತನ್‌ರಾಜ್,ಸಂಜೀವ ಮದರಖಂಡಿ,ಬಿ.ಎಸ್. ಕೆಸರಗೊಪ್ಪ, ಗಾಯತ್ರಿ ಸಾಳೋಖೆ, ಎ.ಜಿ. ಗಿರೆನ್ನವರ, ಸುಮಿತ್ರಾ ಮಾಸ್ತಿ, ಶಿವಕುಮಾರ,ಬಸಪ್ಪ ಹೆಬ್ಬಾಳ, ಶ್ರದ್ಧಾ ಬೇವಿನಕಟ್ಟಿ, ಶ್ರೀಕಾಂತ ಬಿರಾದಾರ, ಯೋಗಿನಿ ಕೆ. ಸಂಜು ಗಾಣಿಗೇರ ಮತ್ತಿತರರು ಭಾಗವಹಿಸಿದ್ದರು. ಸಹನಾ ಕರಗಣ್ಣಿ ಪ್ರಾರ್ಥಿಸಿದರು. ಪವಿತ್ರಾ ಹಿರೇಮಠ ಸುಭಾಸ ಲಂಗೋಟಿ ಸ್ವಾಗತಿಸಿದರು. ಅಭಿಷೇಕ ಕಕಮರಿ ಹಾಗೂ ರೂಪಾ ಅಸ್ಕಿ ನಿರೂಪಿಸಿದರು.

ಐಶ್ವರ್ಯ ಕತ್ತಿ ವಂದಿಸಿದರು.

## ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಅತಿಥಿ ಶಿಕ್ಷಕರ ಪ್ರತಿಭಟನೆ

ಬೆಳಗಾವಿ: ತಮ್ಮನ್ನು ಸರ್ಕಾರ ಖಾಯಂ ಆಗಿ ನೇಮಕಾತಿ ಮಾಡಿಕೊಳ್ಳಬೇಕು, ಅತಿಥಿ ಶಿಕ್ಷಕರ ಬದಲಾಗಿ ಗೌರವ ಶಿಕ್ಷಕರೆಂದು ಘೋಷಣೆ ಮಾಡಬೇಕು ಎಂಬುದೂ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ರಾಜ್ಯ ಪ್ರಾಥಮಿಕ ಹಾಗೂ ಪ್ರೌಢಶಾಲಾ ಅತಿಥಿ ಶಿಕ್ಷಕರ ಸಂಘದ ಪದಾಧಿಕಾರಿಗಳು ಇಂದು ಪ್ರತಿಭಟನೆ ನಡೆಸಿ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಸುವರ್ಣ ಸೌಧದ ಬಳಿ ಇರುವ ಸುವರ್ಣ ಗಾರ್ಡನ್?ನಲ್ಲಿ ಸಾವಿರಾರು ಸಂಖ್ಯೆಯಲ್ಲಿ ಜಮಾಯಿಸಿದ್ದ ಅತಿಥಿ ಶಿಕ್ಷಕರು ಸರ್ಕಾರ ನಮ್ಮ ಆಶೋತ್ತರಗಳಿಗೆ ಸ್ಪಂದಿಸುತ್ತಿಲ್ಲ. ರಾಜ್ಯದಾದ್ಯಂತ 45,000ಕ್ಕೂ ಹೆಚ್ಚಿನ ಸಂಖ್ಯೆಯಲ್ಲಿ ನಾವು ಅತಿಥಿ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿದ್ದೇವೆ. ನಮ್ಮ ಸಮಸ್ಯೆಗಳನ್ನು ಪರಿಹರಿಸಲು ಹಲವಾರು ಬಾರಿ ಸಂಬಂಧಿಸಿದ ಅಧಿಕಾರಿಗಳಿಗೆ, ಸಚಿವ-ರಿಗೆ ಮನವಿ ಸಲ್ಲಿಸಿದರೂ ಯಾವುದೇ ಪ್ರಯೋಜನವಾಗಿಲ್ಲ ಎಂದು ತಮ್ಮ ಅಳಲು ತೋಡಿಕೊಂಡರು.

ನಿರಂತರವಾಗಿ 13 ವರ್ಷಗಳಿಂದಲೂ ಈ ವೃತ್ತಿಯೇ ನಮ್ಮ ಬದುಕಿಗೆ ಆಧಾರವಾಗಿದೆ. ಆದರೆ ಇದನ್ನೇ ನಂಬಿಕೊಂಡ ನಮಗೆ ಯಾವುದೇ ರೀತಿಯ ಉದ್ಯೋಗ ಭದ್ರತೆ ಸೇರಿದಂತೆ ಕನಿಷ್ಠ ವೇತನವಾಗಲೀ ನೀಡದೆ 9 ತಿಂಗಳ ಬಳಿಕ ಮತ್ತೆ ಬೇರೆಡೆಗೆ ಕೆಲಸಕ್ಕೆ ಅಲೆದಾಡುವ ಸ್ಥಿತಿಗೆ ಸರ್ಕಾರ ನಮ್ಮನ್ನು ತಂದೊಡ್ಡಿದೆ ಎಂದು ಪ್ರತಿಭಟನಾಕಾರರು ದೂರಿದರು.

ನಮಗೆ ಸರ್ಕಾರ ನೀಡುವ 10 ಸಾವಿರ ರೂ ಹಣದಲ್ಲಿ ಜೀವನ ಸಾಗಿಸುವುದು ದುಸ್ತರವಾಗಿದೆ. ಪ್ರತಿವರ್ಷ ತಮಗೆ ಬೇಕಾದಾಗ ಸರ್ಕಾರ ನಮ್ಮನ್ನು ನೇಮಕ ಮಾಡಿಕೊಂಡು ಮಾರ್ಚ್ 31ಕ್ಕೆ ನಡುನೀರಿನಲ್ಲಿ ಕೈ ಬಿಡುತ್ತಿದೆ ಎಂದು ಸರ್ಕಾರದ ನಡೆಗೆ ಅಸಮಾಧಾನ ಹೊರಹಾಕಿದರು.

ಈ ವೇಳೆ ಸಂಘದ ರಾಜ್ಯಾಧ್ಯಕ್ಷ ಹಣಮಂತ ಎಚ್.ಎಸ್, ಗೌರವಾಧ್ಯಕ್ಷ ಅನಂತ ನಾಯ್ಕ್, ಉಪಾಧ್ಯಕ್ಷೆ ಲೋಲಾಕ್ಷಿ, ಪ್ರಧಾನ ಕಾರ್ಯದರ್ಶಿ ಬಸವರಾಜ ಕರಡಿ ಗುಡ್ಡ, ಜಂಟಿ ಕಾರ್ಯದರ್ಶಿ ಗಂಗಾಧರ ಕಟ್ಟೆ, ಖಜಾಂಚಿ ಸೌಮ್ಯ ಹೆಚ್.ಎಸ್ ಸೇರಿದಂತೆ ರಾಜ್ಯದ ವಿವಿಧ ಭಾಗಗಳಿಂದ ಆಗಮಿಸಿದ್ದ ಸಾವಿರಾರು ಅತಿಥಿ ಶಿಕ್ಷಕರು ಪ್ರತಿಭಟನೆಯಲ್ಲಿ ಭಾಗಿಯಾಗಿ ತಮ್ಮ ಬೇಡಿಕೆ ಈಡೇರಿಕೆಗೆ ಒತ್ತಾಯಿಸಿದರು.

ಲಕ್ಷ್ಮೀ ಹೆಬ್ಬಾಳ್ಕರ್ ವಿರುದ್ಧ ವಿಶೇಷ ಚೇತನರ ಆಕ್ರೋಶ: ಸುವರ್ಣ ಗಾರ್ಡನ್?ನಲ್ಲಿ ಪ್ರತಿಭಟನೆ



ನಡೆಸಿದ ನವ ಕರ್ನಾಟಕ ವಿಕಲಚೇತನರ ಗೌರವಧನ ಸಂಘದ ಕಾರ್ಯಕರ್ತರು, ವಿಕಲ ಚೇತನರ ಹಾಗೂ ಹಿರಿಯ ನಾಗರಿಕರ ಹಿತ ಕಾಪಾಡಲು ಸೇವೆ ಸಲ್ಲಿಸುತ್ತಿರುವ ಗ್ರಾಮೀಣ ಹಾಗೂ ನಗರ ಪುನರ್ವಸತಿ ಕಾರ್ಯಕರ್ತರ ಸೇವೆ ಖಾಯಂಗೊಳಿಸಬೇಕು ಎಂದು ಒತ್ತಾಯಿಸಿದರು.

ಕರ್ನಾಟಕ ರಾಜ್ಯದಲ್ಲಿ ವಿಕಲಚೇತನರು ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಅಧೀನದಲ್ಲಿ ಸುಮಾರು 6860 ತಾಲೂಕು ಪುನರ್ವಸತಿ ಕಾರ್ಯಕರ್ತರು, ಗ್ರಾಮೀಣ ಪುನರ್ವಸತಿ ಕಾರ್ಯಕರ್ತರು ಹಾಗೂ ನಗರ ಪುನರ್ವಸತಿ ಕಾರ್ಯಕರ್ತರು ಗೌರವಧನ ಆಧಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಆರಂಭಿಕ ದಿನಗಳಲ್ಲಿ ರೂ.750 ರಿಂದ ಆರಂಭಗೊಂಡ ಗೌರವಧನ ಪುನರ್ವಸತಿ ಕಾರ್ಯಕರ್ತರ ನಿರಂತರ ಹೋರಾಟಗಳ ಫಲದಿಂದಾಗಿ 2007 ರಲ್ಲಿ ರೂ. 3000, ಬಳಿಕ ರೂ. 6000 ಹಾಗೂ ಪ್ರಸ್ತುತ ರೂ. 9000ಕ್ಕೆ ಬಂದು ತಲುಪಿದೆ. ಇಷ್ಟೊಂದು ಕಡಿಮೆ ಗೌರವಧನ ಪಡೆಯುತ್ತಿದ್ದಾಗ್ಯೂ ಈ ಕಾರ್ಯಕರ್ತರು ಕಳೆದ 15 ವರ್ಷಗಳಿಂದ ಅತ್ಯಂತ ಪ್ರಮಾಣಿಕವಾಗಿ ಸೇವೆ ಸಲ್ಲಿಸುತ್ತಿದ್ದೇವೆ ಎಂದು ತಮ್ಮ ಅಳಲು ತೋಡಿಕೊಂಡರು.

ಪ್ರಮುಖವಾಗಿ ಅಂಗವಿಕಲರ ಹೆಸರಿನಲ್ಲಿ ಹಣ ನೀಡಿ ನಕಲಿ ದಾಖಲೆ ಪತ್ರಗಳನ್ನು ಸೃಷ್ಟಿಸುವ ಕೆಲಸ ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ನಡೆಯುತ್ತಿದೆ. ಈ ರೀತಿಯ ನಕಲಿ ವೈದ್ಯಕೀಯ ಪ್ರಮಾಣ ಪತ್ರ ಪಡೆದು ಉಚಿತ ಬಸ್ ಪಾಸ್, ಪಿಂಚಣಿ, ಸರ್ಕಾರಿ ನೌಕರಿ ಹೀಗೆ ಸರ್ಕಾರಿ ಸೌಲಭ್ಯಗಳನ್ನು ಪಡೆಯುವ ಕೆಲಸಗಳು ನಡೆಯುತ್ತಿವೆ ಎಂದು ಗಂಭೀರ ಆರೋಪ ಮಾಡಿದರು.

ಈ ರೀತಿಯ ಮೋಸದಿಂದ ನಿಜವಾದ ಅಂಗವಿಕಲರಿಗೆ ಅನ್ಯಾಯವಾಗುತ್ತಿದೆ. ಈ ಕೂಡಲೇ ಸರ್ಕಾರ ಇಂತಹ ಕೃತ್ಯವನ್ನು ತಡೆಯಲು ಮುಂದಾಗಬೇಕೆಂದು ಮನವಿ ಮಾಡಿದರು.

ಸರ್ಕಾರದ ಸೇವೆ ಸಲ್ಲಿಸುವ ಕಾರ್ಯಕರ್ತರು ಕೂಡ ವಿಕಲಚೇತನರೇ ಆಗಿದ್ದು, ಅತ್ಯಂತ ಕ್ಲಿಷ್ಟ ಪರಿಸ್ಥಿತಿಯಲ್ಲಿ ಗ್ರಾಮೀಣ ಹಾಗೂ ನಗರ ಭಾಗದಲ್ಲಿ ಕಾರ್ಯನಿರ್ವಹಿಸುತ್ತಾ ವಿಕಲಚೇತನರು ಹಾಗೂ ಹಿರಿಯ ನಾಗ-ರಿಕರ ಹಿತ ಕಾಯುವುದರಲ್ಲಿ ಮುಂಚೂಣಿ ಸೇವೆ ಸಲ್ಲಿಸುತ್ತಿದ್ದೇವೆ. ಅದಕ್ಕಾಗಿ ವಿಕಲಚೇತನ ಪುನರ್ವಸತಿ ಕಾರ್ಯಕರ್ತರ ಸೇವೆಯನ್ನು ಮುಖ್ಯಮಂತ್ರಿಗಳ ನೇತೃತ್ವದಲ್ಲಿ ಸರ್ಕಾರವು ಖಾಯಂಗೊಳಿಸುವ ಅಥವಾ ಈ ಕಾರ್ಯಕರ್ತರಿಗೆ ವೇತನ ಪದ್ಧತಿ ಜಾರಿಗೆ ತರುವ ಮೂಲಕ ನ್ಯಾಯ ಒದಗಿಸಬೇಕೆಂದು ಒತ್ತಾಯಿಸಿದರು.

ರಾಜ್ಯ ಸರ್ಕಾರವು ಅಧಿಕಾರಕ್ಕೆ ಬಂದ ಬಳಿಕ ಏಳನೇಯ ವೇತನ ಆಯೋಗದಲ್ಲಿ ರಾಜ್ಯ ಸರಕಾರಿ ನೌಕರರ ವೇತನದಲ್ಲಿ ಭಾರಿ ಹೆಚ್ಚಳ ಮಾಡಲಾಗಿದೆ. ಇದರ ಜೊತೆಗೆ ಗ್ರಾಮ ಪಂಚಾಯತ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರ ಗ್ರಂಥಾಲಯಗಳ ಮೇಲ್ವಿಚಾರಕರ ಕನಿಷ್ಠ ವೇತನ ಮತ್ತು ವ್ಯತ್ಯಾಸವಾಗುವ ತುಟ್ಟಿ ಭತ್ಯೆಯಲ್ಲಿ ಗಣನೀಯವಾಗಿ ಹೆಚ್ಚಳ ಮಾಡಲಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಪ್ರತಿಭಟನೆಯಲ್ಲಿ ರಾಜ್ಯದ ಹಲವು ಜಿಲ್ಲೆಗಳಿಂದ ಸಾವಿರಾರು ಸಂಖ್ಯೆಯಲ್ಲಿ ವಿಶೇಷಚೇತನರು ಭಾಗವಹಿಸಿದ್ದರು.

## ನಗರದ ಡಾ.ಪತ್ತಾರಗೆ ವಿಶ್ವಕರ್ಮ ವೈದ್ಯಭೂಷಣ ಪ್ರಶಸ್ತಿ



ಜಮಖಂಡಿ: ಬೆಳಗಾವಿ ಜಿಲ್ಲೆ ಸವದತ್ತಿಯ ಶಿರಸಂಗಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ವಿಶ್ವಕರ್ಮ ಸಮಾಜ ವಿಕಾಸ ಸಂಸ್ಥೆ ಶಿರಸಂಗಿ ಹಾಗೂ ವಿಶ್ವಕರ್ಮ ಪ್ರತಿಷ್ಠಾನ ಶಿರಸಂಗಿ ಹಮ್ಮಿಕೊಂಡಿದ್ದ ಸಾಧಕರಿಗೆ ಸನ್ಮಾನ ಸಮಾರಂಭದಲ್ಲಿ ನಗರದ ದಂತ ವೈದ್ಯ ಡಾ.ವಿದ್ಯಾದರ ಪತ್ತಾರ ಅವರಿಗೆ ವಿಶ್ವಕರ್ಮ ವೈದ್ಯಭೂಷಣ ಪ್ರಶಸ್ತಿ ನೀಡಿ ಗೌರವಿಸಲಾಗಿದೆ.

ನಗರದ ಸ್ಮೈಲ್ ಕೇರ್ ದಂತಾಲಯದ ದಂತತಜ್ಞ ಡಾ.ವಿದ್ಯಾದಾರ ಪತ್ತಾರ ವೈದ್ಯಕೀಯ ಕ್ಷೇತ್ರದಲ್ಲಿ ವಿಶೇಷ ಸೇವೆಯನ್ನು ಸಲ್ಲಿಸಿದ್ದಕ್ಕಾಗಿ ಲಭಿಸಿದೆ. ವಿಶೇಷ ಸಾಧನೆಗೆ ಸ್ಥಳೀಯ ಲಯನ್ಸ ಸಂಸ್ಥೆಯ ಪದಾಧಿಕಾರಿಗಳು ಲಯನ್ಸ ನಿರ್ದೇಶಕರು ಮತ್ತು ವಿವಿಧ ಸಂಘಟನೆಗಳು ಅಭಿನಂದಿಸಿದ್ದಾರೆ.

## ಡಾ.ಶ್ರೀದೇವಿಗೆ "ಕರ್ನಾಟಕ ಮುಕುಟಮಣಿ" ಪ್ರಶಸ್ತಿ



ಜಮಖಂಡಿ: ದಾವಣಗೆರೆಯ ಕಲಾಕುಂಚ ಸಾಂಸ್ಕೃತಿಕ ಸಂಸ್ಥೆ ಆಶ್ರಯದಲ್ಲಿ 69 ನೇ ಕನ್ನಡ ರಾಜ್ಯೋತ್ಸವ ನಿಮಿತ್ತ ಚನ್ನಗಿರಿ ವಿರೂಪಾಕ್ಷಪ್ಪಾ ಧರ್ಮಶಾಲಾ ಕಲ್ಯಾಣಮಂಟಪದ ಸಭಾಂಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸ್ಥಳೀಯ ಬಿ.ಎಲ್.ಡಿಇ.ಸಂಸ್ಥೆ ಕಾನೂನು ಕಾಲೇಜಿನ ಸಹಾಯಕ ಪ್ರಾಧ್ಯಾಪಕಿ ಡಾ.ಶ್ರೀದೇವಿ ಸುವರ್ಣಖಂಡಿ ಪ್ರಶಸ್ತಿ ಲಭಿಸಿದೆ.

ಪ್ರಶಸ್ತಿ ಪುರಸ್ಕೃತ ಡಾ.ಶ್ರೀದೇವಿ ಅವರಿಗೆ ಸ್ಥಳೀಯ ಸಾಹಿತ್ಯಬಳಗ, ಸಾಹಿತ್ಯಸೌರಭ ವೇದಿಕೆ ಸಹಿತ ವಿವಿಧ ಸಂಘ ಸಂಸ್ಥೆಯವರು ಅಭಿನಂದಿಸಿದ್ದಾರೆ.

# ಸದಾ ಚಟುವಟಿಕೆಯ ಜೀವನ ಉತ್ತಮ ಆರೋಗ್ಯದ ಸಂಕೇತ



ಮುದ್ದೇಬಿಹಾಳ: ದಿನದ ಒಂದು ಗಂಟೆ ಯೋಗ, ಹತ್ತು ನಿಮಿಷ ಧ್ಯಾನ, ಜೀವನದ ಸಂತೃಪ್ತಿ, ಸದಾ ಚಟುವಟಿಕೆಯ ಜೀವನ ಉತ್ತಮ ಆರೋಗ್ಯದ ಸಂಕೇತವಾಗಿದೆ. ನಮ್ಮ ದೇಹದಲ್ಲಿ ಹರಿಯುವ ರಕ್ತ ತಿಳಿಯಾಗಿರಬೇಕಾದರೆ ನಮ್ಮ ನಾಲಿಗೆಯ ರುಚಿಯನ್ನು ರಾಡಿ ಮಾಡಿಕೊಳ್ಳಬಾರದು ಎಂದು ಖ್ಯಾತ ನೇತ್ರ ತಜ್ಞ, ವಿಜಯಪುರ ಅನುಗ್ರಹ ಕಣ್ಣಿನ ಆಸ್ಪತ್ರೆಯ ಮುಖ್ಯಸ್ಥ ಡಾ। ಪ್ರಭುಗೌಡ ಲಿಂಗದಳ್ಳಿ (ಚಬನೂರ) ಹೇಳಿದರು.

ಇಲ್ಲಿನ ಹುಡ್ಕೋದಲ್ಲಿರುವ ಗವಿಸಿದ್ದೇಶ್ವರ ವೇದಿಕೆಯಲ್ಲಿ ಯೋಗೋತ್ಸವ ಸಮಿತಿ ನೇತೃತ್ವದಲ್ಲಿ 11 ದಿನಗಳವರೆಗೆ ನಡೆದು ಬುಧವಾರ ರಾತ್ರಿ ಮುಕ್ತಾಯಗೊಂಡ ನಿರಂಜನ ಸ್ವಾಮೀಜಿಯವರ ಹಿಮಾಲಯನ್ ಯೋಗಧ್ಯಾನ, ಸಾಮೂಹಿಕ ಭಜನೆ, ಆಧ್ಯಾತ್ಮಿಕ ಪ್ರವಚನ ಶಿಬಿರ ಸಮಾರೋಪದ ಮುಖ್ಯ ಅತಿಥಿಯಾಗಿ ಅವರು ಮಾತನಾಡಿದರು.

ಆರೋಗ್ಯದ ದೇಹ ಆತ್ಮಕ್ಕೆ ಅರಮನೆಯಾದರೆ ಅನಾರೋಗ್ಯದ ದೇಹ ಆತ್ಮದ ಸೆರೆಮನೆ. ಜಗತ್ತಿನಲ್ಲಿಯೇ ಅತಿ ಹೆಚ್ಚು ಹೃದ್ರೋಗಿಗಳು, ಮಧುಮೇಹಿಗಳು, ಲೀವರ್ ಸಮಸ್ಯೆಯಿರುವ ಮಕ್ಕಳು ಭಾರತದಲ್ಲಿದ್ದಾರೆ. ಬೆವರು ಸುರಿಸುವುದನ್ನು ಮರೆತು ಯಂತ್ರಗಳ ಮೊರೆ ಹೋಗಿರುವುದೇ ಇದಕ್ಕೆ ಕಾರಣ. ಯೋಗ, ಆಹಾರದಿಂದ ದೇಹದ ಸರ್ವಿಸ್ ಆಗಬೇಕು ಎಂದರು.

ಕಾಂಗ್ರೆಸ್ ಮುಖಂಡ, ಶಿಬಿರದ ಅನ್ನದಾಸೋಹಿ, ಅಸ್ಕಿ ಫೌಂಡೇಶನ್ ಅಧ್ಯಕ್ಷ ಸಿ.ಬಿ.ಅಸ್ಕಿಯವರು ಮಾತನಾಡಿ, ಕುಟುಂಬದಲ್ಲಿ ಅಡುಗೆಮನೆಯ ಉಸ್ತುವಾರಿ ಹೊಂದಿರುವ ಮಹಿಳೆಯರು ಆರೋಗ್ಯವೇ ಭಾಗ್ಯ ಎನ್ನುವ ಮಾತು ನಿಜವಾಗಿಸುವಲ್ಲಿ ಮಹತ್ವದ ಪಾತ್ರ ವಹಿಸುವಂಥವರು. ನಮ್ಮ ಬೆಳಗಿನ ಆಹಾರದಲ್ಲಿ ಇಡ್ಲಿ, ದೋಸೆ ಬದಲು ಮೊಳಕೆಯೊಡೆದ ಕಾಳು, ಉಪ್ಪಿಟ್ಟು, ಮದ್ಯಾಹ್ನದ ಊಟದಲ್ಲಿ ತರಕಾರಿ, ಗಜ್ಜರಿ, ಸವತಿಕಾಯಿ ಇರಬೇಕು. ಇದರ ಜೊತೆಗೆ ಕುಟುಂಬದಲ್ಲಿ ಒಗ್ಗಟ್ಟೂ ಇರಬೇಕು ಎಂದರು.

ಮುಖ್ಯಾಧ್ಯಾಪಕ ರುದ್ರೇಶ ಕಿತ್ತೂರ ಮಾತನಾಡಿ, ನಿರಂಜನ ಸ್ವಾಮೀಜಿಯವರು ಸಿದ್ದೇಶ್ವರ ಸ್ವಾಮೀಜಿಯವರಂತೆ ಸಮಯ ಪರಿಪಾಲಕರಾಗಿದ್ದು ಜೇಬಿಲ್ಲದ ಸಂತ, ಜೋಳಿಗೆಯಿಲ್ಲದ ಜಂಗಮ ಎನ್ನಿಸಿಕೊಂಡಿದ್ದಾರೆ. ಬೀದರ್‌ನಿಂದ ಪ್ರಾರಂಭಿಸಿರುವ ಅವರ ಈ ಕೈಂಕರ್ಯ 250ಕ್ಕೂ ಹೆಚ್ಚು ಸ್ಥಳಗಳಲ್ಲಿ ನಡೆದು ಮುಂದುವರಿದಿದೆ. ದಿನಕ್ಕೆ ಒಂದು ಬಾರಿ ಮಾತ್ರ ಘನ ಆಹಾರ ಸೇವಿಸಿ ಇನ್ನುಳಿದ ವೇಳೆ ದ್ರವಪದಾರ್ಥ ಸೇವಿಸುವ ಸ್ವಾಮೀಜಿಯವರು ಹಿಮಾಲಯದಲ್ಲಿ 6 ವರ್ಷ ಅಲ್ಲಿನ ಸನ್ಯಾಸಿಗಳೊಂದಿಗೆ, ಯೋಗಸಾಧಕರೊಂದಿಗೆ ಬೆರೆತು ಕಲಿತ ವಿದ್ಯೆಯನ್ನು ಜನರಿಗೆ ಕಲಿಸಿಕೊಡುತ್ತ ಲೋಕಸಂಚಾರಿಯಾಗಿದ್ದಾರೆ. ಇವರ ಮುಂದಿನ ಶಿಬಿರ ಕೊಲ್ಲಾರದಲ್ಲಿ ನಡೆಯುತ್ತದೆ ಎಂದರು.

ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಕಾಮರಾಜ ಬಿರಾದಾರ ಮಾತನಾಡಿ ಶಿಬಿರದಿಂದ ನಮ್ಮೂರಿನ ಜನರು ಸಾಕಷ್ಟು ಪ್ರಯೋಜನ ಪಡೆದುಕೊಂಡಿದ್ದಾರೆ. ನಾನು ಎನ್ನುವುದನ್ನು ತೊರೆದರೆ ಬಾಳು ಸುಖಮಯ ಎನ್ನುವುದನ್ನು ಸ್ವಾಮೀಜಿಯವರು ತಿಳಿಸಕೊಟ್ಟಿದ್ದಾರೆ. ಧ್ಯಾನಯೋಗದ ಅಂಶಗಳನ್ನು ನಿತ್ಯವೂ ಪಾಲಿಸಿದರೆ ಆರೋಗ್ಯ ಗಟ್ಟಿಯಾಗಿರುತ್ತದೆ ಎಂದರು.

ನಿರಂಜನ ಸ್ವಾಮೀಜಿಯವರು ಸಾನಿಧ್ಯ ವಹಿಸಿದ್ದರು. ವೀರಶೈವ ಲಿಂಗಾಯತ ಸಮಾಜದ ಅಧ್ಯಕ್ಷ ಪ್ರಭುರಾಜ ಕಲಬುರ್ಗಿ, ಪುರಸಭೆ ಅಧ್ಯಕ್ಷ ಮಹಿಬೂಬ ಗೊಳಸಂಗಿ, ತಾಲೂಕು ಕುರುಬರ ಸಂಘದ ಅಧ್ಯಕ್ಷರು ಅಭ್ಯುದಯ ಸೈನ್ಸ್ ಪಿಯು ಕಾಲೇಜಿನ ಕಾರ್ಯದರ್ಶಿಗಳಾದ ಎಂ.ಎನ್.ಮದರಿ ವೇದಿಕೆಯಲ್ಲಿದ್ದರು.

ಡಾ। ರಾಜೇಶ್ವರಿ ಗೂಳಿ, ಪ್ರಭು ಕಡಿ, ಅನ್ನಪೂರ್ಣ ಕಿತ್ತೂರ, ಬಸವರಾಜ ಹುನಗುಂದ, ಬಿ.ಎಸ್. ಮೇಟಿ ಇನ್ನಿತರರು ಅನಿಸಿಕೆ ವ್ಯಕ್ತಪಡಿಸಿದರು. ಪುರಸಭೆ ಸದಸ್ಯ ಅಶೋಕ ವನಹಳ್ಳಿ, ಮಾಜಿ ಸದಸ್ಯ ರಾಜು ಬಳ್ಳೊಳ್ಳಿ, ರಾಜಶೇಖರ ಮ್ಯಾಗೇರಿ, ಶರಣು ಪಡದಾಳಿ, ಸುಮನ್ ಪತ್ತಾರ, ಬಸವರಾಜ ರಾಮೋಡಗಿ, ಹಣಮಂತ್ರಾಯ ದೇವರಳ್ಳಿ, ಶಿವು ಕೊಣ್ಣೂರ, ವಸಂತ ಬಿರಾದಾರ ಸೇರಿ ಹಲವರು ಶಿಬಿರದಲ್ಲಿ ಸಲ್ಲಿಸಿದ ನಿಸ್ವಾರ್ಥ ಸೇವೆಯನ್ನು ಸ್ಮರಿಸಲಾಯಿತು. ಸಂಗಮೇಶ ಶಿವಣಗಿ, ಶಿವಲಿಂಗಪ್ಪ ಹೂಗಾರ ತಂಡದವರು ಪ್ರಾರ್ಥಿಸಿ ಸಂಗೀತ ಸೇವೆ ನೀಡಿದರು. ಆರ್.ಜಿ.ಕಿತ್ತೂರ ಸ್ವಾಗತಿಸಿದರು. ನಿವೃತ್ತ ಶಿಕ್ಷಕ ಎಸ್.ಎ.ಬೇವಿನಗಿಡದ ನಿರೂಪಿಸಿದರು. ಸಂಗಮ್ಮ ದೇವರಳ್ಳಿ ವಂದಿಸಿದರು.

# 21 ರಿಂದ ಮೂರು ದಿನಗಳ ತೋಟಗಾರಿಕೆ ಮೇಳ



ಬಾಗಲಕೋಟೆ: : ತೋಟಗಾರಿಕೆ ವಿವಿಯ ಉದ್ಯಾನಗಿರಿಯಲ್ಲಿ ಆರ್ಥಿಕತೆ ಹಾಗೂ ಪೌಷ್ಟಿಕತೆಗಾಗಿ ತೋಟಗಾರಿಕೆ ಎಂಬ ಧ್ಯೇಯ ವಾಕ್ಯದೊಂದಿಗೆ ಡಿಸೆಂಬರ 21 ರಿಂದ 23 ವರೆಗೆ ಮೂರು ದಿನಗಳ ಕಾಲ ತೋಟಗಾರಿಕೆ ಮೇಳ-2024 ಹಮ್ಮಿಕೊಳ್ಳಲಾಗಿದೆ ಎಂದು ತೋವಿವಿಯ ಕುಲಪತಿ ಡಾ.ವಿಷ್ಣುವರ್ಧನ ಹೇಳಿದರು.

ತೋವಿವಿಯ ವಿಸ್ತರಣಾ ನಿರ್ದೇಶನಾಲಯದಲ್ಲಿ ಗುರುವಾರ ಕರೆಯಲಾಗಿದ್ದ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು ಪ್ರತಿ ತೋಟಗಾರಿಕೆ ಮೇಳವು ರೈತರಲ್ಲಿ ಅಪೇಕ್ಷಿತ ಧನಾತ್ಮಕ ಬದಲಾವಣೆ ತರುವ ಅವಕಾಶವನ್ನು ಒದಗಿಸುತ್ತಿದ್ದು, ಪ್ರತಿ ವರ್ಷ ಒಂದೊಂದು ಧ್ಯೇಯ ವಾಕ್ಯಗಳೊಂದಿಗೆ ತೋಟಗಾರಿಕೆ ಮೇಳ ಆಚರಿಸುತ್ತಾ ಬರಲಾಗಿದೆ. ಮೂರು ದಿನಗಳ ಕಾಲ ನಡೆಯುವ ಈ ಮೇಳದಲ್ಲಿ ವಿಶ್ವ ವಿದ್ಯಾಲಯದ ವ್ಯಾಪ್ತಿಯ 24 ಜಿಲ್ಲೆಗಳಿಂದ ಗುರುತಿಸಲ್ಪಟ್ಟ ಸಾಧಕ ರೈತರಾದ ಫಲಶ್ರೇಷ್ಟರನ್ನು ತೋಟಗಾರಿಕೆ ಮೇಳದ ಮೂರು ದಿನಗಳಲ್ಲಿ ಸನ್ಮಾನಿಸಲಾಗುತ್ತಿದೆ ಎಂದು ತಿಳಿಸಿದರು.

ಪ್ರತಿ ತೋಟಗಾರಿಕೆ ಮೇಳವು ರೈತರಲ್ಲಿ ಧನಾತ್ಮಕ ಬದಲಾವಣೆ ತರುವ ಒಂದು ಅವಕಾಶವನ್ನು ಒದಗಿಸುತ್ತಿದ್ದು, ಪ್ರತಿ ವರ್ಷವು ಮೇಳವು ಉದ್ದೇಶಿತ ಧ್ಯೇಯವನ್ನು ಹೊಂದಿದೆ. ಪೌಷ್ಟಿಕತೆಗಾಗಿ ತೋಟಗಾರಿಕೆ ಬೆಳೆಗಳು, ಸಸ್ಯ ಸಂರಕ್ಷಣೆಯಲ್ಲಿ ಡ್ರೋನಗಳ ಬಳಕೆ, ತೋಟಗಾರಿಕೆಯಲ್ಲಿ ನಿಖರ ಬೇಸಾಯ, ಸಂರಕ್ಷಿತ ಬೇಸಾಯ, ನೀರು ಸಂರಕ್ಷಣೆಗಾಗಿ ತಂತ್ರಜ್ಞಾನ, ಆರ್ಥಿಕತೆಗಾಗಿ ಪರ್ಯಾಯ ಬೆಳೆಗಳ ಆಯ್ಕೆ, ಸ್ವಯಂ ಚಾಲಿತ ನೀರಾವರಿ ವ್ಯವಸ್ಥೆ ಮತ್ತು ರಸಾವರಿ ಮಾದರಿ ಮುಂತಾದ ಧ್ಯೇಯಗಳಿಟ್ಟುಕೊಂಟು ಹಿಂದಿನ ವರ್ಷಗಳಲ್ಲಿ ಆಚರಿಸಿದ ಮೇಳಗಳಲ್ಲಿ ಭಾಗವಹಿಸಿ ಲಕ್ಷಾನುಗಟ್ಟಲೇ ರೈತರು ರೈತ ಉದ್ಯಮಿಗಳು, ಭಾಗಿದಾರರಿಗೆ ಮತ್ತು ಸಾರ್ವಜನಿಕರಿಗೆ ಸಾಕಷ್ಟು ಪ್ರಯೋಜನಗಳನ್ನು ನೀಡಿವೆ ಎಂದು ಹೇಳಿದರು.

ಮೇಳದಲ್ಲಿ ವಿಶೇಷವಾಗಿ ಖುಷ್ಕಿ ತೋಟಗಾರಿಕೆಯ ಪ್ರಾತ್ಯಕ್ಷಿಕೆಗಳು, ಸರ್ಕಾರಿ ಮತ್ತು ಖಾಸಗಿ ಸಹಭಾಗಿತ್ವದಲ್ಲಿ ಮುಖ್ಯ ತೋಟಗಾರಿಕೆ ಬೆಳೆಗಳ ಸಮುಚ್ಛಯಗಳನ್ನು ಏರ್ಪಡಿಸಲಾಗಿದೆ. ದಾಳಿಂಬೆ, ದ್ರಾಕ್ಷಿ ಬೆಳೆ, ತೋಟಪಟ್ಟಿ, ಔಷಧಿ ಮತ್ತು ಸುಗಂಧದ್ರವ್ಯ ಬೆಳೆಗಳ ಸಮುಚ್ಛಯ, ಡಿಜಿಟಲ್ ತೋಟಗಾರಿಕೆ ತಂತ್ರಜ್ಞಾನಗಳ ಸಮುಚ್ಛಯ, ಮೈಕ್ರೋಗ್ರಿನ್ಸ್ ತಂತ್ರಜ್ಞಾನ, ಹೊಸ ತೋಟಗಾರಿಕೆ ಬೆಳೆಗಳ ಮಾಹಿತಿ ಕೇಂದ್ರ, ಆನ್‌ಲೈನ್ ಮೂಲಕ ಸಮಗ್ರ ದಿಢೀರ ಮಾಹಿತಿ ಕೊಡುವ ಕ್ಯೂಆರ್ ಕೋಡ್‌ಗಳನ್ನು ಆಯಾ ಪ್ರಾತ್ಯಕ್ಷಿಕೆಗಳಲ್ಲಿ ಅಳವಡಿಸಲಾಗಿದೆ ಎಂದರು.

ತೋಟಗಾರಿಕೆಯ ತರಕಾರಿ ಬೆಳೆಗಳ, ಹೂವಿನ, ಹಣ್ಣಿನ ವಿವಿಧ ತಳಿಗಳ, ಕೊಯ್ಲೋತ್ತರ ತೋಟಗಾರಿಕಾ ಉತ್ಪನ್ನಗಳ ಪ್ರದರ್ಶನ, ಕ್ಷೇತ್ರ ಭೇಟಿ, ಪ್ರಾತ್ಯಕ್ಷಿಕೆ, ಭಿತ್ತಿಚಿತ್ರ, ವಿಡಿಯೋ ಮುಂತಾದವುಗಳ ಮೂಲಕ ತಂತ್ರಜ್ಞಾನದ ಮಾಹಿತಿ ನೀಡಲಾಗುತ್ತದೆ. ಸಮಗ್ರ ಕೃಷಿ ಪದ್ದತಿಯ ಅಡಿಯಲ್ಲಿ ಕೃಷಿ ಮತ್ತು ಕೃಷಿಯೇತರ ಚಟುವಟಿಕೆಗಳ ಸಮಗ್ರ ಮಾಹಿತಿಯು ದೊರೆಯತ್ತದೆ, ವಿಜ್ಞಾನಿಗಳು, ಪ್ರಗತಿಪರ ರೈತ, ರೈತ ಉದ್ಯಮಿಗಳು ಮುಂತಾದವರನ್ನು ನೇರವಾಗಿ ಭೇಟಿಯಾಗಿ ಅವರ ಯಶೋಗಾಥೆಗಳಿಂದ ಪ್ರೇರಣೆ ಪಡೆಯುವದಲ್ಲದೇ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಬಹುದಾಗಿದೆ. ತೋಟಗಾರಿಕೆ ಮೇಳದಲ್ಲಿ ಪರಸ್ಪರ, ಗುಂಪು ಮತ್ತು ಸಮೂಹ ಸಂವಹನದ ಮೂರು ಪ್ರಕಾರಗಳನ್ನು ಉಪಯೊಗಿಸಲಾಗುತ್ತಿದೆ. ಇದರಿಂದ ತಂತ್ರಜ್ಞಾನದ ಅಳವಡಿಕೆಗೆ ಪ್ರೋತ್ಸಾಹಿಸಿದಂತಾಗುತ್ತದೆ ಎಂದು ತಿಳಿಸಿದರು.

ತೋಟಗಾರಿಕೆ ಮೇಳವು ಪ್ರಸಾರದ ಅತ್ಯಂತ ಪರಿಣಾಮಕಾರಿ ವಿಧಾನವಾಗಿದೆ. ಈ ನಿಟ್ಟಿನಲ್ಲಿ ಒಂದೇ ಸೂರಿನಡಿಯಲ್ಲಿ ಪ್ರತಿ ವರ್ಷ ರೈತ ಸಮುದಾಯಕ್ಕೆ ನವೀನ, ಸಮಯೋಜಿತ ತಂತ್ರಜ್ಞಾನಗಳನ್ನು ವರ್ಗಾವಣೆ ಮಾಡಲು ತೋಟಗಾರಿಕೆ ಮೇಳವನ್ನು ಆಯೋಜಿಸಲಾಗುತ್ತಿದ್ದು, ಈ ಮೇಳದ ಆಯೋಜನೆಯ ಮುಖಾಂತರ ವಿಶ್ವವಿದ್ಯಾಲಯದ ಮುಖ್ಯ ಉದ್ದೇಶಗಳಲ್ಲೊಂದಾದ ತಂತ್ರಜ್ಞಾನದ ವರ್ಗಾವಣೆಯು ಯಶಸ್ವಿಯಾಗುವುದು. ಮೇಳದ ಪ್ರತಿದಿನವೂ ಸಾಧಕ ರೈತರ ತಮ್ಮ ಅನುಭವಗಳನ್ನು ಇತರೇ ರೈತರಿಗೆ ಹಂಚಿಕೊಳ್ಳಲಿದ್ದಾರೆ. ಜೊತೆಗೆ ವಿಜ್ಞಾನಿಗಳು, ಪ್ರಗತಿಪರ ರೈತರು ಮತ್ತು ಇತರೇ ರೈತರೊಂದಿಗೆ ಸಂವಾದ ಕಾರ್ಯಕ್ರಮವನ್ನು ಏರ್ಪಡಿಸಲಾಗುತ್ತಿದೆ. ಮೇಳದಲ್ಲಿ 200ಕ್ಕೂ ಹೆಚ್ಚು ಮಳಿಗೆಗಳನ್ನು ಹಾಕಲಾಗುತ್ತಿದೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ತೋಟಗಾರಿಕೆ ವಿವಿಯ ಸಂಶೋಧನಾ ನಿರ್ದೇಶಕ ಹಾಗೂ ಮೇಳದ ಅಧ್ಯಕ್ಷ ಡಾ.ಟಿ.ಬಿ.ಅಳ್ಳೊಳ್ಳಿ, ಶಿಕ್ಷಣ ನಿರ್ದೇಶಕ ಡಾ.ಎನ್.ಕೆ.ಹೆಗಡೆ, ಕುಲಸಚಿವ ಮಹಾದೇವ ಮುರಗಿ, ಪ್ರಚಾರ ಸಮಿತಿಯ ಅಧ್ಯಕ್ಷ ರಾಮಚಂದ್ರ ನಾಯಕ, ಉಪಾಧ್ಯಕ್ಷ ಶಶಿಕುಮಾರ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಕಾಡಾನೆ ದಾಳಿ ತಡೆಗೆ ಕ್ರಮ

## ಆನೆ ಕಾರ್ಯ ಪಡೆ -ಕ್ಷಿಪ್ರ ಸ್ಪಂದನ ತಂಡಗಳ ರಚನೆ-ಸಚಿವ ಈಶ್ವರ ಬಿ.ಖಂಡ್ರೆ

ಬೆಳಗಾವಿ ಸುವರ್ಣಸೌಧ,ಡಿ. :ಕಾಡಾನೆಗಳು ಹಿಂಡು ಹಿಂಡಾಗಿ ಜನವಸತಿ ಪ್ರದೇಶಗಳಿಗೆ ಬಂದು ರೈತರ ಬೆಳಗಳನ್ನು ನಾಶ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಇದನ್ನು ತಡೆಯಲು ಆನೆ ಕಾರ್ಯ ಪಡೆ, ಕ್ಷಿಪ್ರ ಸ್ಪಂದನ ತಂಡ ಮತ್ತು ಹಿಮ್ಮೆಟಿಸುವ ಶಿಬಿರ ತಂಡಗಳನ್ನು ರಚನೆ ಮಾಡಲಾಗಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಹೇಳಿದರು. ಅವರು ಬೆಳಗಾವಿ ಸುವರ್ಣಸೌಧದಲ್ಲಿ ನಡೆಯುತ್ತಿರುವ ಚಳಿಗಾಲದ ಅಧಿವೇಶನದಲ್ಲಿ ಗುರುವಾರ ಶಾಸಕರುಗಳ ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಉತ್ತರಿಸಿ ಮಾತನಾಡಿದರು.

ಹಾಸನ, ಚಿಕ್ಕಮಗಳೂರು, ಮೈಸೂರು, ಕೊಡಗು, ಚಾಮರಾಜನಗರ, ರಾಮನಗರ ಹಾಗೂ ಬೆಂಗಳೂರು ಜಿಲ್ಲೆಗಳಲ್ಲಿ ಕಾಡಾನೆ ಹಾವಳಿ ತಡೆಯಲು ಪ್ರತಿ ಜಿಲ್ಲೆಗೆ ಒಂದರಂತೆ ಅಧಿಕಾರಿ ಹಾಗೂ ಸಿಬ್ಬಂದಿನ್ನೊಳಗೊಂಡ 8 ಆನೆ ಕಾರ್ಯಪಡೆ ರಚಿಸಲಾಗಿದೆ. ಇತರೆ ವನ್ಯಪ್ರಾಣಿಗಳ ಹಾವಳಿಯನ್ನು ನಿಯಂತ್ರಿಸಲು ತಲಾ 04 ಜನರ ತಂಡದಂತೆ 95 ಹಿಮ್ಮೆಟ್ಟಿಸುವ ತಂಡ ಹಾಗೂ 33 ಕ್ಷಿಪ್ರ ಸ್ಪಂದನೆ ತಂಡಗಳು ರಚಿಸಲಾಗಿದೆ. ಈ ತಂಡಗಳು ರಾತ್ರಿ ಗಸ್ತು ಕಾರ್ಯಕ್ಕೆಗೊಂಡು ಪ್ರತಿನಿತ್ಯ ಕಾಡಾನೆಗಳಿರುವ ಪ್ರದೇಶಗಳಿಗೆ ಭೇಟಿ ನೀಡಿ, ಸ್ಥಳೀಯ ಸಾರ್ವಜನಿಕರನ್ನು ಸಂಪರ್ಕಿಸಿ, ಆನೆಗಳ ಚಲನ-ವಲನಗಳ ಮಾಹಿತಿಯನ್ನು ನೀಡಿ, ಎಚ್ಚರಿಕೆಯಿಂದ ಇರುವಂತೆ ಧ್ವನಿವರ್ಧಕ ಮೂಲಕ ಮಾಹಿತಿ ನೀಡುವ ಕಾರ್ಯ ಮಾಡಲಾಗುತ್ತಿದೆ ಎಂದು ತಿಳಿಸಿದರು.

ತಂತ್ರಜ್ಞಾನ ಬಳಕೆ: ರೇಡಿಯೋ ಕಾಲರ್ ಅಳವಡಿಸಿರುವ ಕಾಡಾನೆಗಳ ಚಲನವಲನಗಳನ್ನು ಗಮನಿಸಲು 'ಹೆಜ್ಜೆ' ಎಂಬ ಡ್ಯಾಶ್ ಬೋರ್ಡ್ನ್ನು ಅರಣ್ಯ ಇಲಾಖೆ ರೂಪಿಸಿದೆ. ಕಾಡಂಚಿನ ಗ್ರಾಮಗಳಲ್ಲಿ ವನ್ಯಪ್ರಾಣಿಗಳು ಎಚ್ಚರಿಕೆ ಹಾಗೂ ಮಾಹಿತಿ ನೀಡಲು ಅಡ್ವಾನ್ಸ್ ಅಲರ್ಟ್ ಸಿಸ್ಟಂ ರಚಿಸಲಾಗಿದೆ. ಕಾಡಾನೆಗಳು ಸಂಚರಿಸುವ ಪ್ರದೇಶಗಳಲ್ಲಿ ಡಿಜಿಟಲ್ ಸೂಚನಾ ಫಲಕಗಳನ್ನು ಅಳವಡಿಸಲಾಗಿದೆ. ಅರಣ್ಯ ಅಂಚಿನ ಪ್ರದೇಶಗಳಲ್ಲಿ ಕೃತಕ ಬುದ್ದಿಮತ್ತೆ (ಎಐ) ಆಧಾರಿತ ಕ್ಯಾಮೆರಾಗಳನ್ನು ಹಾಗೂ ಡ್ರೋಣ್ ಕ್ಯಾಮೆರಾಗಳನ್ನು ಬಳಸಲಾಗುತ್ತಿದೆ. ಆಕಾಶವಾಣಿ ಮುಖಾಂತರ ಹಾಗೂ ವಾಟ್ಸಾಪ್ ಗ್ರೂಪ್‌ಗಳಲ್ಲಿ ಸಂದೇಶಗಳನ್ನು ರವಾನಿಸಲಾಗುತ್ತಿದೆ ಎಂದು ಸಚಿವ ಈಶ್ವರ ಬಿ ಖಂಡ್ರೆ ಮಾಹಿತಿ ನೀಡಿದರು. ಪರಿಹಾರ ಧನ ವಿತರಣೆ: ಕಾಡಾನೆ ದಾಳಿ ಸೇರಿದಂತೆ ಯಾವುದೇ ವನ್ಯಪ್ರಾಣಿ ದಾಳಿಯಿಂದ ಮೃತಪಟ್ಟವರ ಕುಟುಂಬಗಳಿಗೆ ಈ ಹಿಂದೆ ಸರ್ಕಾರ ನೀಡುತ್ತಿದ್ದ ಪರಿಹಾರ ಧನವನ್ನು ರೂ.7.5 ಲಕ್ಷದಿಂದ 15 ಲಕ್ಷಕ್ಕೆ ಏರಿಸಲಾಗಿದೆ. ಇದರೊಂದಿಗೆ ಮೃತಪಟ್ಟ ಹಾಗೂ ಶಾಶ್ವತ ಅಂಗವಿಕಲತೆ ಹೊಂದಿದ ಕುಟುಂಬದವರಿಗೆ 5 ವರ್ಷಗಳವರೆಗೆ ಪ್ರತಿಗಳು ರೂ.4 ಸಾವಿರ ಮಾಸಾಶನ ನೀಡಲಾಗುವುದು. ಶಾಶ್ವತ ಅಂಗವಿಕಲತೆ ಉಂಟಾದರೆ ರೂ.10 ಲಕ್ಷ, ಭಾಗಶಃ ಅಂಗವಿಕಲತೆಗೆ ರೂ.5 ಲಕ್ಷ, ಗಾಯಗೊಂಡರೆ ರೂ.60 ಸಾವಿರ, ಆಸ್ತಿ ನಷ್ಟಕ್ಕೆ ರೂ.20 ಸಾವಿರ ಪರಿಹಾರ ಧನ ವಿತರಣೆ ಮಾಡಲಾಗುತ್ತಿದೆ. ಇದರೊಂದಿಗೆ ಬೆಳೆಹಾನಿಯಾದರೆ ನಿಯಾಮನುಸಾರ ಪರಿಹಾರ ವಿತರಿಸಲಾಗುವುದು ಎಂದು ಸಚಿವ ಈಶ್ವರ ಬಿ ಖಂಡ್ರೆ ಹೇಳಿದರು.

ಬೇಲೂರು ಕ್ಷೇತ್ರ ವ್ಯಾಪ್ತಿಯಲ್ಲಿ ಕಾಡಾನೆ ದಾಳಿಗೆ 4 ಜನರು ಬಳಿಯಾಗಿದ್ದು, ಸರ್ಕಾರದ ಆದೇಶದಂತೆ 2021-22ನೇ ಸಾಲಿನ ಪ್ರಕರಣಗಳಿಗೆ ರೂ.7.5 ಲಕ್ಷ ಹಾಗೂ 2023-24ನೇ ಸಾಲಿನ ಪ್ರಕರಣಗಳಿಗೆ ರೂ.15 ಲಕ್ಷದಂತೆ ಒಟ್ಟು ರೂ.45 ಲಕ್ಷ ಪರಿಹಾರ ವಿತರಿಸಲಾಗಿದೆ. ಇದೇ ಅವಧಿಯಲ್ಲಿ ಘಟಿಸಿದ 1468 ಬೆಳೆ ಹಾನಿ ಪ್ರಕರಣದಲ್ಲಿ ಒಟ್ಟು ರೂ.2.10 ಕೋಟಿ ಪರಿಹಾರ ನೀಡಲಾಗಿದೆ ಎಂದು ಶಾಸಕ ಸುರೇಶ್ ಹೆಚ್.ಕೆ. ಅವರ ಚುಕ್ಕೆ ಗುರುತಿನ ಪ್ರಶ್ನೆ 1098ಕ್ಕೆ ಸಚಿವರು ಸದನದಲ್ಲಿ ಸಚಿವ ಈಶ್ವರ ಖಂಡ್ರೆ ಉತ್ತರಿಸಿದರು.

ರೈಲ್ವೆ ಬ್ಯಾರಿಕೇಡ್ ನಿರ್ಮಾಣಕ್ಕೆ 500 ಕೋಟಿ ರೂ. ಪ್ರಸ್ತಾವ : ಕಾಡಾನೆಗಳು ರೈತರ ಜಮೀನುಗಳಿಗೆ ನುಗ್ಗಿ ಬೆಳೆ ಹಾನಿಯಾಗದಂತೆ ತಡೆಯಲು ರೈಲ್ವೇ ಹಳಿ ಬ್ಯಾರಿಕೇಡ್ ಅಳವಡಿಸಲಾಗುತ್ತಿದೆ. 08-ಆನೆಕಾರ್ಯಪಡೆ ರಚಿಸಿ, ಆನೆ ಕಾರ್ಯಾಚರಣೆ ಕೈಗೊಳ್ಳಲಾಗುತ್ತಿದೆ. ಆನೆಗಳನ್ನು ಹಿಮ್ಮೆಟ್ಟಿಸಲು ಎಸ್‌ಒಪಿ ರೂಪಿಸಿ, ಅದರನ್ವಯವೇ ಕಾರ್ಯಾಚರಣೆ ಮಾಡಲಾಗುತ್ತಿದೆ. ಈಗಾಗಲೆ ರಾಜ್ಯದಲ್ಲಿ 369 ಕಿ.ಮೀ. ರೈಲ್ವೆ ಹಳಿ ಬ್ಯಾರಿಕೇಡ್ ನಿರ್ಮಿಸಿದ್ದು, 60 ಕಿ.ಮೀ. ನಿರ್ಮಾಣ ಪ್ರಗತಿಯಲ್ಲಿದೆ. ಇನ್ನೂ 350 ಕಿ.ಮೀ. ರೈಲ್ವೆ ಬ್ಯಾರಿಕೇಡ್ ನಿರ್ಮಾಣ ಮಾಡಬೇಕಿದ್ದು, ಇದಕ್ಕಾಗಿ 500 ಕೋಟಿ ರೂ. ಗಳ ಬಿಡುಗಡೆಗೆ ಸರ್ಕಾರ ಪ್ರಸ್ತಾವನೆ ಸಲ್ಲಿಸಲಾಗಿದೆ. ಆನೆಗಳ ಚಲನ-ವಲನದ ಬಗ್ಗೆ ಅಧ್ಯಯನ ಕೈಗೊಂಡು ವರದಿ ಸಲ್ಲಿಸಲು ತಜ್ಞರ ಸಮಿತಿ ರಚಿಸಲಾಗಿದ್ದು, ವರದಿಯ ಆಧಾರದಲ್ಲಿ ಸರ್ಕಾರ ಮುಂಬರುವ ದಿನಗಳಲ್ಲಿ ಸೂಕ್ತ ಕ್ರಮ ಕೈಗೊಳ್ಳಲಿದೆ ಎಂದು ಸಚಿವ ಈಶ್ವರ ಖಂಡ್ರೆ ಸದನಕ್ಕೆ ಈ ಸಂದರ್ಭದಲ್ಲಿ ಮಾಹಿತಿ ನೀಡಿದರು.

ಕಲ್ಲುಕ್ವಾರಿಗಳಿಗೆ ಯಾವುದೇ ತೊಂದರೆ ನೀಡಿಲ್ಲ: ಮೀಸಲಿಟ್ಟ ಅರಣ್ಯ ಪ್ರದೇಶದಲ್ಲಿ ಕಲ್ಲು ಕ್ವಾರಿಗಳನ್ನು ನಡೆಸಲು ವನ ಸಂರಕ್ಷಣಾ ಮತ್ತು ಸಂವರ್ಧನೆ ಅಧಿನಿಯಮ-1980 ಹಾಗೂ 2023ರ ನಿಯಮಾನಸಾರ ತಿತಿತಿ.ಠಿಚಿಡುತಿಛಿ.ಟುಛಿ ವೆಬ್ ಪೋರ್ಟಲ್ ಮೂಲಕ ಪ್ರಸ್ತಾವನೆಯನ್ನು ಅಗತ್ಯ ದಾಖಲೆಗಳ ಮೂಲಕ ಸಲ್ಲಿಸಬೇಕು. ಮೀಸಲು ಅರಣ್ಯದಲ್ಲಿ ಗಣಿಗಾರಿಕೆ ಅವಕಾಶವಿಲ್ಲ. ಒಂದು ವೇಳೆ ಪರವಾನಿಗೆ ಪರ್ಯಾಯವಾಗಿ ಬೇರೆ ಭೂಮಿಯನ್ನು ಅರಣ್ಯ ಮೀಸಲು ಇಡಬೇಕು. ಈ ನಿಯಮಗಳ ಅನುಸಾರ ಪ್ರಸ್ತಾವನೆ ಸಲ್ಲಿಸಿ ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ ಪಡೆದು ಕಲ್ಲುಕ್ವಾರಿಗಳನ್ನು ನಡೆಸುತ್ತಿರುವವರಿಗೆ ಯಾವುದೇ ತೊಂದರೆ ನೀಡಿಲ್ಲ ಎಂದು ಬದಾಮಿ ಶಾಸಕ ಚಿಮ್ಮನಕಟ್ಟಿ.ಬಿ.ಬಿ ಅವರ ಚುಕ್ಕೆ ಗುರುತಿನ ಪ್ರಶ್ನೆ 1450ಕ್ಕೆ ಸಚಿವ ಈಶ್ವರ ಖಂಡ್ರೆ ಉತ್ತರಿಸಿದರು.

2 ಸಾವಿರ ಹೆ. ನಲ್ಲಿ ಆನೆಗಳ ವಿಹಾರಧಾಮ : ಕೊಡಗು ಮತ್ತು ಹಾಸನದಲ್ಲಿ ಕಾಡಾನೆಗಳ ಕಾಟ ನಿಯಂತ್ರಿಸಲು ಕೊಡಗು ಮತ್ತು ಹಾಸನ ಬಳಿ 2 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಆನೆಗಳ ವಿಹಾರಧಾಮ (ಎಲಿಫೆಂಟ್ ಸಾಫ್ಟ್ ರಿಲೀಸ್ ಸೆಂಟರ್) ಮಾಡುವ ಬಗ್ಗೆ ಚಿಂತನೆ ನಡೆದಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ವಿಧಾನಸಭೆಗೆ ತಿಳಿಸಿದರು. ಬೇಲೂರು ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಕಾಡಾನೆಗಳ ದಾಳಿಯಿಂದ ಹಾನಿಗೊಳಗಾದ ಮಾನವ ಪ್ರಾಣಹಾನಿ ಮತ್ತು ಮಾನವ ಗಾಯ ಪ್ರಕರಣಗಳಿಗೆ ಪರಿಹಾರ ಧನ ನೀಡಲಾಗುತ್ತಿದೆ ಎಂದರು. ಹಾಸನ ಜಿಲ್ಲಾ ವ್ಯಾಪ್ತಿಯ ಬೇಲೂರು ತಾಲ್ಲೂಕಿನ ಬಿಕ್ಕೋಡು ಹೋಬಳಿ ಗ್ರಾಮಗಳಲ್ಲಿ ಕಳೆದ 03 ತಿಂಗಳಿನಿಂದ ಕಾಡಾನೆಗಳು ಹಿಂಡು ಹಿಂಡಾಗಿ ಬಂದು ರೈತರ ಬೆಳೆಗಳನ್ನು ನಾಶ ಮಾಡುತ್ತಿವೆ, ಈ ಕಾಡಾನೆಗಳನ್ನು ಅರಣ್ಯ ಪ್ರದೇಶಗಳ ಕಡೆಗೆ ಹಿಮ್ಮೆಟಿಸಲು ಇಲಾಖಾ ವತಿಯಿಂದ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಶಾಸಕರ ಹೇಳಿಕೆ ದುರದೃಷ್ಟಕರ : ಆನೆಗಳಿಂದ ಕಾಡಿನಂಚಿನ ಜನರಿಗೆ ತೊಂದರೆ ಆಗುತ್ತಿದ್ದು, ರೈತರಿಗೆ ಕೋವಿ ಪಡೆಯಲು ಪರವಾನಗಿ ನೀಡಿ, ಆನೆಗಳನ್ನು ಕೊಲ್ಲಲು ಅನುಮತಿ ನೀಡಿ ಎಂದು ಬೆಳ್ತಂಗಡಿ ಶಾಸಕ ಹರೀಶ್ ಪೂಂಜಾ ಅವರು ನೀಡಿದ ಹೇಳಿಕೆ ದುರದೃಷ್ಟಕರ. ಜವಾಬ್ದಾರಿಯುತ ಸ್ಥಾನದಲ್ಲಿರುವವರು ಈ ರೀತಿ ಮಾತನಾಡುವುದು ಸರಿಯಲ್ಲ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದರು. ಮನುಷ್ಯರಿಗೆ ಬದುಕುವ ಹಕ್ಕಿರುವಂತೆಯೇ ವನ್ಯಜೀವಿಗಳಿಗೂ ಬದುಕುವ ಹಕ್ಕಿದೆ ಎಂದು ಸಭಾಧ್ಯಕ್ಷ ಯು.ಟಿ. ಖಾದರ್ ಹೇಳಿದರು.

ರಾಜ್ಯ ಸರ್ಕಾರ ಆನೆಗಳ ಹಾವಳಿ ತಡೆಗೆ ಕಳೆದ 2 ವರ್ಷಗಳಲ್ಲಿ 489.46 ಮೀ. ಸೌರಬೇಲಿ, 284.82 ಆನೆ ತಡೆ ಕಂದಕ ನಿರ್ಮಾಣ ಮತ್ತು ನಿರ್ವಹಣೆ ಮಾಡಲಾಗುತ್ತಿದೆ, ಜೊತೆಗೆ ಹಾಸನ, ಚಿಕ್ಕಮಗಳೂರು, ಮೈಸೂರು, ಕೊಡಗು, ರಾಮನಗರ, ಚಾಮರಾಜನಗರ, ಬೆಂಗಳೂರು ನಗರ ಜಿಲ್ಲೆಯಲ್ಲಿ ಒಟ್ಟು 8 ಆನೆ ಕಾರ್ಯಪಡೆಗಳು ಕಾರ್ಯ ನಿರ್ವಹಿಸುತ್ತಿವೆ ಎಂದು ತಿಳಿಸಿದರು.

*****

## ನ್ಯಾಯದಾನ ವ್ಯವಸ್ಥೆಯಲ್ಲಿನ ವಿಳಂಬ ತಡೆಗೆ ಸರ್ಕಾರ ಕ್ರಮ- ಸಚಿವ ಎಚ್.ಕೆ.ಪಾಟೀಲ

ಬೆಳಗಾವಿ : ರಾಜ್ಯದ ನ್ಯಾಯಾಲಯಗಳಲ್ಲಿರುವ ಸಿವಿಲ್ ಮತ್ತು ಕ್ರಿಮಿನಲ್ ಪ್ರಕರಣಗಳನ್ನು ಇತ್ಯರ್ಥಪಡಿಸುವ ನಿಟ್ಟಿನಲ್ಲಿ ಸರ್ಕಾರ ಗಂಭೀರವಾಗಿ ಪರಿಗಣಿಸಿದ್ದು ಹಾಗೂ ನ್ಯಾಯದಾನ ವ್ಯವಸ್ಥೆಯಲ್ಲಿನ ವಿಳಂಬವನ್ನು ತಡೆಗಟ್ಟುವಲ್ಲಿ ಸರ್ಕಾರ ಅನೇಕ ಕ್ರಮ ಕೈಗೊಂಡಿದೆ ಎಂದು ಕಾನೂನು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ.ಪಾಟೀಲ್ ಹೇಳಿದರು.

ಪರಿಷತ್‌ನಲ್ಲಿ ಸದಸ್ಯ ಭಾರತಿಶೆಟ್ಟಿ ಅವರ ಪರವಾಗಿ ಸದಸ್ಯ ರವಿಕುಮಾರ ಅವರು ಕೇಳಿದ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಅವರು ನ್ಯಾಯಾಲಯದ ಪ್ರಕರಣಗಳಲ್ಲಿ ಆಡಳಿತ ಇಲಾಖೆಗಳಿಂದ ಸಕಾಲದಲ್ಲಿ ಆಕ್ಷೇಪಣಾ ಹೇಳಿಕೆಗಳನ್ನು ದಾಖಲಿಸಲು ಅನುವಾಗುವಂತೆ ಮತ್ತು ನ್ಯಾಯಾಲಯ ಹೇಳಿಕೆಗಳನ್ನು ದಾಖಲಿಸಲು ಅನುವಾಗುವಂತೆ ಮತ್ತು ನ್ಯಾಯಾಲಯ ಪ್ರಕರಣಗಳನ್ನು ಸಮರ್ಥವಾಗಿ ನಿರ್ವಹಿಸಲು ಕರ್ನಾಟಕ ಸರ್ಕಾರಿ ವ್ಯಾಜ್ಯ ನಿರ್ವಹಣಾ ಅಧಿನಿಯಮ, 2023 ಜಾರಿಗೆ ಬಂದಿರುತ್ತದೆ ಹಾಗೂ ನಿಯಮಗಳನ್ನು ರಚಿಸಿದ್ದು, ಅವುಗಳನ್ನು ಸದ್ಯದಲ್ಲೇ ಜಾರಿಗೆ ತರಲಾಗುತ್ತದೆ. ಸಿವಿಲ್ ಪ್ರಕ್ರಿಯಾ ಸಂಹಿತೆ (ಕರ್ನಾಟಕ ತಿದ್ದುಪಡಿ) ಅಧಿನಿಯಮ, 2023 ದಿನಾಂಕ: 04-03-2024 ರಿಂದ ಜಾರಿಗೆ ಬಂದಿರುತ್ತದೆ ಎಂದು ಅವರು ತಿಳಿಸಿದರು. ರಾಜ್ಯದ ವಿವಿಧ ನ್ಯಾಯಾಲಯಗಳಲ್ಲಿ ಸರ್ಕಾರದ ಪರ 2021ನೇ ಸಾಲಿನಲ್ಲಿ 3216, 2022ನೇ ಸಾಲಿನಲ್ಲಿ 2277, 2023ನೇ ಸಾಲಿನಲ್ಲಿ 2213 ಹಾಗೂ ಸರ್ಕಾರದ ವಿರುದ್ಧವಾಗಿ 2021ನೇ ಸಾಲಿನಲ್ಲಿ 20492, 2022ನೇ ಸಾಲಿನಲ್ಲಿ 16853, 2023ನೇ ಸಾಲಿನಲ್ಲಿ 14994 ಪ್ರಕರಣಗಳು ದಾಖಲಾಗಿವೆ ಎಂದು ಅವರು ಸದನಕ್ಕೆ ತಿಳಿಸಿದರು.

## ಪಂಚಮಸಾಲಿ ಹೋರಾಟದಲ್ಲಿ ಸರ್ಕಾರ ಜವಾಬ್ದಾರಿಯುತವಾಗಿ ನಡೆದುಕೊಂಡಿದೆ : ಗೃಹ ಸಚಿವ ಡಾ.ಜಿ.ಪರಮೇಶ್ವರ್

ಬೆಳಗಾವಿ : ಪಂಚಮಸಾಲಿ ಲಿಂಗಾಯತ ಸಮುದಾಯಕ್ಕೆ ಹಿಂದುಳಿದ ವರ್ಗಗಳ ಪ್ರವರ್ಗ 2ಎ ಅಡಿಯಲ್ಲಿ ಮೀಸಲಾತಿಗೆ ಆಗ್ರಹಿಸಿ ಬೆಳಗಾವಿಯ ಸುವರ್ಣ ವಿಧಾನಸೌಧದ ಬಳಿ ಪಂಚಮಸಾಲಿ ಪೀಠಾದಿಪತಿ ಜಯಮೃತ್ಯಂಜಯಸ್ವಾಮಿ ಮತ್ತಿತರರ ನೇತೃತ್ವದಲ್ಲಿ ನಡೆದ ಪ್ರತಿಭಟನೆ ಸಂದರ್ಭದಲ್ಲಿ ಸರ್ಕಾರ ಮತ್ತು ಪೊಲೀಸ್ ಇಲಾಖೆ ಜವಾಬ್ದಾರಿಯುತವಾಗಿ ನಡೆದುಕೊಂಡಿದೆ ಎಂದು ರಾಜ್ಯದ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಹೇಳಿದರು.

ವಿಧಾನ ಪರಿಷತ್‌ನಲ್ಲಿ ಶೂನ್ಯ ಅವಧಿಯಲ್ಲಿ ಅವರು ಮಾತನಾಡಿ, ಪ್ರತಿಭಟನಾಕಾರರಿಗೆ ಶಾಂತಿಯುತವಾಗಿ ಪ್ರತಿಭಟನೆ ನಡೆಸಲು ಎಲ್ಲಾ ರೀತಿಯ ಅವಕಾಶಗಳನ್ನು ನೀಡಲಾಗಿತ್ತು. ಆದರೆ ಪ್ರತಿಭಟನಾಕಾರರು ಕಾನೂನು ಮತ್ತು ಸುವ್ಯವಸ್ಥೆಗೆ ಭಂಗ ತರುವ ರೀತಿಯಲ್ಲಿ ಆದೇಶಗಳನ್ನು ಉಲ್ಲಂಘಿಸಿ ಸುವರ್ಣ ವಿಧನಸೌಧಕ್ಕೆ ಮುತ್ತಿಗೆ ಹಾಕಲು ಪ್ರಯತ್ನಿಸಿದ ಕಾರಣ ಲಘು ಲಾಠಿ ಪ್ರಹಾರ ನಡೆಸಲಾಗಿದ್ದು, ಪ್ರತಿಭಟನಾಕಾರರನ್ನು ಮುಂಜಾಗ್ರತಾ ಬಂಧನ ಮಾತ್ರ ನಡೆಸಲಾಗಿತ್ತು ಎಂದರು.

## ಪಿಡಿಓ ಹುದ್ದೆಗಳ ನೇಮಕ ಸಮಗ್ರ ತನಿಖೆಗೆ ತ್ರಿಸದಸ್ಯರ ಸಮಿತಿ ವರದಿ ಆಧರಿಸಿ ಕ್ರಮ: ಸಿಎಂ

ಬೆಳಗಾವಿ : ಕಲ್ಯಾಣ ಕರ್ನಾಟಕ ಭಾಗದ 97 ಪಿಡಿಓ ಹುದ್ದೆಗಳ ನೇಮಕಾತಿಗಾಗಿ ಸಿಂಧನೂರು ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ನಡೆದ ಪರೀಕ್ಷೆಯ ವೇಳೆ ಪ್ರಶ್ನೆಪತ್ರಿಕೆ ವಿತರಿಸಲು ಅರ್ಧಗಂಟೆ ತಡವಾಗಿರುವ ಕುರಿತು ಅಭ್ಯರ್ಥಿಗಳು ನಡೆಸಿದ ಪ್ರತಿಭಟನೆ ಕುರಿತಂತೆ ಸಮಗ್ರ ತನಿಖೆ ನಡೆಸಲು ಕರ್ನಾಟಕ ಲೋಕಸೇವಾ ಆಯೋಗವು 3 ಸದಸ್ಯರ ಉಪ ಸಮಿತಿಯನ್ನು ರಚಿಸಿದ್ದು, ಸಮಿತಿ ಸಲ್ಲಿಸುವ ಅಂತಿಮ ವರದಿಯನ್ನು ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ವಿಧಾನ ಪರಿಷತ್‌ನಲ್ಲಿ ಸದಸ್ಯ ಶಶಿಲ್ ನಮೋಶಿ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಅವರು ಉತ್ತರಿಸಿದರು. ಕಲ್ಯಾಣ ಕರ್ನಾಟಕ ಭಾಗದ 97 ಪಿಡಿಓ ಹುದ್ದೆಗಳ ಪರೀಕ್ಷೆಯನ್ನು ಕರ್ನಾಟಕ ಲೋಕಸೇವಾ ಆಯೋಗ ನಡೆಸಿದ್ದು, ಈ ಪರೀಕ್ಷೆಯಲ್ಲಿ ಪ್ರಶ್ನೆ ಪತ್ರಿಕೆ ಲೀಕ್ ಆಗಿಲ್ಲ ಮತ್ತು ಪ್ರಶ್ನೆಪತ್ರಿಕೆ ವಿತರಿಸಲು ವಿಳಂಬವಾಗಿಲ್ಲ. ಈ ಪ್ರಕರಣದ ಸತ್ಯಾಸತ್ಯತೆ ತಿಳಿಯಲು ಈಗಾಗಲೇ ಆಯೋಗದಲ್ಲಿ ಉಪ ಸಮಿತಿಯನ್ನು ರಚಿಸಲಾಗಿದ್ದು, ವರದಿ ಸ್ವೀಕೃತವಾದ ನಂತರ ಪರಶೀಲಿಸಿ ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ತಿಳಿಸಿದರು.

## ಕಾನೂನು ಸುವ್ಯವಸ್ಥೆ ಪಾಲನೆಗೆ ಸರ್ಕಾರ ತನ್ನ ಜವಾಬ್ದಾರಿ ನಿಭಾಯಿಸಿದೆ- ಡಾ. ಜಿ. ಪರಮೇಶ್ವರ್

ಬೆಳಗಾವಿ ಕಳೆದ ಡಿ. 10 ರಂದು ಬೆಳಗಾವಿಯಲ್ಲಿ ಪಂಚಮಸಾಲಿ ಸಮುದಾಯದ ಮೀಸಲಾತಿ ಸಂಬಂಧ ಪ್ರತಿಭಟನೆ ನಡೆಯುತ್ತಿದ್ದ ಸಂದರ್ಭದಲ್ಲಿ ಜರುಗಿದ ಲಾಠಿ ಚಾರ್ಜ್ ನಂತಹ ಅಹಿತಕರ ಘಟನೆಗೆ ಸಂಬಂಧಿಸಿದಂತೆ ಕಾನೂನು ಸುವ್ಯವಸ್ಥೆ ಪಾಲನೆ ಉದ್ದೇಶದಿಂದ ಸರ್ಕಾರ ತನ್ನ ಜವಾಬ್ದಾರಿಯನ್ನು ಸರಿಯಾಗಿಯೇ ನಿಭಾಯಿಸಿದೆ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ಅವರು ಹೇಳಿದರು. ಬೆಳಗಾವಿಯ ಸುವರ್ಣ ವಿಧಾನ ಸೌಧದಲ್ಲಿ ನಡೆಯುತ್ತಿರುವ ಚಳಿಗಾಲದ ಅಧಿವೇಶನದ ವಿಧಾನಸಭೆ ಸಭಾಂಗಣದಲ್ಲಿ ಗುರುವಾರದಂದು ಪಂಚಮಸಾಲಿ ಮೀಸಲಾತಿ ಪ್ರತಿಭಟನೆಯ ಘಟನೆಗೆ ಸಂಬಂಧಿಸಿದಂತೆ ಹೇಳಿಕೆ ನೀಡಿದ ಅವರು, ನಾನು ಕಳೆದ ಡಿ. 10 ರಂದು ನಡೆದ ಘಟನೆಗೆ ಸೀಮಿತಗೊಳಿಸಿ ನನ್ನ ನೇಳಿಕೆ ನೀಡುತ್ತಿದ್ದು, ಮೀಸಲಾತಿ ವಿಷಯದ ಬಗ್ಗೆ ಮಾತನಾಡುವುದಿಲ್ಲ. ಡಿ. 09 ರಿಂದ ಬೆಳಗಾವಿಯಲ್ಲಿ ಚಳಿಗಾಲದ ಅಧಿವೇಶನ ನಡೆಯುವ ಬಗ್ಗೆ ಘೋಷಣೆಯಾದ ಬಳಿಕ ಜಯ ಮೃತ್ಯುಂಜಯ ಸ್ವಾಮೀಜಿಯವರು, ಪಂಚಮಸಾಲಿ ಸಮುದಾಯಕ್ಕೆ ಮೀಸಲಾತಿ ಕುರಿತಂತೆ ಬೆಳಗಾವಿಯಲ್ಲಿ 5 ಸಾವಿರ ಟ್ರಾಕ್ಟರ್ ತಂದು ಪ್ರತಿಭಟನೆ ಮಾಡಬೇಕಾಗುತ್ತದೆ ಎಂದು ಕರೆ ಕೊಟ್ಟಿದ್ದರು. ಪ್ರತಿಭಟನೆ ಮಾಡುವುದು ಎಲ್ಲರ ಹಕ್ಕಾಗಿದ್ದು, ಆದರೆ 5 ಸಾವಿರ ಟ್ರಾಕ್ಟರ್ಗಳನ್ನು ಬೆಳಗಾವಿಗೆ ತಂದರೆ ಏನಾಗುತ್ತದೆ ಎಂಬ ಬಗ್ಗೆ ಪೊಲೀಸ್ ಅಧಿಕಾರಿಗಳೊಂದಿಗೆ ಚರ್ಚಿಸಿ, ಬಳಿಕ ಟ್ರಾಕ್ಟರ್ಗಳಲ್ಲಿ ಬರಲು ಅವಕಾಶ ನಿರಾಕರಿಸಿ, ಟ್ರಾಕ್ಸರ್ ಅಥವಾ ಕ್ರೂಸರ್ ವಾಹನಗಳಲ್ಲಿ ಬಂದು, ಪ್ರತಿಭಟನೆ ಮಾಡಲು ಸ್ಥಳ ನಿಗದಿ ಮಾಡಿಕೊಟ್ಟಿದ್ದೆವು. ಅಲ್ಲದೆ ಸುವರ್ಣ ವಿಧಾನಸೌಧದ 500 ಮೀ. ವ್ಯಾಪ್ತಿಯಲ್ಲಿ ಪ್ರತಿಬಂಧಕಾಜ್ಞೆ ವಿಧಿಸಿ, ನಿಬರ್ಂಧಿತ ಪ್ರದೇಶದ ಬಗ್ಗೆಯೂ ಆದೇಶ ಹೊರಡಿಸಲಾಗಿತ್ತು. ಪ್ರತಿಭಟನೆ ಸಂಬಂಧ ಧಾರವಾಡ ಹೈಕೋರ್ಟ್ ಕೂಡ ಶಾಂತಿಯುತ ಪ್ರತಿಭಟನೆಗೆ ಸ್ಥಳವನ್ನು ನಿಗದಿಪಡಿಸಿ, ಅವಕಾಶ ಕಲ್ಪಿಸಲು ಮತ್ತು ಅಹಿತಕರ ಘಟನೆಗಳು ಜರುಗದಂತೆ ಸೂಕ್ತ ಮುಂಜಾಗ್ರತಾ ಕ್ರಮ ಕೈಗೊಳ್ಳಲು ಸೂಚನೆ ನೀಡಿತ್ತು. ಸ್ವತಃ ಮುಖ್ಯಮಂತ್ರಿಗಳು ಕೂಡ, ಸಚಿವರುಗಳಾದ ಡಾ. ಮಹದೇವಪ್ಪ, ಸುಧಾಕರ್, ಲಕ್ಷ್ಮೀ ಹೆಬ್ಬಾಳ್ಕರ್ ಹಾಗೂ ವೆಂಕಟೇಶ್ ಅವರನ್ನು ಪ್ರತಿಭಟನಾ ಸ್ಥಳಕ್ಕೆ ತೆರಳಿ, ಸ್ವಾಮೀಜಿಗಳೂ ಸೇರಿದಂತೆ, ಕೆಲವು ಮುಖಂಡರುಗಳನ್ನು ಭೇಟಿಯಾಗಿ, ಮಾತುಕತೆಗೆ ಬರುವಂತೆ ಆಹ್ವಾನಿಸಲು ತಿಳಿಸಿದ್ದರು. ಆದರೆ, ಮುಖಂಡರುಗಳು ಸಚಿವರುಗಳ ಮಾತಿಗೆ ಸ್ಪಂದಿಸದೆ, ಮುಖ್ಯಮಂತ್ರಿಗಳೇ ಪ್ರತಿಭಟನಾ ಸ್ಥಳಕ್ಕೆ ಆಗಮಿಸಬೇಕು ಎಂದು ಆಗ್ರಹಿಸಿದರು. ಎಲ್ಲ ಪ್ರತಿಭಟನೆಗಳಿಗೂ ಮುಖ್ಯಮಂತ್ರಿಗಳೇ ಹೋಗಬೇಕು ಎಂದರೆ ಅದು ಸಾಧ್ಯವೆ? ಎಂದು ಡಾ. ಪರಮೇಶ್ವರ್ ಅವರು ಪ್ರಶ್ನಿಸಿದರು. ಪ್ರತಿಭಟನಾಕಾರರನ್ನು ಸುವರ್ಣ ವಿಧಾನಸೌಧದೆಡೆಗೆ ನುಗ್ಗಲು ಪ್ರಚೋದಿಸಿದ ಕಾರಣ, ಪೊಲೀಸ್ ಬ್ಯಾರಿಕೇಡ್‌ಗಳನ್ನು ನೂಕಿ, ಸುವರ್ಣ ವಿಧಾನಸೌಧದೆಡೆಗೆ ಸುಮಾರು 10 ಸಾವಿರ ಜನರು ಏಕಕಾಲಕ್ಕೆ ನುಗ್ಗಲು ಯತ್ನಿಸಿದರು, ಅಲ್ಲದೆ ಪ್ರತಿಭಟನಾಕಾರರು ಕಲ್ಲು ತೂರಾಟ ನಡೆಸಿದ ಕಾರಣ 24 ಪೊಲೀಸರು ಗಾಯಗೊಂಡರು. ಈ ಬಗ್ಗೆ ಸೂಕ್ತ ವಿಡಿಯೋ ದಾಖಲೆಗಳು ಇವೆ. 10 ಸಾವಿರ ಜನ ಸುವರ್ಣ ವಿಧಾನಸೌಧದೆಡೆಗೆ ನುಗ್ಗಿದರೆ ಕಾನೂನು ಸುವ್ಯವಸ್ಥೆ ಹಾಳಾಗುತ್ತದೆ ಎಂಬ ಕಾರಣಕ್ಕಾಗಿಯೇ ಪೊಲೀಸರು ಲಘು ಲಾಠಿ ಚಾರ್ಜ್ ಮಾಡಿ, ಅದನ್ನು ತಡೆದಿದ್ದಾರೆ. ಕಾನೂನು ಸುವ್ಯವಸ್ಥೆಗೆ ಧಕ್ಕೆಯಾದರೆ ವಿರೋಧ ಪಕ್ಷದವರು ಕೂಡ ಪ್ರಶ್ನೆ ಮಾಡುತ್ತಾರೆ, ಅಲ್ಲವೇ ಎಂದ ಅವರು, ಜವಾಬ್ದಾರಿಯುತವಾದ ಸರ್ಕಾರ ನಮ್ಮದು. ಪ್ರತಿಭಟನೆ ಎಲ್ಲರ ಹಕ್ಕು, ಆದರೆ ಶಾಂತಿಯುತವಾಗಿ ಮಾಡಬೇಕು. ಯಾರೂ ಕೂಡ ಕಾನೂನು ಕೈಗೆತ್ತಿಕೊಳ್ಳಲು ಅವಕಾಶ ನೀಡುವುದಿಲ್ಲ, ಯಾರೇ ಕಾನೂನು ಉಲ್ಲಂಘಿಸಲು ಅವಕಾಶ ಕೊಡುವುದಿಲ್ಲ. ಈ ಘಟನೆಗೆ ಸಂಬಂಧಿಸಿದಂತೆ ಪೊಲೀಸರು ಜವಾಬ್ದಾರಿಯುತವಾಗಿಯೇ ವರ್ತಿಸಿದ್ದಾರೆ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ಅವರು ಸ್ಪಷ್ಟಪಡಿಸಿದರು.

## ಸಾಹಿತ್ಯ ಅಕಾಡೆಮಿ ಚಕೋರ ವೇದಿಕೆ ಜಿಲ್ಲಾ ಸಂಚಾಲಕರಾಗಿ ಶಾಸ್ತ್ರಿ ಮತ್ತು ನಾಯಕ ನೇಮಕ



ಬೆಳಗಾವಿ 12: ಕರ್ನಾಟಕ ಸಾಹಿತ್ಯ ಅಕಾಡೆಮಿ ಆರಂಭಿಸುತ್ತಿರುವ "ಚಕೋರ ಸಾಹಿತ್ಯ ವೇದಿಕೆ" ಯ ಬೆಳಗಾವಿ ಜಿಲ್ಲಾ ಸಂಚಾಲಕರನ್ನಾಗಿ ಹಿರಿಯ ಸಾಹಿತಿ, ಪತ್ರಕರ್ತ ಶ್ರೀ ಎಲ್. ಎಸ್. ಶಾಸ್ತ್ರಿ ಮತ್ತು ಸವದತ್ತಿಯ ಕವಿ, ವಿಮರ್ಶಕ ಶ್ರೀ ನಾಗೇಶ ಜೆ. ನಾಯಕ ಅವರನ್ನು ಅಕಾಡೆಮಿ ಅಧ್ಯಕ್ಷ ಶ್ರೀ ಎಲ್. ಎನ್. ಮುಕುಂದರಾಜ ಅವರು ನೇಮಕ ಮಾಡಿರುತ್ತಾರೆ. ಚಕೋರ ವೇದಿಕೆ ಜಿಲ್ಲಾ ಘಟಕ ಇದೇ ದಿ. 14 ಶನಿವಾರ 4 ಗಂಟೆಗೆ ಚೆನ್ನಮ್ಮನ ಕಿತ್ತೂರಿನಲ್ಲಿ ಉದ್ಘಾಟನೆಯಾಗಲಿದೆ ಎಂದು ಅಕಾಡೆಮಿಯ ಸದಸ್ಯೆ ಡಾ. ಮೈತ್ರೇಯಿಣಿ ಗದಿಗೆಪ್ಪಗೌಡರ್ ಪತ್ರಿಕಾ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

# ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪ್ರವಾಸ ಕಾರ್ಯಕ್ರಮ



ಗದಗ : ರಾಜ್ಯದ ಮಾನ್ಯ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಡಿಸೆಂಬರ್ 15 ರಂದು ಗದಗ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದು ಇವರ ಈ ಕೆಳಗಿನಂತಿದೆ.

ಡಿಸೆಂಬರ್ 15 ರಂದು ಬೆ 11.05 ಗಂಟೆಗೆ ಹುಬ್ಬಳ್ಳಿಯಿಂದ ಹೆಲಿಕಾಪ್ಟರ್ ಮೂಲಕ ಹೊರಟು ಗದಗ ತಾಲೂಕು ಹರ್ಲಾಪುರ ಗ್ರಾಮದಲ್ಲಿ ಶ್ರೀಮತಿ ಕಮಲಾಬಾಯಿ ನಾರಾಯಣರಾವ್ ಕುಲಕರ್ಣಿ ಸರ್ಕಾರಿ ಪ್ರೌಢಶಾಲೆ ಆವರಣದ ಹೆಲಿಪ್ಯಾಡ್‌ಗೆ ಆಗಮಿಸುವರು.

ನಂತರ ಬೆ 11.30 ಗಂಟೆಗೆ ಹರ್ಲಾಪುರ ಗ್ರಾಮದಲ್ಲಿ ಶ್ರೀ ಬೀರಲಿಂಗೇಶ್ವರ ದೇವಸ್ಥಾನ ಸೇವಾ ಸಮಿತಿ ಯಿಂದ ಆಯೋಜಿಸಲಾದ ಶ್ರೀ ಬೀರಲಿಂಗೇಶ್ವರ ಹಾಗೂ ಶ್ರೀ ಮಾಳಿಂಗರಾಯ ಮೂರ್ತಿ ಪ್ರತಿಷ್ಠಾಪನೆ ಹಾಗೂ ದೇವಸ್ಥಾನ ಉದ್ಘಾಟನೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು.

ನಂತರ ಮಧ್ಯಾಹ್ನ 12 ಗಂಟೆಗೆ ಹರ್ಲಾಪುರ ಗ್ರಾಮದ ಶ್ರೀಮತಿ ಕಮಲಾಬಾಯಿ ನಾರಾಯಣರಾವ್ ಕುಲಕರ್ಣಿ ಸರ್ಕಾರಿ ಪ್ರೌಢಶಾಲೆ ಆವರಣದ ಹೆಲಿಪ್ಯಾಡ್‌ನಿಂದ ಹೆಲಿಕಾಪ್ಟರ್ ಮೂಲಕ ನಿರ್ಗಮಿಸಿ ರೋಣ ಪಟ್ಟಣದ ದಿ. ಪೌಲ್ ಅಕಾಡೆಮಿ ಸ್ಕೂಲ್ ಆವರಣದಲ್ಲಿನ ಹೆಲಿಪ್ಯಾಡ್ ತಲುಪುವುದು. ಮಧ್ಯಾಹ್ನ 12.15 ಗಂಟೆಗೆ ರೋಣದ ಡ್ರೋಣಾಚಾರ್ಯ ತಾಲೂಕು ಕ್ರೀಡಾಂಗಣದಲ್ಲಿ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ದಿಂದ ಆಯೋಜಿಸಿರುವ ರೋಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ವಿವಿಧ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನೆ ಮತ್ತು ಶಂಕುಸ್ಥಾಪನೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು.

ನಂತರ ಸಂಜೆ 4 ಗಂಟೆಗೆ ರೋಣದಿಂದ ಹೆಲಿಕಾಪ್ಟರ್ ಮೂಲಕ ನಿರ್ಗಮಿಸಿ ಸಂಜೆ 5 ಗಂಟೆಗೆ ಬೆಳಗಾವಿಯ ಸುವರ್ಣ ಸೌಧದ ಹೆಲಿಪ್ಯಾಡ್ ಗೆ ಪ್ರಯಾಣಿಸುವರು ಎಂದು ಪ್ರಕಟಣೆ ತಿಳಿಸಿದೆ.

# ಇಂದು ರಾಜ್ಯ ಮಟ್ಟದ ಪದವಿ ಪೂರ್ವ ಕಾಲೇಜು ವಿದ್ಯಾರ್ಥಿಗಳ ಟೆನ್ನಿಸ್ ವಾಲಿಬಾಲ್ ಕ್ರೀಡಾಕೂಟ

ಕೊಪ್ಪಳ : ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಬೆಂಗಳೂರು, ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಕೊಪ್ಪಳ ಜಿಲ್ಲೆ, ಬೇತಲ್ ಕ್ರಿಶ್ಚಿಯನ್ ಫೆಲೋಶಿಪ್ ಅಸೋಸಿಯೇಶನ್(ರಿ) ಗಂಗಾವತಿ ಹಾಗೂ ಬೇತಲ್ ಸ್ವತಂತ್ರ ಪದವಿ ಪೂರ್ವಕಾಲೇಜು ಗಂಗಾವತಿ ಇವರ ಸಂಯುಕ್ತಾಶ್ರಯದಲ್ಲಿ ರಾಜ್ಯ ಮಟ್ಟದ ಪದವಿ ಪೂರ್ವ ಕಾಲೇಜು ವಿದ್ಯಾರ್ಥಿಗಳ ಟೆನ್ನಿಸ್ ವಾಲಿಬಾಲ್ ಕ್ರೀಡಾಕೂಟದ ಉದ್ಘಾಟನಾ ಸಮಾರಂಭವನ್ನು ಡಿಸೆಂಬರ್ 14ರಂದು ಬೆಳಿಗ್ಗೆ 10 ಗಂಟೆಗೆ ಗಂಗಾವತಿಯಲ್ಲಿ ಹಮ್ಮಿಕೊಳ್ಳಲಾಗಿದೆ.

ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಸಂಸ್ಕೃತಿ ಇಲಾಖೆ ಸಚಿವರು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ತಂಗಡಗಿ ಶಿವರಾಜ ಸಂಗಪ್ಪ ಅವರು ಕಾರ್ಯಕ್ರಮ ಉದ್ಘಾಟಿಸುವರು. ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಚಿವರಾದ ಎಸ್.ಮಧುಬಂಗಾರಪ್ಪ ಅವರು ಕ್ರೀಡಾಧ್ವಜಾರೋಹಣ ನೆರವೇರಿಸುವರು. ಕರ್ನಾಟಕ ವಿಧಾನಸಭೆ ವಿರೋದ ಪಕ್ಷದ ಮುಖ್ಯ ಸಚೇತಕರು ಹಾಗೂ ಕುಷ್ಟಗಿ ಶಾಸಕರಾದ ದೊಡ್ಡನಗೌಡ ಹನುಮಗೌಡ ಪಾಟೀಲ್ ಅವರು ಕ್ರೀಡಾಜ್ಯೋತಿ ಬೆಳಗಿಸುವರು. ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರರು ಹಾಗೂ ಯಲಬುರ್ಗಾ ಶಾಸಕರಾದ ಬಸವರಾಜ ರಾಯರೆಡ್ಡಿ ಅವರು ಘನ ಉಪಸ್ಥಿತರಿರುವರು. ಗಂಗಾವತಿ ಶಾಸಕರಾದ ಜಿ.ಜನಾರ್ಧನ ರೆಡ್ಡಿ ಅವರು ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಕೊಪ್ಪಳ ಲೋಕಸಭಾ ಸದಸ್ಯರಾದ ಕೆ.ರಾಜಶೇಖರ ಬಸವರಾಜ ಹಿಟ್ನಾಳ್, ಕೊಪ್ಪಳ ಶಾಸಕರಾದ ಕೆ.ರಾಘವೇಂದ್ರ ಹಿಟ್ನಾಳ, ವಿಧಾನ ಪರಿಷತ್ ಸದಸ್ಯರಾದ ಶಶೀಲ್ ಜಿ. ನಮೋಶಿ, ಡಾ.ಚಂದ್ರಶೇಖರ ಬಿ. ಪಾಟೀಲ, ಶರಣಗೌಡ ಅನ್ನದಾನಗೌಡ ಪಾಟೀಲ ಬಯ್ಯಾಪುರ ಹಾಗೂ ಹೇಮಲತಾ ನಾಯಕ, ತುಂಗಭದ್ರ ಯೋಜನೆ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಹಸನಸಾಬ ನಬಿಸಾಬ ದೋಟಿಹಾಳ, ಗಂಗಾವತಿ ನಗರಸಭೆ ಅಧ್ಯಕ್ಷರಾದ ಮೌಲಾಸಾಬ್ ದಾದಾಸಾಬ್, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಸೈಯಾದ್ ಇಲಿಯಾಸ್ ಖಾದ್ರಿ ಪಾಲ್ಗೊಳ್ಳುವರು.

ವಿಶೇಷ ಆಹ್ವಾನಿತರಾಗಿ ಶಾಲಾ ಶಿಕ್ಷಣ ಸಾಕ್ಷರತಾ ಇಲಾಖೆ ಪ್ರಧಾನ ಕಾರ್ಯದರ್ಶಿ ರಿತೇಶ ಕುಮಾರ ಸಿಂಗ್, ಕೃಷ್ಣಭಾಗ್ಯ ಜಲ ನಿಗಮ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಕೆ.ಪಿ.ಮೋಹನ್‌ರಾಜ್, ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ನಿರ್ದೇಶಕಿ ಸಿಂಧೂ ಬಿ. ರೂಪೇಶ, ಕೊಪ್ಪಳ ಜಿಲ್ಲಾಧಿಕಾರಿ ನಲಿನ್ ಅತುಲ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್‌ರತ್ನಂ ಪಾಂಡೆಯ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ರಾಮ್ ಎಲ್. ಅರಸಿದ್ದಿ, ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಉಪನಿರ್ದೇಶಕ ಜಗದೀಶ ಜಿ.ಹೆಚ್., ಬೆಂಗಳೂರು ಶಾಲಾ ಶಿಕ್ಷಣ ಇಲಾಖೆ (ಪ.ಪೂ) ಕ್ರೀಡಾ ವಿಭಾಗದ ಸಹಾಯಕ ನಿರ್ದೇಶಕ ಸಿ.ರಮೇಶ್ ಗುಬ್ಬಿಗೂಡು, ರಾಜ್ಯ ಪದವಿ ಪೂರ್ವ ಕಾಲೇಜು ದೈಹಿಕ ಶಿಕ್ಷಣ ಉಪನ್ಯಾಸಕರ ಸಂಘದ ಅಧ್ಯಕ್ಷ ಟಿ.ಆರ್.ಬಸವರಾಜ, ಉಪಾಧ್ಯಕ್ಷ ಪ್ರೇಮನಾಥ ಶೆಟ್ಟಿ, ಪದವಿ ಪೂರ್ವ ಕಾಲೇಜು ದೈಹಿಕ ಶಿಕ್ಷಣ ಉಪನ್ಯಾಸಕರ ಸಂಘ, ಕೊಪ್ಪಳ ಜಿಲ್ಲಾ ಪ್ರಾಚಾರ್ಯರ ಸಂಘದ ಅಧ್ಯಕ್ಷರಾದ ಅನಿಲ ಕುಮಾರ ಜಿ., ಸ.ಪ.ಪೂ.ಕಾ.ಭಾಗ್ಯನಗರ ಹಿರಿಯ ಪ್ರಾಚಾರ್ಯರಾದ ರಾಜಶೇಖರ ಪಾಟೀಲ್, ಜಿಲ್ಲಾ ಉಪನ್ಯಾಸಕರ ಸಂಘದ ಅಧ್ಯಕ್ಷ ಸೋಮಶೇಖರಗೌಡ ಪಾಟೀಲ್, ಗಂಗಾವತಿಯ ಬಿ.ಸಿ.ಎಫ್.ಎ. ಅಧ್ಯಕ್ಷ ಬೆಜಿಲಿಯಲ್ ಜೋಸೆಫ್‌ರಾಜು, ಕಾರ್ಯದರ್ಶಿ ಬ್ಯಾಬೇಜ್ ಮಿಲ್ಟನ್ ಎಸ್., ಟೆನ್ನಿಸ್ ವಾಲಿಬಾಲ್ ಸಂಸ್ಥೆಯ ರಾಜ್ಯ ಪ್ರಧಾನ ಕಾರ್ಯದರ್ಶಿ ವಿ.ನಾಗೇಶ್ವರ ರಾವ್, ವಿಜಯಪುರ ಟೆನ್ನಿಸ್ ವಾಲಿಬಾಲ್ ಕ್ರೀಡಾಕೂಟ ವೀಕ್ಷಕ ಮಲ್ಲಿಕಾರ್ಜುನ ಹುಗಾರ್, ಗಂಗಾವತಿ ನಗರಸಭೆ ಸದಸ್ಯೆ ಅನಿತಾ ಶಿವಶಂಕರ ನಾಯಕ ಹಾಗೂ ಮತ್ತಿತರರು ಉಪಸ್ಥಿತರಿರುವರು.

ಸಮಾರೋಪ ಸಮಾರಂಭ: ರಾಜ್ಯ ಮಟ್ಟದ ಪದವಿ ಪೂರ್ವ ಕಾಲೇಜು ವಿದ್ಯಾರ್ಥಿಗಳ ಟೆನ್ನಿಸ್ ವಾಲಿಬಾಲ್ ಕ್ರೀಡಾಕೂಟದ ಸಮಾರೋಪ ಸಮಾರಂಭವನ್ನು ಡಿ. 15ರಂದು ಗಂಗಾವತಿಯ ಬೇತಲ್ ಪದವಿ ಪೂರ್ವಕಾಲೇಜಿನಲ್ಲಿ ಆಯೋಜಿಸಲಾಗಿದೆ ಎಂದು ಪ್ರಕಟನೆ ತಿಳಿಸಿದೆ.

## ಚೂರು-ಪಾರು

### ಲೋಕಾಯುಕ್ತ ಅಧಿಕಾರಿಗಳ ತಾಲ್ಲೂಕು ಭೇಟಿ ಕಾರ್ಯಕ್ರಮ

ಕಾರವಾರ – ಲೋಕಾಯುಕ್ತ ಅಧಿಕಾರಿಗಳ ತಾಲ್ಲೂಕು ಭೇಟಿ ಕಾರ್ಯಕ್ರಮವು ಡಿ.18 ರಂದು ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ಸಿದ್ದಾಪುರ ತಹಶೀಲ್ದಾರ ಕಚೇರಿ ಸಭಾ ಭವನದಲ್ಲಿ ನಡೆಯಲಿದೆ.

ಕಾರ್ಯಕ್ರಮದಲ್ಲಿ ಸಾರ್ವಜನಿಕರಿಂದ ಕರ್ನಾಟಕ ಲೋಕಾಯುಕ್ತ ಕಾಯ್ದೆಯಡಿ ಭರ್ತಿ ಮಾಡಿದ ದೂರುಗಳನ್ನು ಸ್ವೀಕಾರ ಮಾಡಿ, ವಿಚಾರಣೆ ನಡೆಸುವರು. ಸರ್ಕಾರಿ ಕಚೇರಿಯಲ್ಲಿ ಸಾರ್ವಜನಿಕ ಕೆಲಸಗಳನ್ನು ನಿರ್ವಹಿಸಲು ಲಂಚಕ್ಕೆ ಬೇಡಿಕೆ ಮತ್ತು ಅರ್ಜಿಗಳ ವಿಲೇವಾರಿ ಮಾಡುವಲ್ಲಿ ಅನಗತ್ಯ ವಿಳಂಬ, ಸರ್ಕಾರಿ ಹಣ ದುರುಪಯೋಗ, ಕರ್ತವ್ಯ ಲೋಪ, ಕಳಪೆ ಕಾಮಗಾರಿ ಮಾಡುವ ಸರ್ಕಾರಿ ಅಧಿಕಾರಿ ನೌಕರರ ವಿರುದ್ಧ ಸಾರ್ವಜನಿಕರು ದೂರುಗಳನ್ನು ನಿಗಧಿತ ನಮೂನೆ-1 ಮತ್ತು 2 ರಲ್ಲಿ ಭರ್ತಿಮಾಡಿ ನೀಡಬಹುದು. ಸಾರ್ವಜನಿಕರು ತಮ್ಮ ದೂರುಗಳು ಇದ್ದಲ್ಲಿ ಈ ಕಾರ್ಯಕ್ರಮದಲ್ಲಿ ಭಾಗವಹಿಸಿ ಪರಿಹಾರ ಕಂಡುಕೊಳ್ಳಬಹುದು.

ಹೆಚ್ಚಿನ ಮಾಹಿತಿಗಾಗಿ ಕಚೇರಿಯ ದೂರವಾಣಿ ಸಂಖ್ಯೆ 08382– 295293, 220198, 222250, 222022, 229988, ಗೆ ಸಂಪರ್ಕಿಸಬಹುದು ಎಂದು ಲೋಕಾಯುಕ್ತ ಪೊಲೀಸ್ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕಂಪ್ಯೂಟರ್ ಡಿಟಿಪಿ/ಗ್ರಾಫಿಕ್ ಡಿಸೈನ್ ತರಬೇತಿ: ನೇರ ಸಂದರ್ಶನ

ಕಾರವಾರ – ಕೆನರಾ ಬ್ಯಾಂಕ್ ಮತ್ತು ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್ ಸಹಯೋಗದಲ್ಲಿ ರುಡ್‌ಸೆಟ್ ಸಂಸ್ಥೆಯ ವತಿಯಿಂದ ಹಮ್ಮಿಕೊಂಡಿರುವ ಕಂಪ್ಯೂಟರ್ ಡಿಟಿಪಿ ಕುರಿತ 45 ದಿನಗಳ ಉಚಿತ ತರಬೇತಿಯು ಡಿ.18 ರಿಂದ ಆರಂಭವಾಗಲಿದ್ದು, ಗ್ರಾಮೀಣ ಆಸಕ್ತ ನಿರುದ್ಯೋಗಿ ಯುವಕ-ಯುವತಿಯರು ಡಿ.18 ರಂದು ನಡೆಯಲಿರುವ ನೇರ ಸಂದರ್ಶನದಲ್ಲಿ ಭಾಗವಹಿಸಬಹುದು.

ಆಸಕ್ತರು 18 ರಿಂದ 45 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಬಿಪಿಎಲ್ ಕಾರ್ಡ್ ಅಥವಾ ಜಾಬ್ ಕಾರ್ಡ್ ಹಾಗೂ ಆಧಾರ್ ಕಾರ್ಡ್‌ನ್ನು ಕಡ್ಡಾಯವಾಗಿ ಹೊಂದಿರಬೇಕು.

ತರಬೇತಿಯು ಕಡ್ಡಾಯವಾಗಿ ವಸತಿಯುತವಾಗಿದ್ದು, ತರಬೇತಿಯ ಅವಧಿಯಲ್ಲಿ ಉಚಿತವಾಗಿ ಊಟ ಮತ್ತು ವಸತಿ ನೀಡಲಾಗುವುದು ಹಾಗೂ ತರಬೇತಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು.

ಆಸಕ್ತರು ಸಂದರ್ಶನದಲ್ಲಿ ಭಾಗವಹಿಸಲು ಹಾಗೂ ಹೆಚ್ಚಿನ ಮಾಹಿತಿಗಾಗಿ ರುಡ್‌ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಮೊಬೈಲ್ ಸಂಖ್ಯೆ: 9380162042, 9241482541, 9740982585 ನ್ನು ಸಂಪರ್ಕಿಸಬಹುದೆಂದು ರುಡ್‌ಸೆಟ್ ಸಂಸ್ಥೆಯ ಬೆಂಗಳೂರು ಶಾಖೆಯ ನಿರ್ದೇಶಕ ರವಿಕುಮಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಲಂಚ ಪಡೆದ ಅರಣ್ಯ ರಕ್ಷಕನಿಗೆ ಶಿಕ್ಷೆ ಪ್ರಕಟ

ಕಾರವಾರ – ಬಾವಿ ತೋಡುವುದನ್ನು ನಿಲ್ಲಿಸಬೇಕು ಇಲ್ಲದಿದ್ದಲ್ಲಿ ಪ್ರಥಮ ವರ್ತಮಾನ ವರದಿ ದಾಖಲಿಸುವುದಾಗಿ ತಿಳಿಸಿ ರೂ.10,000 ಲಂಚಕ್ಕೆ ಬೇಟಿಕೆ ಇಟ್ಟ ಅರಣ್ಯ ರಕ್ಷಕನಿಗೆ ಭ್ರಷ್ಟಾಚಾರ ಪ್ರತಿಬಂಧಕ ಕಾಯ್ದೆ –1988 ರ ಕಲಂ 7, ರಡಿ 1 ವರ್ಷಗಳ ಕಠಿಣ ಕಾರಾಗೃಹ ಶಿಕ್ಷೆ ಹಾಗೂ ರೂ. 5000 ದಂಡ ಹಾಗೂ ದಂಡ ಪಾವತಿಸಲು ವಿಫಲವಾದಲ್ಲಿ ಹೆಚ್ಚುವರಿ 3 ತಿಂಗಳ ಕಾರಾವಾಸ ಶಿಕ್ಷೆ. ಕಲಂ13(1)(ಡಿ)ಸಹಿತ 13(2) ರಡಿಯಲ್ಲಿ 2 ವರ್ಷಗಳ ಕಠಿಣ ಕಾರಾಗೃಹ ವಾಸ ಹಾಗೂ ರೂ 5,000 ದಂಡ ವಿಧಿಸಿ ಹಾಗೂ ದಂಡ ಪಾವತಿಸಲು ವಿಫಲವಾದಲ್ಲಿ ಹೆಚ್ಚುವರಿ 3 ತಿಂಗಳ ಕಾರಾವಾಸ ಶಿಕ್ಷೆ ವಿಧಿಸಿ, ವಿಶೇಷ ಮತ್ತು ಪ್ರಧಾನ ಮತ್ತು ಜಿಲ್ಲಾ ಸತ್ರ ನ್ಯಾಯಾಧೀಶರಾದ ಡಿ.ಎಸ್.ವಿಜಯ ಕುಮಾರ್ ತೀರ್ಪು ನೀಡಿದ್ದಾರೆ.

ಪ್ರಕರಣ ಹಿನ್ನಲೆ: ಶಿರಸಿ ತಾಲೂಕಿನ ಶಿವಳ್ಳಿ ಗ್ರಾಮದ ಕೊರ್ಸೆಯ ಮರಾಠಿ ಕೇರಿ ನಿವಾಸಿ ಕೃಷ್ಣ ರಾಮ ಮರಾಠಿ ಇವರು ಶಿವಳ್ಳಿ ಗ್ರಾಮದ ಅರಣ್ಯ ಇಲಾಖೆಯ ಸರ್ವೇ ನಂ: 123 ರಲ್ಲಿ ಬಾವಿ ತೋಡಲು ಪ್ರಾರಂಭಿಸಿದ್ದು, ಇದರ ಬಗ್ಗೆ ಮಾಹಿತಿ ಆದರಿಸಿ ವಿಚಾರಿಸಲು ಬಂದ ಅರಣ್ಯ ರಕ್ಷಕ ಗುರುಶಾಂತ ಶಿವಪ್ಪ ಸಂಕಣ್ಣನವರ್ ಕೃಷ್ಣ ರಾಮ ಮರಾಠಿ ವಿರುದ್ಧ ಪ್ರಥಮ ವರ್ತಮಾನ ವರದಿ ದಾಖಲಿಸುವುದಾಗಿ ಹೇಳಿ ಸಾಯಂಕಾಲ ಎಕ್ಕಂಬಿ ಹತ್ತಿರ ಇರುವ ಶಿವಳ್ಳಿ ಅರಣ್ಯ ವಸತಿ ಗೃಹಕ್ಕೆ ಬಂದು ಭೇಟಿಯಾಗಲು ಹೇಳಿದ್ದು, ಅದರಂತೆ ವಸತಿ ಗೃಹಕ್ಕೆ ಹೋಗಿ ವಿಚಾರಿಸಿದಾಗ ಬಾವಿ ತೋಡುವುದನ್ನು ನಿಲ್ಲಿಸಬೇಕು ಇಲ್ಲದಿದ್ದಲ್ಲಿ ಪ್ರಥಮ ವರ್ತಮಾನ ವರದಿ ದಾಖಲಿಸುವುದಾಗಿ ತಿಳಿಸಿ ರೂ 10,000 ಲಂಚದ ಹಣಕ್ಕೆ ಬೇಡಿಕೆ ಇಟ್ಟು ನಂತರದಲ್ಲಿ ರೂ.5000 ಲಂಚದ ಹಣಕ್ಕೆ ಬೇಡಿಕೆ ಇಟ್ಟಿದ್ದು, ರೂ. 4000 ಲಂಚ ಪಡೆಯುವಾಗ ಟ್ರಾಪ್ ಕಾರ್ಯಚರಣೆಯಲ್ಲಿ ರೆಡ್ ಹ್ಯಾಂಡ್ ಆಗಿ ಸಿಕ್ಕಿಬಿದ್ದಿರುತ್ತಾರೆ. ಆಪಾದಿತ ನೌಕರರ ವಿರುದ್ಧ ವಿಶೇಷ ಮತ್ತು ಪ್ರಧಾನ ಜಿಲ್ಲಾ ಸತ್ರ ನ್ಯಾಯಾಲಯ, ಉತ್ತರ ಕನ್ನಡದಲ್ಲಿ ದೋಷಾರೋಪಣ ಪತ್ರ ಸಲ್ಲಿಕೆಯಾಗಿ, ವಿಚಾರಣೆ ನಡೆಸಲಾಗಿತ್ತು.

ಕರ್ನಾಟಕ ಲೋಕಾಯುಕ್ತ ಸಂಸ್ಥೆಯ ಪರವಾಗಿ ವಿಶೇಷ ಸರ್ಕಾರಿ ಆಭಿಯೋಜಕ ಲಕ್ಷ್ಮಿಕಾಂತ ಎಮ್ ಪ್ರಭು ವಾದ ಮಂಡಿಸಿರುತ್ತಾರೆ.

### ರಾಷ್ಟ್ರೀಯ ವಿಚಾರ ಸಂಕೀರಣ

ಕಾರವಾರ – ಸರಕಾರಿ ಕಲಾ ಮತ್ತು ವಿಜ್ಞಾನ ಮಹವಿದ್ಯಾಲಯ (ಸ್ವಾಯತ್ತ) ಕಾರವಾರ, ಹಿಂದಿ ಅಧ್ಯಯನ ವಿಭಾಗದಿಂದ ರಾಷ್ಟ್ರೀಯ ವಿಚಾರ ಸಂಕೀರಣವನ್ನು ಡಿ.16 ರಂದು ಬೆಳಗ್ಗೆ 10 ಗಂಟೆಗೆ ಕಾಲೇಜಿನ ಸಭಾಭವನದಲ್ಲಿ ಹಮ್ಮಿಕೊಳ್ಳಲಾಗಿದೆ.

ಈ ವಿಚಾರ ಸಂಕೀರಣದಲ್ಲಿ ಮಹಾರಾಷ್ಟ್ರ ಹಾಗೂ ಗೋವಾ ರಾಜ್ಯದಿಂದ ಸಂಪನ್ಮೂಲ ವ್ಯಕ್ತಿಗಳು ವಿಚಾರ ಮಂಡಿಸಲಿದ್ದಾರೆ ಎಂದು ಕಾಲೇಜಿನ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಾಲ್ಯವಿವಾಹ ನಿಷೇಧ ಕಾಯ್ದೆ ಕುರಿತು ಜಾಗೃತಿ ಕಾರ್ಯಕ್ರಮ

**ಕೊಪ್ಪಳ :** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಮತ್ತು ಸ್ನೇಹ ಸಂಸ್ಥೆಗಳ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಕೊಪ್ಪಳ ಮತ್ತು ಯಲಬುರ್ಗಾ ತಾಲ್ಲೂಕಿನ ಸಾಮೂಹಿಕ ವಿವಾಹ ಆಯೋಜಕರಿಗೆ ಹಾಗೂ ಪೂಜಾರಿಗಳಿಗೆ ಬಾಲ್ಯವಿವಾಹ ನಿಷೇಧ ಕಾಯ್ದೆ–2012ರ ಕುರಿತು ಜಾಗೃತಿ ಕಾರ್ಯಕ್ರಮವು ಗುರುವಾರದಂದು ನಗರದ ಕೃಷಿ ವಿಸ್ತರಣಾ ಕೇಂದ್ರದಲ್ಲಿ ನಡೆಯಿತು.

ಹಿರಿಯ ಸಿವ್ಹಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾಂತೇಶ ದರಗದ ಅವರು ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿ, ಮಕ್ಕಳ ಬಾಲ್ಯವು ಅತ್ಯಮೂಲ್ಯವಾದದ್ದು, ಬಾಲ್ಯವನ್ನು ಮಕ್ಕಳು ಅನುಭವಿಸುವಂತಾಗಬೇಕು, ಅದಕ್ಕೆ ಅವಶ್ಯಕವಾದ ಪೂರಕ ವಾತಾವರಣವನ್ನು ನಿರ್ಮಿಸಲು ನಾವುಗಳೆಲ್ಲರೂ ಕಾರ್ಯನಿರ್ವಹಿಸಬೇಕು. ಸರಕಾರವು ಮಕ್ಕಳ ರಕ್ಷಣೆ, ಅಪೌಷ್ಠಿಕತೆ ನಿವಾರಣೆ, ತಾಯಿ ಮತ್ತು ಮಕ್ಕಳ ಮರಣವನ್ನು ತಡೆಗಟ್ಟಲು ಬಾಲ್ಯವಿವಾಹ ನಿಷೇಧ ಕಾಯ್ದೆ–2006ನ್ನು ಜಾರಿಗೊಳಿಸಿದೆ. ಕರ್ನಾಟಕ ರಾಜ್ಯವನ್ನು ಬಾಲ್ಯವಿವಾಹ ಮುಕ್ತ ರಾಜ್ಯವನ್ನಾಗಿಸಲು, 2016ರಲ್ಲಿ ತಿದ್ದುಪಡಿಯನ್ನು ತಂದಿದ್ದು, ರಾಷ್ಟ್ರಪತಿಗಳ ಅನುಮೋದನೆಯೊಂದಿಗೆ 2018 ಮಾರ್ಚ 3 ರಿಂದ ರಾಜ್ಯದಲ್ಲಿ ಈ ಕಾಯ್ದೆಯು ಜಾರಿಯಲ್ಲಿರುತ್ತದೆ. ಈ ಕಾಯ್ದೆಯಡಿಯಲ್ಲಿ ದೇಶದಲ್ಲಿಯೇ ಪ್ರಪ್ರಥಮವಾಗಿ ಪೊಲೀಸ್ ಅಧಿಕಾರಿಗಳಿಗೆ ಸೂ–ಮೋಟೋ ಅಧಿಕಾರದಡಿಯಲ್ಲಿ ಪ್ರಕರಣವನ್ನು ದಾಖಲಿಸುವ/ದಾಖಲಿಸಿಕೊಳ್ಳುವ ಅಧಿಕಾರವನ್ನು ನೀಡಿರುತ್ತದೆ. ಬಾಲ್ಯವಿವಾಹವನ್ನು ಮಾಡಿದ ಪಾಲಕರಿಗೆ ಇರುವಷ್ಟೇ ಶಿಕ್ಷೆ ಬಾಲ್ಯವಿವಾಹಕ್ಕೆ ಅವಕಾಶವನ್ನು ಕಲ್ಪಿಸಿದವರಿಗೆ, ಭಾಗವಹಿಸಿದವರಿಗೆ ಹಾಗೂ ಪ್ರೋತ್ಸಾಹಿಸಿದವರಿಗೆ



ಕನಿಷ್ಠ 1 ವರ್ಷದಿಂದ 2 ವರ್ಷ ಜೈಲು ಶಿಕ್ಷೆ ಮತ್ತು ರೂ. 1 ಲಕ್ಷ ದಂಡವನ್ನು ವಿಧಿಸಬಹುದಾಗಿದೆ. ಬಾಲ್ಯವಿವಾಹವನ್ನು ತಡೆಗಟ್ಟುವಲ್ಲಿ ಯಾವುದೇ ವ್ಯಕ್ತಿಗಳಿಂದ ಪ್ರಭಾವ ಬಂದಲ್ಲಿ ನ್ಯಾಯಾಲಯದಿಂದ "ತಡೆಯಾಜ್ಞೆ"ಯನ್ನು ಪಡೆದು ಬಾಲ್ಯವಿವಾಹಗಳನ್ನು ತಡೆಗಟ್ಟಬಹುದಾಗಿದೆ, ಜಿಲ್ಲೆಯಲ್ಲಿ ಈಗಾಗಲೇ ಸುಮಾರು "ತಡೆಯಾಜ್ಞೆ"ಗಳನ್ನು ನ್ಯಾಯಾಲಯಗಳು ಹೊರಡಿಸಿವೆಂದು ತಿಳಿಸಿದರು.

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಮಹಾಂತಸ್ವಾಮಿ ಪೂಜಾರ ಮಾತನಾಡಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ವತಿಯಿಂದ ಜಿಲ್ಲೆಯಲ್ಲಿ "ಬಾಲ್ಯವಿವಾಹ ನಿಷೇಧ ಕಾಯ್ದೆ–2006"ನ್ನು ಪರಿಣಾಮಕಾರಿಯಾಗಿ ಜಾರಿಗೊಳಸಿದೆ. ಬಾಲ್ಯವಿವಾಹವನ್ನು ಮಾಡಿದ ಪಾಲಕರ ವಿರುದ್ಧ ಪ್ರಕರಣಗಳನ್ನು ದಾಖಲಿಸಿರುವುದರ ಜೊತೆಗೆ ಸಾಮೂಹಿಕ ವಿವಾಹದಲ್ಲಿ ಬಾಲ್ಯವಿವಾಹವನ್ನು ಮಾಡಿದ ದೇವಸ್ಥಾನದ ಸಮಿತಿಯ ವಿರುದ್ಧ ಹಾಗೂ ಕಲ್ಯಾಣ ಮಂಟಪದಲ್ಲಿ ಬಾಲ್ಯವಿವಾಹಕ್ಕೆ ಅವಕಾಶವನ್ನು ನೀಡಿದ ಕಲ್ಯಾಣ ಮಂಟಪದ ವ್ಯವಸ್ಥಾಪಕರ ವಿರುದ್ಧವು ಪ್ರಕರಣವನ್ನು ದಾಖಲಿಸಲಾಗಿದೆ ಎಂದು ತಿಳಿಸಿದರು. ನಿಮ್ಮ ಸಮಿತಿಗಳಿಂದ ಆಯೋಜಿಸುವ ಸಾಮೂಹಿಕ ವಿವಾಹದಲ್ಲಿ ಬಾಲ್ಯವಿವಾಹಕ್ಕೆ ಅವಕಾಶವನ್ನು ನೀಡಬಾರದು ತಪ್ಪಿದಲ್ಲಿ ಜಿಲ್ಲಾಧಿಕಾರಿಗಳ ನಿರ್ದೇಶನದಂತೆ ಬಾಲ್ಯವಿವಾಹವನ್ನು ಮಾಡಲು ಸಹಕರಿಸಿದವರು ಮತ್ತು ಪ್ರೋತ್ಸಾಹಿಸಿದವರು ಸೇರಿದಂತೆ ಪಾಲಕರ ವಿರುದ್ಧ ಪ್ರಕರಣ ದಾಖಲಿಸಲಾಗುವುದು ಎಂದು ಸಾಮೂಹಿಕ ವಿವಾಹ ಆಯೋಜಕರಿಗೆ ಹಾಗೂ ಪೂಜಾರಿಗಳಿಗೆ ತಿಳಿಸಿದರು.

ಕಾರ್ಯಕ್ರಮದಲ್ಲಿ ಸ್ನೇಹ ಸಂಸ್ಥೆಯ ಸಂಯೋಜಕ ರಾಮಾಂಜನೇಯ, ಹನುಮಂತರಾವ್, ಶಿವಲೀಲಾ ವನ್ನೂರು ಸೇರಿದಂತೆ ಸ್ನೇಹ ಸಂಸ್ಥೆಯ ಅಧಿಕಾರಿಗಳು, ಸಿಬ್ಬಂದಿಗಳು, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಿಬ್ಬಂಧಿಗಳು, ಕೊಪ್ಪಳ ಮತ್ತು ಯಲಬುರ್ಗಾ ತಾಲೂಕಿನ ದೇವಸ್ಥಾನಗಳ ಪೂಜಾರಿಗಳು

### ಆಂಜನೇಯ ಸ್ವಾಮಿ ಜನ್ಮಸ್ಥಳ ಅಂಜನಾದ್ರಿ ಬೆಟ್ಟದಲ್ಲಿ ವಿಶೇಷ ಸಂಭ್ರಮ

# ಹನುಮಮಾಲೆ ವಿಸರ್ಜನೆ ಕಾರ್ಯಕ್ರಮಕ್ಕೆ ಆಗಮಿಸುತ್ತಿರುವ ಸ್ರಹಸ್ರಾರು ಮಾಲಾಧಾರಿಗಳು

ಕೊಪ್ಪಳ : ಶ್ರೀ ಆಂಜನೇಯ ಸ್ವಾಮಿ ಜನ್ಮಸ್ಥಳವಾದ ಅಂಜನಾದ್ರಿ ಬೆಟ್ಟದಲ್ಲಿ ಗುರುವಾರ ಸ್ರಹಸ್ರಾರು ಸಂಖ್ಯೆಯ ಹನುಮ ಮಾಲಾಧಾರಿಗಳು ಆಗಮಿಸುತ್ತಿರುವುದರಿಂದ ಅಂಜನಾದ್ರಿಯಲ್ಲಿ ವಿಶೇಷ ಸಂಭ್ರಮ ಕಂಡುಬಂದಿತು.

ಕೊಪ್ಪಳ ಜಿಲ್ಲೆಯ ಗಂಗಾವತಿ ತಾಲೂಕಿನ ಆನೆಗೊಂದಿ (ಚಿಕ್ಕರಾಂಪುರ) ಗ್ರಾಮದಲ್ಲಿರುವ ಅಂಜನಾದ್ರಿ ಬೆಟ್ಟದಲ್ಲಿ ಪ್ರತಿವರ್ಷದಂತೆ ಈ ವರ್ಷ ನಡೆಯುತ್ತಿರುವ ಹನುಮಮಾಲ ವಿಸರ್ಜನೆ ಕಾರ್ಯಕ್ರಮಕ್ಕೆ ಕರ್ನಾಟಕದ ಸೇರಿದಂತೆ ಬೇರೆ ಬೇರೆ ಕಡೆಯಿಂದಲೂ ಹನುಮ ಮಾಲಾಧಾರಿಗಳು, ದ್ವಿಚಕ್ರ ಮತ್ತು ನಾಲ್ಕು ಚಕ್ರ ವಾಹನಗಳು, ಬಸ್ ಹಾಗೂ ಕಾಲ್ನಡಿಗೆ ಮೂಲಕ ಅಂಜನಾದ್ರಿಗೆ ಆಗಮಿಸುತ್ತಿದ್ದಾರೆ. ಮಾಲಾಧಾರಿಗಳಿಗಾಗಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಪೊಲೀಸ್ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ವತಿಯಿಂದ ಅಂಜನಾದ್ರಿಯಲ್ಲಿ ಭಕ್ತರಿಗೆ ಎಲ್ಲಾ ರೀತಿಯ ವ್ಯವಸ್ಥೆಗಳನ್ನು ಅಚ್ಚುಕಟ್ಟಾಗಿ ಮಾಡಲಾಗಿದ್ದು, ಎಲ್ಲಾ ಕೆಲಸ ಕಾರ್ಯಗಳು ಸುಗಮವಾಗಿ ನಡೆಯುತ್ತಿವೆ.

ಅಂಜನಾದ್ರಿಯ ಬೆಟ್ಟದ ತಪ್ಪಲಿನಲ್ಲಿರುವ ಶ್ರೀ ಆಂಜನೇಯ ಸ್ವಾಮಿ



ದೇವಸ್ಥಾನದ ಪಾದಗಟ್ಟೆಯ ಪ್ರದೇಶದಲ್ಲಿ ವಿಶೇಷ ರೀತಿಯಲ್ಲಿ ಶೃಂಗರಿಸಲಾಗಿದ್ದು, ಪೂಜೆ ಪುನಸ್ಕಾರಗಳು ನಡೆಯುತ್ತಿವೆ. ಬೆಟ್ಟದ ಮೇಲೆ ಹಾಗೂ ಬೆಟ್ಟ ಹತ್ತುವ ಮಾರ್ಗದಲ್ಲಿಯೂ ಸಹ ಹೂಗಳು ಮತ್ತು ವಿದ್ಯುತ್ ದೀಪಗಳಿಂದ ಅಲಂಕಾರ ಮಾಡಲಾಗಿದೆ. ಅಂಜನಾದ್ರಿಯತ್ತ ಹನುಮ ಭಕ್ತರು ತಂಡೊಪ ತಂಡವಾಗಿ ಆಗಮಿಸುತ್ತಿರುವುದು ರಸ್ತೆಗಳಲ್ಲಿ ಕಂಡುಬರುತ್ತಿದೆ.

ಭಕ್ತರು ಜೈ ಶ್ರೀರಾಮ್, ಜೈ ಹನುಮಾನ ಎಂಬ ಘೋಷಣೆಗಳನ್ನು ಕೂಗುತ್ತಾ ಗುಡಿಯತ್ತ ಸಾಗುತ್ತಿದ್ದಾರೆ.

ಭಕ್ತಾಧಿಗಳ ಆರೋಗ್ಯದ ಹಿತದೃಷ್ಟಿಯಿಂದ ವೈದ್ಯರ ತಂಡಗಳು ಕಾರ್ಯನಿರ್ವಹಿಸುತ್ತಿವೆ ಹಾಗೂ ಅಗತ್ಯ ಔಷಧಿಗಳು, ಎರಡು ಅಂಬುಲೆನ್ಸ್ ತುರ್ತು ಸೇವೆಗಾಗಿ ಕಾಯ್ದಿರಿಸಲಾಗಿದೆ. ಪೊಲೀಸ್ ಭದ್ರತೆಗಾಗಿ ಹೊರ ಪೊಲೀಸ್ ಠಾಣೆ ಹಾಗೂ ಸಹಾಯವಾಣಿ ಕೇಂದ್ರಗಳನ್ನು ಸಹ ತೆರೆಯಲಾಗಿದೆ.

ಶಾಸಕರಿಂದ ಪರಿಶೀಲನೆ: ಹನುಮಾಲೆ ಧರಿಸಿ ಅಂಜನಾದ್ರಿಗೆ ಆಗಮಿಸಿದ ಗಂಗಾವತಿ ಶಾಸಕರಾದ ಜಿ.ಜನಾರ್ಧನರೆಡ್ಡಿ ಅವರು ಕಾರ್ಯಕ್ರಮದ ವ್ಯವಸ್ಥೆಯನ್ನು ಪರಿಶೀಲಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿ, ಈ ಬಾರಿಯ ಹನುಮಮಾಲ ವಿಸರ್ಜನೆಗಾಗಿ ಕಳೆದ ವರ್ಷಕ್ಕಿಂತಲೂ ಹೆಚ್ಚಿನ ಸಂಖ್ಯೆಯಲ್ಲಿ ಮಾಲಾಧಾರಿಗಳು ಆಗಮಿಸುತ್ತಿದ್ದಾರೆ. ಭಕ್ತಾಧಿಗಳಿಗಾಗಿ ಕುಡಿಯುವ ನೀರಿನ ವ್ಯವಸ್ಥೆ, ಸ್ನಾನದ ವ್ಯವಸ್ಥೆ, ಪ್ರಸಾದ, ದೇವಸ್ಥಾನದಲ್ಲಿ ದರ್ಶನಕ್ಕೆ ವ್ಯವಸ್ಥೆ, ಪೊಲೀಸ್ ಭದ್ರತೆ ಸೇರಿದಂತೆ ಎಲ್ಲಾ ವ್ಯವಸ್ಥೆಗಳನ್ನು ಜಿಲ್ಲಾಡಳಿತದಿಂದ ವ್ಯವಸ್ಥಿತವಾಗಿ ಮಾಡಲಾಗಿರುತ್ತದೆ. ಇದರ ಜೊತೆಗೆ ಗಂಗಾವತಿ ನಗರದಲ್ಲಿ ನಡೆಯುವ ಸಂಕೀರ್ತನಾ ಯಾತ್ರೆಗೂ ಸಹ ಅಗತ್ಯ ಸಹಕಾರ ನೀಡಲಾಗಿದೆ ಎಂದರು.

ಶ್ರೀ ಆಂಜನೇಯ ಸ್ವಾಮಿ ದೇವಸ್ಥಾನದ ಕಾರ್ಯನಿರ್ವಾಹಕ ಅಧಿಕಾರಿ ಎಂ.ಹೆಚ್. ಪ್ರಕಾಶರಾವ್ ಅವರು ಮಾತನಾಡಿ, ಹನುಮಮಾಲಾ ವಿಸರ್ಜನ ಕಾರ್ಯಕ್ರಮ ಗುರುವಾರ ಮತ್ತು ಶುಕ್ರವಾರ ನಡೆಯುತ್ತಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಭಕ್ತಾಧಿಗಳು ಆಗಮಿಸುತ್ತಿದ್ದಾರೆ. ಕೊಪ್ಪಳ ಜಿಲ್ಲಾಡಳಿತ, ಗಂಗಾವತಿ ತಾಲ್ಲೂಕು ಆಡಳಿತ ಮತ್ತು ಧಾರ್ಮಿಕ ದತ್ತಿ ಇಲಾಖೆಯಿಂದ ವಿವಿಧ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಹಂತ ಹಂತವಾಗಿ ಸಭೆಗಳನ್ನು ಕೈಗೊಂಡು ಸಕಲ ವ್ಯವಸ್ಥೆಗಳನ್ನು ಮಾಡಲಾಗಿದೆ. ಬೆಟ್ಟದ ಮೇಲ್ಭಾಗದಲ್ಲಿ ದರ್ಶನದ ವ್ಯವಸ್ಥೆಯು ಅತ್ಯಂತ ಸೂಕ್ತ ರೀತಿಯಲ್ಲಾಗಬೇಕೆಂಬ ಜಿಲ್ಲಾಡಳಿತ ಉದ್ದೇಶದಂತೆ ಈ ವರ್ಷ ಅಚ್ಚುಕಟ್ಟಾಗಿ ವ್ಯವಸ್ಥೆ ಮಾಡಲಾಗಿದೆ. ಇದರ ಜೊತೆಗೆ ಭಕ್ತಾಧಿಗಳಿಗಾಗಿ ಊಟದ ವ್ಯವಸ್ಥೆ, ಸ್ನಾನದ ವ್ಯವಸ್ಥೆ, ಪಾರ್ಕಿಂಗ್ ಹಾಗೂ ಇತರ ವ್ಯವಸ್ಥೆಗಳನ್ನು ಜಿಲ್ಲಾಧಿಕಾರಿಗಳ ನಿರ್ದೇಶನದಂತೆ ಮಾಡಲಾಗಿದೆ. ಎಲ್ಲಾ ಕಡೆ ಸ್ವಚ್ಛತೆ, ನೈರ್ಮಲಿಕರಣಕ್ಕೂ ಕ್ರಮ ವಹಿಸಲಾಗಿದೆ.

70 ಸಾವಿರದಿಂದ 1 ಲಕ್ಷಕ್ಕೂ ಮೇಲ್ಪಟ್ಟು ಭಕ್ತಾಧಿಗಳು ಈ ಕಾರ್ಯಕ್ರಮಕ್ಕೆ ಬರುವ ನಿರೀಕ್ಷೆಯಿದೆ. ಪ್ರಸಾದವಾಗಿ ಭಕ್ತಾಧಿಗಳಿಗೆ ಲಡ್ಡು, ದಾರ, ಸಿಂಧೂರ ಮತ್ತು ತೀರ್ಥ ಬಾಟಲಿ ನೀರು ನೀಡುವ ವ್ಯವಸ್ಥೆಯನ್ನು ಸಹ ಮಾಡಲಾಗಿದೆ ಎಂದರು.

ಈ ಸಂದರ್ಭದಲ್ಲಿ ಕೊಪ್ಪಳ ಉಪವಿಭಾಗಾಧಿಕಾರಿ ಕ್ಯಾಪ್ಟನ್ ಮಹೇಶ ಮಲಗಿತ್ತಿ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕಿ ರೇಷ್ಮಾ ಹಾನಗಲ್, ಗಂಗಾವತಿ ತಹಶೀಲ್ದಾರ ಯು.ನಾಗರಾಜ, ಕನಕಗಿರಿ ತಹಶೀಲ್ದಾರ ವಿಶ್ವನಾಥ ಮುರಡಿ, ಗಂಗಾವತಿ ನಗರಸಭೆ ಪೌರಾಯುಕ್ತ ಆರ್.ವಿರುಪಾಕ್ಷಪ್ಪ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಲಕ್ಷ್ಯಾಂತರ ಭಕ್ತರಿಂದ ಅಂಜನಾದ್ರಿಯಲ್ಲಿ ಹನುಮಮಾಲ ವಿಸರ್ಜನೆ

ಕೊಪ್ಪಳ : ಆಂಜನೇಯ ಸ್ವಾಮಿ ಜನ್ಮಸ್ಥಳ ಅಂಜನಾದ್ರಿಯಲ್ಲಿ ಹನುಮಮಾಲ ವಿಸರ್ಜನೆ ಕಾರ್ಯಕ್ರಮ ಲಕ್ಷ್ಯಾಂತರ ಹನುಮ ಮಾಲಾಧಾರಿಗಳಿಂದ ಶುಕ್ರವಾರ ಜರುಗಿತು. ಗುರುವಾರದಿಂದಲೇ ಆರಂಭವಾದ ಹನುಮಮಾಲಾ ವಿಸರ್ಜನೆ ಕಾರ್ಯಕ್ರಮ. ಶುಕ್ರವಾರ ಹೆಚ್ಚಿನ ಸಂಖ್ಯೆಯಲ್ಲಿ ಆಂಜನೇಯ ಸ್ವಾಮಿಯ ಭಕ್ತರು ಆಗಮಿಸಿದ್ದರು. ಬೆಳಂ ಬೆಳಿಗ್ಗೆ ಎಲ್ಲರೂ ನೀರಿನಲ್ಲಿ ಮಿಂದೆದ್ದು ಜಯಘೋಷಗಳನ್ನು ಕೂಗುತ ಸರತಿ ಸಾಲಿನಲ್ಲಿ ನಿಂತು ಆಂಜನೇಯ ಸ್ವಾಮಿಯ ದರ್ಶನ ಪಡೆಯುತ್ತಿದ್ದದು ಕಂಡು ಬಂತು.

ಕೊಪ್ಪಳ ಜಿಲ್ಲೆ ಮಾತ್ರವಲ್ಲದೆ ಅಕ್ಕಪಕ್ಕದ ಜಿಲ್ಲೆ ಮತ್ತು ಇತರೆ ರಾಜ್ಯಗಳಿಂದಲು ಹನುಮಮಾಲಧಾರಿ ಆಗಮಿಸಿದ್ದರು. ರಸ್ತೆಯಗಳಲ್ಲಿ ಕಾಲ್ನಡಿಗೆ ಮುಖಾಂತರ ತಂಡೋಪ ತಂಡವಾಗಿ ಮತ್ತು ದೂರದ ಊರಿನಿಂದ ಬರುವ ಜನರು ವಾಹನಗಳಲ್ಲಿ ಬರುತ್ತಿರುವುದು ಕಂಡು ಬಂದಿತು. ಈ ಕಾರ್ಯಕ್ರಮಕ್ಕೆ ಬರುವ ಭಕ್ತಾದಿಗಳಿಗೆ ಯಾವುದೇ ತೊಂದರೆಯಾಗದಂತೆ ಕೊಪ್ಪಳ ಜಿಲ್ಲಾಡಳಿತ ಉತ್ತಮ ರೀತಿಯಲ್ಲಿ ಎಲ್ಲಾ ವ್ಯವಸ್ಥೆಗಳನ್ನು ಮಾಡಿತ್ತು. ಭಕ್ತರಿಗೆ ಪ್ರಸಾದಕ್ಕಾಗಿ ವೇದಪಾಠ ಶಾಲೆಯ ಆವರಣದಲ್ಲಿ ವ್ಯವಸ್ಥೆ ಮಾಡಲಾಗಿತ್ತು. ಹುಗ್ಗಿ, ಅನ್ನ, ಸಾಂಬರ್, ಟೊಮಟೊ ಚಟ್ನಿ ಒಳಗೊಂಡ ಪ್ರಸಾದವನ್ನು ಭಕ್ತರು ಸವಿದರು. ಜನರಿಗೆ ನೂಕು ನುಗ್ಗಲು ಆಗದಂತೆ ಹಲವಾರು ಕೌಂಟರಗಳನ್ನು ತೆರೆದಿದ್ದರಿಂದ ಶಾಂತ ರೀತಿಯಲ್ಲಿ ಪ್ರಸಾದ ಸ್ವೀಕಾರಕ್ಕೆ ಅನುಕೂಲವಾಯಿತು. ಎಲ್ಲಾ ವ್ಯವಸ್ಥೆಗಳನ್ನು ಅಚ್ಚುಕಟ್ಟಾಗಿ ಮಾಡಿದ್ದಾರೆ, ಅಡುಗೆ ಚೆನ್ನಾಗಿ ಆಗಿದೆ ಎಂದು ಜನರು ಮಾತನಾಡುತ್ತಿದ್ದರು.

ಟ್ರಾಫಿಕ್ ಸಮಸ್ಯೆಯಾಗದಂತೆ ಮುಂಚಿತವಾಗಿ ಪೊಲೀಸರು ಪಾರ್ಕಿಂಗ್ ಸ್ಥಳ ನಿಗದಿಪಡಿಸಿದರಿಂದ ಯಾವುದೇ ಟ್ರಾಫಿಕ್ ಸಮಸ್ಯೆಗಳಾಗಲಿಲ್ಲ. ಕಾರ್ಯಕ್ರಮ ಸೂವ್ಯವಸ್ಥಿತವಾಗಿ ನಡೆಯಲು ರಚಿಸಲಾದ ವಿವಿಧ ಸಮತಿಗಳ ಕೆಲಸ ಕಾರ್ಯಗಳು ಹೇಗೆ ನಡೆಯುತ್ತಿವೆ ಎಂದು ಜಿಲ್ಲಾಧಿಕಾರಿಗಳು ಆಗಾಗ ಪರಿಶೀಲನೆ ನಡೆಸುತ್ತಿದ್ದರು. ವೈದ್ಯಕೀಯ ತಂಡಗಳು. ಪೊಲೀಸ್. ಕಂದಾಯ ಇಲಾಖೆ ಸೇರಿದಂತೆ ಇತರೆ ವಿವಿಧ ಇಲಾಖೆಯ ಅಧಿಕಾರಿಗಳು. ತಮಗೆ ವಹಿಸಿದ ಕೆಲಸಗಳನ್ನು ಜವಾಬ್ದಾರಿಯಿಂದ ನಿಭಾಯಿಸಿದರಿಂದ ಭಕ್ತರಿಗೆ ಯಾವುದೇ ಸಮಸ್ಯೆಗಳಾಗಲಿಲ್ಲ. ಆಂಜನೇಯ ಸ್ವಾಮಿ ದೇವಸ್ಥಾನ ಹಾಗೂ ಅದರ ಕೆಳಗಡೆ ಇರುವ ಪಾದಗಟ್ಟೆಯಲ್ಲಿ ಹೂವಿನ ಅಲಂಕಾರ ಕಳೆದ ವರ್ಷಕ್ಕಿಂತಲೂ ಈ ವರ್ಷ ಚೆನ್ನಾಗಿ ಮಾಡಲಾಗಿತ್ತು.



ಅಂಜನಾದ್ರಿ ಬೆಟ್ಟಕ್ಕೆ ವಿವಿಧ ಬಣ್ಣಗಳ ಲೈಟಿಂಗ್ ವ್ಯವಸ್ಥೆ ಮಾಡಿದ್ದರಿಂದ ಬೆಟ್ಟವು ರಾತ್ರಿ ಕಂಗೊಳಿಸುತ್ತಿತ್ತು.

ನಡೆದುಕೊಂಡು ಬರುವ ಹನುಮಮಾಲಾಧಾರಿಗಳಿಗೆ ಅನುಕೂಲವಾಗಲು ರಸ್ತೆಗಳ ಮಾರ್ಗ ಮಧ್ಯದ ಅಲ್ಲಲ್ಲಿ ಟೆಂಟ್‌ಗಳನ್ನು ಹೊಡೆದು ವಿಶ್ರಾಂತಿ ಸ್ಥಳಗಳನ್ನು ಮಾಡಲಾಗಿತ್ತು. ಕೆಲವು ಗ್ರಾಮಗಳಲ್ಲಿ ಭಕ್ತರಿಗೆ ಅನ್ನಪ್ರಸಾದ ವ್ಯವಸ್ಥೆ ಮಾಡಿರುವುದು ಮಾರ್ಗಮಧ್ಯದಲ್ಲಿ ಕಂಡು ಬರುತಿತ್ತು. ನಗರಸ್ಥಳೀಯ ಸಂಸ್ಥೆಗಳ ವತಿಯಿಂದ ಎಲ್ಲಾ ಕಡೆ ಸ್ವಚ್ಚತೆ ಕಾಪಡಲು ಹಲವಾರು ಸಿಬ್ಬಂದಿಗಳನ್ನು ನಿಯೋಜನೆ ಮಾಡಲಾಗಿತ್ತು. ಪೊಲೀಸವರು ವಾಹನಗಳನ್ನು ಪಾರ್ಕಿಂಗಗಾಗಿ ನಿಗದಿಪಡಿಸಿದ ಸ್ಥಳಗಳಲ್ಲಿ ವಾಹನಗಳನ್ನು ನಿಲ್ಲಿಸುವಂತೆ ಬರುವ ವಾಹನಗಳಿಗೆ ನಿರ್ದೇಶನ ನೀಡುತ್ತಿದ್ದರು. ಪ್ರಮುಖ ರಸ್ತೆಗಳು, ಅಂಜನಾದ್ರಿಯ ಪ್ರಮುಖ ಸ್ಥಳಗಳಲ್ಲಿ ಸಿಸಿಟಿವಿಗಳನ್ನು ಅಳವಡಿಸಿ ಕಾನೂನು ಸುವ್ಯವಸ್ಥೆ ಕಾಪಾಡಲು ವಿಶೇಷ ನಿಗಾ ವಹಿಸಲಾಗಿತ್ತು.

ಅಂಜನಾದ್ರಿಗೆ ಲಕ್ಷ್ಯಾಂತರ ಸಂಖ್ಯೆಯಲ್ಲಿ ಭಕ್ತರು ಬರುವ ನಿರೀಕ್ಷೆ ಹಿನ್ನೆಲೆಯಲ್ಲಿ ಜಿಲ್ಲಾಡಳಿತವು ಎಲ್ಲಾ ರೀತಿಯ ಸೌಕರ್ಯಗಳ ವ್ಯವಸ್ಥೆಯನ್ನು ಕಲ್ಪಿಸಿತ್ತು. ಕುಡಿಯುವ ನೀರು, ಸ್ನಾನಗೃಹಗಳು, ವಾಹನಗಳಿಗೆ ಪಾರ್ಕಿಂಗ್, ಪ್ರಸಾದ ವ್ಯವಸ್ಥೆ, ಸಾರಿಗೆ ವ್ಯವಸ್ಥೆ, ಸಹಾಯವಾಣಿ, ಅಗತ್ಯ ಸಂಖ್ಯೆಯಲ್ಲಿ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿ ನಿಯೋಜನೆ ಸೇರಿದಂತೆ ಎಲ್ಲಾ ರೀತಿಯ ಮೂಲಭೂತ ಸೌಕರ್ಯ ಕಲ್ಪಿಸಲಾಗಿದ್ದರಿಂದ ಹನುಮ ಮಾಲಾಧಾರಿಗಳು ಸೇರಿದಂತೆ ಎಲ್ಲರಿಗೂ ಅನುಕೂಲವಾಯಿತು. ಈ ಮೂಲಕ ಡಿಸೆಂಬರ್ 12 ಮತ್ತು ಡಿಸೆಂಬರ್ 13ರಂದು ಎರಡೂ ದಿನಗಳ ಕಾಲ ಕಾರ್ಯಕ್ರಮ ಯಶಸ್ವಿಯಾಗಿ ನಡೆಯಲು ಜಿಲ್ಲೆಯ ಸಚಿವರು, ಸಂಸದರು, ಶಾಸಕರು ಹಾಗೂ ಇತರೆ ಜನಪ್ರತಿನಿಧಿಗಳ ಸಹಕಾರ ಮತ್ತು ಜಿಲ್ಲಾಧಿಕಾರಿ ನಲಿನ್ ಅತುಲ್, ಜಿಲ್ಲಾ ಪಂಚಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ರತ್ನಂ ಪಾಂಡೇಯ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ ರಾಮ್ ಎಲ್ ಅರಸಿದ್ದಿ ಹಾಗೂ ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಕೊಪ್ಪಳ ಉಪವಿಭಾಗಾಧಿಕಾರಿ ಕ್ಯಾಪ್ಟನ್ ಮಹೇಶ್ ಮಾಲಗಿತ್ತಿ ಹಾಗೂ ಇತರ ಅಧಿಕಾರಿಗಳು ಅಂಜನಾದ್ರಿ ಬೆಟ್ಟಕ್ಕೆ ನಿರಂತರವಾಗಿ ಭೇಟಿ ನೀಡಿ ಅಲ್ಲಿನ ಕೆಲಸ ಕಾರ್ಯಗಳ ಬಗ್ಗೆ ಪರಿಶೀಲಿಸುವ ಮೂಲಕ ಕಾರ್ಯಕ್ರಮವನ್ನು ಯಶಸ್ವಿಯಾಗಿ ನಡೆಯುವಂತೆ ನೋಡಿಕೊಂಡರು.

# ಜನಸಾಮಾನ್ಯರಲ್ಲಿ ಹೆಚ್ಚುತ್ತಿರುವ ಮಧುಮೇಹ



ಇಂದಿನ ಆಧುನಿಕ ಜೀವನಶೈಲಿಯಿಂದ ಬದುಕು ತನಗರಿವಿಲ್ಲದಂತೆ ವಿಲಕ್ಷಣ ರೂಪದಲ್ಲಿ ಬಂದು ನಿಂತಿದೆ. ಒತ್ತಡವಿಲ್ಲದೇ ಜೀವನವಿಲ್ಲ ಎನ್ನುವ ಸ್ಥಿತಿ ನಿರ್ಮಾಣವಾಗಿದ್ದು, ಜೀವನ ಕ್ರಮ ಸರಿಇರದೇ ಒಂದಿಲ್ಲೊಂದು ಅನಾರೋಗ್ಯಕ್ಕೆ ಮನುಷ್ಯ ಗುರಿಯಾಗುತ್ತಿರುವುದನ್ನ ಕಾಣುತ್ತಿದ್ದೇವೆ.

ಇತ್ತೀಚೆಗೆ ಜಾಗತಿಕವಾಗಿ ಮಧುಮೇಹ ಜನರಲ್ಲಿ ಸಂಕ್ರಾಮಿಕ ರೋಗಗಳ ರೀತಿಯಲ್ಲಿ ಹೆಚ್ಚಾಗುತ್ತಿದ್ದು, ಇದಕ್ಕೆಲ್ಲ ಜಡ ಜೀವನಶೈಲಿ ಹಾಗೂ ಒತ್ತಡದ ಜೀವನ ಕಾರಣವಾಗಿದೆ. ಈ ನಿಟ್ಟಿನಲ್ಲಿ ಮಧುಮೇಹದ ಮೂಲಭೂತ ಅಂಶಗಳಾದ "ಮಧುಮೇಹ" ನಿರ್ವಹಿಸುವ ಮತ್ತು ತಡೆಗಟ್ಟುವ ಕುರಿತಾಗಿ ತಿಳಿದುಕೊಳ್ಳುವುದು ಅವಶ್ಯವಾಗಿದೆ.

ಜನಸಾಮಾನ್ಯರಲ್ಲಿ ಮಧುಮೇಹ ಹೆಚ್ಚಾಗುತ್ತಿರುವ ಕುರಿತು ವೈಧ್ಯಕೀಯ ಲೇಖನ ಬರೆಯಲು ಕೆ.ಎಲ್.ಇ.ಎಸ್ ಡಾ.ಪ್ರಭಾಕರ ಕೋರೆ ಹಾಸ್ಪಿಟಲ್‌ನ ಮಧುಮೇಹ ತಜ್ಞವೈಧ್ಯ ಡಾ.ಸಂಜಯ ಕಂಬಾರ, ಇವರನ್ನು ಭೇಟ್ಟಿಯಾಗಿದ್ದೆ. ಅವರು ಸಂತೋಷದಿಂದ "ಮಧುಮೇಹ" ಕುರಿತು ಮಾಹಿತಿ-ಸಲಹೆ-ಸೂಚನೆಗಳನ್ನು ನೀಡಿರುವರು. ಅದನ್ನು ಲೇಖನ ರೂಪದಲ್ಲಿ ಜನಸಾಮಾನ್ಯರಲ್ಲಿ ಅರಿವು ಮತ್ತು ಜಾಗೃತಿಯನ್ನು ಮೂಡಿಸುವ ಪ್ರಯತ್ನ ನನ್ನದು ಅಷ್ಟೆ.

ಡಾ.ಸಂಜಯ ಅವರು ಹೇಳುವಂತೆ ಮಧುಮೇಹ ಇರುವುದನ್ನು ಅರಿಯಲು ಅದರ ಲಕ್ಷಣಗಳನ್ನು ತಿಳಿದುಕೊಳ್ಳುವುದು ಮುಖ್ಯವಾಗಿದ್ದು, ಅವು ವ್ಯಕ್ತಿಯಿಂದ ವ್ಯಕ್ತಿಗೆ ಲಕ್ಷಣಗಳು ವಿಭಿನ್ನವಾಗಿದ್ದರೂ ಸಾಮಾನ್ಯವಾಗಿ ಮಧುಮೇಹ ಇರುವವರಲ್ಲಿ ಆಗಾಗ ಮೂತ್ರ ವಿಸರ್ಜನೆ, ಅತಿಯಾದ ಬಾಯಾರಿಕೆ, ಪದೆ ಪದೆ ಹಸಿವು, ಅನಿರೀಕ್ಷಿತ ತೂಕ ನಷ್ಟ, ನಿರಂತರ ಆಯಾಸ, ದೇಹದಲ್ಲಿ ಸಾಮಾನ್ಯ ಶಕ್ತಿಯ ಕೊರತೆ, ಮಸುಕಾದ ದೃಷ್ಟಿ, ಗಾಯಗಳು ಸಾಮಾನ್ಯಕ್ಕಿಂತ ಹೆಚ್ಚು ಸಮಯಕ್ಕೆ ವಾಸಿಯಾಗುವುದು, ಈ ಲಕ್ಷಣಗಳು ಇದ್ದರೆ ವೈಧ್ಯರೊಂದಿಗೆ ಸಮಾಲೋಚಿಸಬಹುದಾಗಿದೆ.

ಹೆಚ್ಚಾಗಿ ಮಧುಮೇಹ, ತಂದೆ-ತಾಯಿ ಇಬ್ಬರೂ ಮಧುಮೇಹಿಗಳಾಗಿದ್ದಲ್ಲಿ ಶೇಕಡಾ 99% ರಷ್ಟು, ಇಬ್ಬರಲ್ಲಿ ಒಬ್ಬರು ಮಧುಮೇಹರಾಗಿದ್ದಲ್ಲಿ ಶೇಕಡಾ 40% ರಷ್ಟು, ಕುಟುಂಬದ ಇತಿಹಾಸದಲ್ಲಿ ಯಾರಾದರೂ ಮಧುಮೇಹಿಗಳಾಗಿದ್ದಲ್ಲಿ ಶೇಕಡಾ 70% ರಷ್ಟು, ಇತರ ಕಾರಣಗಳಿಂದ (ಅಸಮರ್ಪಕ ಜೀವನ ಶೈಲಿ) ಶೇಕಡಾ 20% ರಷ್ಟು "ಮಧುಮೇಹ" ಬರುವ ಸಾಧ್ಯತೆ ಹೆಚ್ಚಿರುತ್ತದೆ ಎಂದು ಡಾ.ಸಂಜಯ ಹೇಳುತ್ತಾರೆ.

ವ್ಯಕ್ತಿ ಅಧಿಕ ತೂಕ ಹೊಂದಿದ್ದರೆ ಮತ್ತು ಮಧುಮೇಹದ ಕುಟುಂಬ ಇತಿಹಾಸವನ್ನು ಹೊಂದಿದ್ದರೆ ಪೂರ್ವ ಮಧುಮೇಹದಿಂದ ಬಳಲುತ್ತಿದ್ದಾನೆ ಎಂದು ತಿಳಿದು, ಮಧುಮೇಹ ತಡೆಗಟ್ಟುವಿಕೆಯನ್ನು ಆದ್ಯತೆಯನ್ನಾಗಿ ತೆಗೆದುಕೊಳ್ಳುವುದು ಅವಶ್ಯವಾಗಿದೆ.

ಮಧುಮೇಹ ಎಂದರೆ ಏನು ಎಂಬುವ ಬಗ್ಗೆ ತಿಳಿಯೋಣ ನಮ್ಮ ರಕ್ತದಲ್ಲಿನ ಗ್ಲೂಕೋಸ್‌ನ ಪ್ರಮಾಣವು ಅಗತ್ಯಕ್ಕಿಂತ ತುಂಬಾ ಹೆಚ್ಚಿರುವ ಸ್ಥಿತಿಯಾಗಿದೆ. ಇದು ಸಂಭವಿಸಲು ಕಾರಣ ನಮ್ಮ ದೇಹದಲ್ಲಿನ ಮೇದೋಜ್ಜೀರಕ ಗ್ರಂಥಿಯು ದೇಹಕ್ಕೆ ಸಾಕಷ್ಟು ಇನ್ಸುಲಿನ್ ಉತ್ಪಾದಿಸದಿದ್ದಾಗ ಇದು ಸಂಭವಿಸಬಹುದು ಅಥವಾ ಉತ್ಪತ್ತಿಯಾಗುವ ಇನ್ಸುಲಿನ್ ಸರಿಯಾಗಿ ಕೆಲಸ ಮಾಡದಿದ್ದರೆ ರಕ್ತದಲ್ಲಿ ಗ್ಲೂಕೋಸ್‌ನ ಪ್ರಮಾಣ ಹೆಚ್ಚಾಗಿ, ಮಧುಮೇಹಕ್ಕೆ ಕಾರಣವಾಗಿ ಅದು ದೇಹದ ವಿವಿಧ ಭಾಗಗಳಲ್ಲಿ ಹರಿದು ವಿವಿಧ ತೊಡಕುಗಳಿಗೆ ಕಾರಣವಾಗಬಹುದು.

ಇನ್ಸುಲಿನ್ ನಮ್ಮ ರಕ್ತದಲ್ಲಿನ ಗ್ಲೂಕೋಸ್ (ಸಕ್ಕರೆ) ಪ್ರಮಾಣವನ್ನು ನಿಯಂತ್ರಿಸುವ ಪ್ರಮುಖ ಹಾರ್ಮೋನ್ ಆಗಿದೆ. ನಮ್ಮ ದೇಹವು ನಾವು ಸೇವಿಸುವ ಆಹಾರವನ್ನು ಗ್ಲೂಕೋಸ್ (ಸಕ್ಕರೆ) ಆಗಿ ವಿಭಜಿಸುತ್ತದೆ. ಅದುವೆ ನಮ್ಮ ದೇಹದ ಶಕ್ತಿಯ ಮೂಲವಾಗಿದ್ದು, ಗ್ಲೂಕೋಸ್ ನಮ್ಮ ರಕ್ತ ಪ್ರವಾಹಕ್ಕೆ ಪ್ರವೇಶಿಸುತ್ತಿದ್ದಂತೆ ಇನ್ಸುಲಿನ್ ಬಿಡುಗಡೆ ಮಾಡಲು ಮೇದೋಜ್ಜಿರಕ ಗ್ರಂಥಿಯನ್ನು ಸಂಕೇತಿಸುತ್ತದೆ.

ಇನ್ಸುಲಿನ್ ಎಂದರೆ ಏನು? ಇದು ಮೇದೋಜ್ಜೀರಕ ಗ್ರಂಥಿಯಿಂದ ಉತ್ಪತ್ತಿಯಾಗಿ ಅದರಿಂದ ಸ್ರವಿಸುವ ಒಂದು ಹಾರ್ಮೋನ್ ಆಗಿದ್ದು, ಇದು ರಕ್ತದಲ್ಲಿನ ಗ್ಲೂಕೋಸ್ ಮಟ್ಟವನ್ನು ನಿಯಂತ್ರಿಸುತ್ತದೆ, ಮತ್ತು ನಮ್ಮ ಸ್ನಾಯು, ಕೊಬ್ಬು ಮತ್ತು ಯಕೃತ್ತಿಗಳಿಗೆ ಗ್ಲೂಕೋಸ್ ಜೀವಕೋಶಗಳಿಗೆ ಪ್ರವೇಶಿಸಲು ಅನುವು ಮಾಡಿಕೊಡುತ್ತದೆ. ಇದುವೆ ನಮ್ಮ ದೇಹದ ತುಂಬ ಶಕ್ತಿಯಾಗಿ ಬಳಸಲ್ಪಡುತ್ತದೆ.

ಮಧುಮೇಹದಲ್ಲಿ ಟೈಪ್ 1 ಮಧುಮೇಹ, ಟೈಪ್ 2 ಮಧುಮೇಹ, ಗರ್ಭಾವಸ್ಥೆಯ ಮಧುಮೇಹ, ಪ್ರಿಡಿಯಾಪಿಟಿಸ್ ರೀತಿಯ ಪ್ರಕಾರಗಳಿದ್ದು ಅವುಗಳು ವಿವಿಧ ಕಾರಣಗಳನ್ನು ಹೊಂದಿವೆ.

ಮಧುಮೇಹ ಟೈಪ್-1: (ಹುಟ್ಟಿದಾಗಿನಿಂದ ಮಧುಮೇಹ ಹೊಂದಿದ) ಚಿಕ್ಕಮಕ್ಕಳಲ್ಲಿ ಇದು ಜೀವಮಾನದ ಕಾಯಲೆಯಾಗಿದ್ದು, ಮೇದೋಜ್ಜಿರಕ ಗ್ರಂಥಿಯು ಇನ್ಸುಲಿನ್ ಉತ್ಪಾದಿಸುವುದಿಲ್ಲ. ಹೀಗಾಗಿ ಹೊರಗಿನಿಂದ ಇನ್ಸುಲಿನ್ ಚುಚ್ಚುಮದ್ದು ನೀಡುವ ಮೂಲಕ ದೇಹದಲ್ಲಿನ ಸಕ್ಕರೆಮಟ್ಟವನ್ನು ನಿರ್ವಹಣೆ ಮಾಡಬಹುದು.

ಮಧುಮೇಹ ಟೈಪ್-2 : ಇದು ವಯಸ್ಕರಲ್ಲಿ ಸಾಮಾನ್ಯವಾಗಿದ್ದು, ಮೇದೋಜ್ಜಿರಕ ಗ್ರಂಥಿಯು ಇನ್ಸುಲಿನ್‌ನನ್ನು ಸಾಕಷ್ಟು ಉತ್ಪಾದಿಸುವಿದಿಲ್ಲ. ಮತ್ತು ವಂಶವಾಹಿನಿ, ಸ್ಥೂಲಕಾಯತೆ, ಒತ್ತಡ, ಮಾಧಕದ್ರವ್ಯ ಸೇವನೆ, ಮತ್ತು ಧೈಹಿಕ ಶ್ರಮವಿಲ್ಲದೇ ಇರುವುದರಿಂದ ಟೈಪ್-2 ಮಧುಮೇಹ ಸಂಭವಿಸಬಹುದಾಗಿದೆ.

ಗರ್ಭಾವಸ್ಥೆಯ ಮಧುಮೇಹ : ಇದು ಗರ್ಭಾವಸ್ಥೆಯಲ್ಲಿ ಮಾತ್ರ ಬರಬಹುದಾಗಿದ್ದು, ಗರ್ಭಾವಸ್ಥೆಯ ಮಧುಮೇಹವು ರಕ್ತದಲ್ಲಿನ ಸಕ್ಕರೆ ಮಟ್ಟವನ್ನು ಹೆಚ್ಚಿಸುವುದು. ಇದು ಹೆರಿಗೆಯ ನಂತರ ಇಲ್ಲವಾಗಬಹುದು. ಇದು ನಂತರದ ಜೀವನದಲ್ಲಿ ಟೈಪ್-2 ಮಧುಮೇಹದ ಅಪಾಯವನ್ನು ಹೆಚ್ಚಿಸುತ್ತದೆ.

ಪ್ರಿಡಿಯಾಬಿಟಿಸ್ : ಇದು ಟೈಪ್ 2 ಡಯಾಬಿಟಿಸ್‌ನ ಪೂರ್ವಾವಸ್ಥೆಯಾಗಿದ್ದು, ರಕ್ತದಲ್ಲಿನ ಸಕ್ಕರೆಮಟ್ಟವನ್ನು ಹೆಚ್ಚಿಸುತ್ತದೆ. ನಮ್ಮ ಜೀವನಶೈಲಿಯನ್ನು ಬದಲಾವಣೆ ಮಾಡಿಕೊಳ್ಳುವುದರಿಂದ ಇದನ್ನು ತಡೆಯಬಹುದು.




ವೈಧ್ಯರು ಮಧುಮೇಹ ಇರುವುದನ್ನು ಖಚಿತಪಡಿಸಲು ನಿಖರ ರೋಗ ನಿರ್ವಹಣೆಗೆ ಕೆಲವು ಕ್ಲಿನಿಕಲ್ ಪರೀಕ್ಷೆ ಹಾಗೂ ರಕ್ತ, ಮೂತ್ರ ಪರೀಕ್ಷೆಗಳ ಮೂಲಕ ಮಧುಮೇಹ ಇರುವುದನ್ನು ನಿರ್ಣಯಿಸಿ ರೋಗಿಯ ವೈಯಕ್ತಿಕ ಅಗತ್ಯತೆಗಳ ಆಧಾರದ ಮೇಲೆ ಜೀವನಶೈಲಿಯ ಮಾರ್ಪಾಡು, ಔಷಧಿಗಳು ಮತ್ತು ಇನ್ಸುಲಿನ್ ಅಗತ್ಯತೆಯನ್ನು ನಿರ್ಧರಿಸಿ ಚಿಕಿತ್ಸೆ ನೀಡುತ್ತಾರೆ.

ಮಧುಮೇಹ ನಿರ್ವಹಣೆಗೆ ನಿಯಮಿತ ಮೇಲ್ವಿಚಾರಣೆ ಅಗತ್ಯವಿದ್ದು, (ನೀರು ಮತ್ತು ನಾರಿನಿಂದ ಕೂಡಿದ) ಫೈಬರ್ ಯುಕ್ತ ಆಹಾರ ಸಿರಿಧಾನ್ಯಗಳು, ಹಣ್ಣು ಮತ್ತು ಹಸಿರು ಎಲೆ ತರಕಾರಿಗಳನ್ನು ಉಪಯೋಗಿಸಬೇಕು. ನಿಯಮಿತ ವ್ಯಾಯಾಮ, ಧೈಹಿಕ ಚಟುವಟಿಕೆ ಹೊಂದಿರಬೇಕು.

ವೈಧ್ಯರು ಸೂಚಿಸಿರುವ ಔಷಧಿಗಳನ್ನು ನಿಯಮಿತವಾಗಿ ಸರಿ ಪ್ರಮಾಣದಲ್ಲಿ ತೆಗೆದುಕೊಳ್ಳಬೇಕು. ನಿಯಮಿತ ಧ್ಯಾನ ಅಥ-'ವಾ ಯೋಗವನ್ನು ಮಾಡುವದರೊಂದಿಗೆ ಒತ್ತಡ ನಿರ್ವಹಣೆ ಮಾಡುವುದರೊಂದಿಗೆ ದೇಹದ ನಿಯಮಿತ ತಪಾಸಣೆ ಮಾಡಿಕೊಳ್ಳುವ ಮೂಲಕ ಮಧುಮೇಹವನ್ನು ನಿಯಂತ್ರಣದಲ್ಲಿಡಬಹುದು.



ಮಧುಮೇಹವನ್ನು ಪರಿಣಾಮಕಾರಿಯಾಗಿ ನಿರ್ವಹಿಸಲು ಇನ್ಸುಲಿನ್ ಚಿಕಿತ್ಸೆ ಹಾಗೂ ಮೌಖಿಕ ಔಷಧಿಗಳ ಚಿಕಿತ್ಸಾ ವಿಧಾನ ಆಯ್ಕೆಗಳಿದ್ದು, ಸಮತೋಲನ ಆಹಾರ, ನಿಯಮಿತ ವ್ಯಾಯಾಮ ಮತ್ತು ತೂಕ ನಿರ್ವಹಣೆಯಂತಹ ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿಕೊಂಡು ನಿರಂತರ ಗ್ಲೂಕೋಸ್ ಮಾನಿಟರಿಂಗ್ ಮಾಡಿಕೊಳ್ಳುವದು ಅವಶ್ಯವಾಗಿದೆ.

ಮಧುಮೇಹವು ಅನಿಯಂತ್ರಿತವಾದಾಗ ದೇಹದ ವಿವಿಧ ಅಂಗ ವ್ಯವಸ್ಥೆಗಳ ಮೇಲೆ ಪರಿಣಾಮ ಬೀರಬಹುದಾಗಿದ್ದು ಹೃದಯಾಘಾತ, ಪಾರ್ಶ್ವವಾಯು ಸೇರಿದಂತೆ ಹೃದಯ ರೋಗದ ಅಪಾಯವನ್ನು ಹೆಚ್ಚಿಸಬಹುದು. ಹಾಗೂ ರಕ್ತದಲ್ಲಿನ ಅಧಿಕ ಸಕ್ಕರೆಮಟ್ಟವು ನರಗಳನ್ನು ಹಾನಿಗೊಳಿಸುತ್ತದೆ. ಮಧುಮೇಹವು ಮೂತ್ರಪಿಂಡದ ಕಾರ್ಯಚಟುವಟುಕೆಯನ್ನು ದುರ್ಬಲಗೊಳಿಸಿ ಮೂತ್ರಪಿಂಡ ವೈಫಲ್ಯಕ್ಕೆ ಕಾರಣವಾಗಬಹುದು. ಹಾಗೂ ದೃಷ್ಟಿ ದುರ್ಬಲತೆ ಅಥವಾ ನಷ್ಟಕ್ಕೆ ಕಾರಣವಾಗಬಹುದು.

ದೇಹದ ಭಾಗಗಳಿಗೆ ರಕ್ತಪರಿಚಲನೆಯಾಗದೇ ನರಗಳ ಹಾನಿಯು ಪಾದದ ಶಿಲೀಂದ್ರ ಸೋಂಕಿಗೆ ಕಾರಣವಾಗಿ ತೀವೃತರವಾದ ಪ್ರಕರಣಗಳಲ್ಲಿ ಅಂಗಚ್ಛೇದನಕ್ಕೆ ಕಾರಣವಾಗಬಹುದು. ಶುಷ್ಕಚರ್ಮದ ಸಮಸ್ಯ ಉಂಟಾಗಬಹುದು.

ಇಂಥ ಸಮಸ್ಯಗಳನ್ನು ತಗ್ಗಿಸಲು ಮಧುಮೇಹ ಹೊಂದಿರುವ ವ್ಯಕ್ತಿಯು ಆಹಾರ ಮತ್ತು ದೈಹಿಕ ಚಟುವಟಿಕೆಯಂತಹ ಜೀವನಶೈಲಿಯ ಜೊತೆಗೆ ತಮ್ಮ ಯೋಗಕ್ಷೇಮವನ್ನು ಜಾಗರೂಕತೆಯಿಂದ ನಿರ್ವಹಿಸುವುದರೊಂದಿಗೆ ನಿಯಮಿತ ತಪಾಸಣೆ ಮಾಡಿಸಿಕೊಳ್ಳುವುದು ಅಗತ್ಯವಾಗಿದೆ,

ಮಧುಮೇಹ ದೇಹದಲ್ಲಿ ಒಮ್ಮೆ ಮನೆ ಮಾಡಿತೆಂದರೆ ಅಜೀವ ಆರೋಗ್ಯ ಸಮಸ್ಯ ಉಂಟಾಗಿ ಜೀವಿತಾವಧಿಯು ಕಡಿಮೆ ಆಗುವ ಮೂಲಕ ಆರ್ಥಿಕ ಹೊರೆ, ಖಿನ್ನತೆ ಅಷ್ಟೇ ಅಲ್ಲ ಸಂತಾನೋತ್ಪತ್ತಿಯ ಫಲವತ್ತತೆಯ ಮೇಲೆ ನಕಾರಾತ್ಮಕ ಪರಿಣಾಮ ಬೀರಬಹುದು.


ಇದು ಪ್ರಪಂಚದಾದ್ಯಂತ ಸಂಕ್ರಾಮಿಕ ರೋಗದಂತೆ ಹೆಚ್ಚಾಗುತ್ತಿರುವುದು ಖೇದದ ಸಂಗತಿಯಾಗಿದೆ. ಭಾರತ ದೇಶದಲ್ಲಿ ಸುಮಾರು 10.1 ಕೋಟಿ ಜನರು ಮಧುಮೇಹದಿಂದ ಬಳಲುತ್ತಿದ್ದಾರೆಂದು ಇಂಡಿಯನ್ ಕೌನ್ಸಿಲ್ ಆಫ್ ಮೆಡಿಕಲ್ ರಿಸರ್ಚ ಸೌಂಸ್ಥೆಯು ವರದಿ ಮಾಡಿದೆ.

ಮಧುಮೇಹದ ನಿರ್ವಹಣೆಯಲ್ಲಿ ಆಹಾರವು ನಿರ್ಣಾಯಕ ಪಾತ್ರ ವಹಿಸುತ್ತದೆ. ಸಮತೋಲಿತ ನೀರಿ ಮತ್ತು ನಾರು ಹೊಂದಿದ ಫೈಬರ್ ಭರಿತ ಆಹಾರ, ಸಿರಿಧಾನ್ಯಗಳು, ಹಣ್ಣುಗಳು, ಹಸಿರು ತರಕಾರಿಗಳನ್ನು ಸೇವಿಸಿ. ಅವುಗಳಲ್ಲಿ ಪ್ರೋಟೀನ್ ಸಮೃದ್ಧವಾಗಿರುತ್ತದೆ. ಒಂದೇಬಾರಿಗೆ ಆಹಾರ ಸೇವಿಸುವುದನ್ನ ತಪ್ಪಿಸಿ ಅದನ್ನೆ ಆಗಾಗ ತಿನ್ನುತ್ತಿರಿ.

ಇದು ರಕ್ತದಲ್ಲಿನ ಸಕ್ಕರೆ ಮಟ್ಟವನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ.


ಮಧುಮೇಹವನ್ನು ತಡೆಗಟ್ಟಲು ಗರ್ಭಿಣಿ ತಾಯಿಯ ಸೂಕ್ತ ಪರಿಮಾಣಾತ್ಮಕ ಹಾಗೂ ಗುಣಾತ್ಮಕ ಪೋಷಣೆ ಅಗತ್ಯವಾಗಿದೆ ಹಾಗೂ ಮಧುಮೇಹ ಕುಟುಂಬದಲ್ಲಿ ರಕ್ತಸಂಬಂಧಿ ವಿವಾಹಗಳನ್ನು ತಪ್ಪಿಸುವುದು ಅವಶ್ಯ ಮಧುಮೇಹ ಹೊಂದಿರುವ ಇಬ್ಬರ ನಡುವಿನ ಮದುವೆಯನ್ನು ತಪ್ಪಿಸಿ, ಆರಾಮದಾಯಖ ಬೂಟುಗಳನ್ನು ಬಳಸಿ ದಿನದಲ್ಲಿ 45 ನಿಮಿಷ ನಡೆಯಿರಿ. 10 ನಿಮಿಷಗಳ ಕಾಲ ವಾರ್ಮ-ಅಪ್/ಸ್ಟ್ರೆಚಿಂಗ್,ಬ್ರಿಸ್ಕ ವಾಕಿಂಗ್/ ಜಾಗಿಂಗ್ ಮಾಡಿ, ತಂಬಾಕು/ ಮದ್ಯ ಸೇವನೆ ಮಾಡಬೇಡಿ ಮಧುಮೇಹ ನಿರ್ವಹಣೆ ಹಾಗೂ ತಡೆಗಟ್ಟುವಲ್ಲಿ, ಆರೋಗ್ಯಕರ ಜೀವನಶೈಲಿ, ಆಹಾರ, ನಿಯಮಿತವಾಗಿ ವ್ಯಾಯಾಮ, ನಿಯಮಿತ ಮಧುಮೇಹ ಮೇಲ್ವಿಚಾರಣೆ ಈ ಮೂಲಭೂತವಾದ ಅಂಶಗಳನ್ನು ಪಾಲಿಸುವುದರಿಂದ ಭವಿಷ್ಯದಲ್ಲಿ ಮಧುಮೇಹದ ಗಂಭೀರ ಆರೋಗ್ಯ ಸಮಸ್ಯಗಳಾದ ನರ, ಮೂತ್ರಪಿಂಡ, ಮತ್ತು ಹೃದಯ ಇತ್ಯಾದಿ ಹಾನಿಗಳನ್ನು ತಪ್ಪಿಸುವ ಮೂಲಕ ಆರೋಗ್ಯಕರ ಜೀವನವನ್ನು ನಡೆಸಬಹುದು ಎಂದು ಮಧುಮೇಹ ತಜ್ಞ ವೈಧ್ಯ ಡಾ.ಸಂಜಯ ಕಂಬಾರ ಹೇಳುತ್ತಾರೆ.

ಜಾಗತಿಕ ಪಿಡುಗಾದ ಮಧುಮೇಹದ ತೀವೃತೆ ಹೆಚ್ಚಾಗುತ್ತಿದ್ದು, ಅದನ್ನು ತಡೆಗಟ್ಟಲು ಮಧುಮೇಹ ಹೊಂದಿರುವ ಜನಸಾಮಾನ್ಯರನ್ನು ಗುರುತಿಸುವುದು ಅವಶ್ಯವಾಗಿದ್ದು, ಜನಸಾಮಾನ್ಯರಲ್ಲಿ ಈ ಕುರಿತಾದ ಶಿಕ್ಷಣ ನೀಡುವುದರೊಂದಿಗೆ ಜಾಗೃತಿ ಮಾಡಬೇಕಿದೆ. ಅಲ್ಲದೆ ಇನ್ನು ಮಧುಮೇಹ ಕುರಿತಾಗಿ ಹೆಚ್ಚುವರಿ ಸಂಶೋಧನೆಯ ಅಗತ್ಯವಿದ್ದು, ಔಷಧಿಯ ವೆಚ್ಚಗಳು ತಗ್ಗಿಸಬೇಕಿದೆ. ಒಟ್ಟಾರೆ ಮಧುಮೇಹ ನಿರ್ವಹಿಸುವಲ್ಲಿ ಮತ್ತು ತಡೆಗಟ್ಟುವಲ್ಲಿ ವೈಧ್ಯರು, ಸರ್ಕಾರಗಳು ಮತ್ತು ಜನಸಾಮಾನ್ಯರ ಸಹಯೋಗ ಮುಖ್ಯ ಪಾತ್ರವಹಿಸುತ್ತದೆ.




**ಲೇಖಕ: ಅನಂತ ಪಪ್ಪು**
**ಮೊ:9448527870**

# ಬಾಡಿದ ಹೂವುಗಳನ್ನು ಬಿಸಾಡುವ ಬದಲು ಈ ರೀತಿ ಫೇಸ್ ಮಾಸ್ಕ್ ತಯಾರಿಸಿ ನೋಡಿ



ಹೌದು, ಹೂವಿನಿಂದ ತಯಾರಿಸಿದ ಫೇಸ್ ಮಾಸ್ಕ್ಗಳು ಸೂಪರ್ ಹೈಡ್ರೇಟಿಂಗ್ ಆಗಿದ್ದು, ನಿಮಗೆ ಹೊಳೆಯುವ ಮತ್ತು ಕಲೆಯಿಲ್ಲದ ಚರ್ಮವನ್ನು ನೀಡುತ್ತದೆ. ನಿಮ್ಮ ತ್ವಚೆಯ ಆರೈಕೆಗೆ ಮನೆಯಲ್ಲಿಯೇ ಲಭ್ಯವಿರುವ ಹೂವುಗಳಿಂದ ಫೇಸ್ ಮಾಸ್ಕ್ ತಯಾರಿಸಬಹುದು. ದೇವರ ಪೂಜೆಗಿಟ್ಟ ಹೂವುಗಳನ್ನು ಬಿಸಾಡುವ ಬದಲು ಫೇಸ್ ಮಾಸ್ಕ್ ತಯಾರಿಸಿ. ಇವು ನೈಸರ್ಗಿಕವಾಗಿರುವುದರಿಂದ ಅಡ್ಡಪರಿಣಾಮಗಳು ಬೀರುವ ಸಾಧ್ಯತೆ ಕಡಿಮೆ. ನಿಮ್ಮ ಚರ್ಮದ ಪ್ರಕಾರಕ್ಕೆ ಸರಿಹೊಂದುವ ಹೂವುಗಳನ್ನು ಆಯ್ದುಕೊಂಡು ಫೇಸ್ ಪ್ಯಾಕ್ ತಯಾರಿಸಿ. ಹೂವುಗಳಲ್ಲಿ ತ್ವಚೆಯ ಆರೈಕೆಗೆ ಬೇಕಾಗುವ ಅಂಶಗಳಿರುತ್ತವೆ, ಆಯುರ್ವೇದದಲ್ಲಿ ಈ ಬಗ್ಗೆ ವಿವರವಾಗಿ ತಿಳಿಸಲಾಗಿದೆ.

ಅಲ್ಲದೆ ಅನೇಕ ಸಲೂನ್ಗಳು ತಮ್ಮ ಗ್ರಾಹಕರಿಗೆ ನೀಡುವ ಚರ್ಮದ ಚಿಕಿತ್ಸೆಯಲ್ಲಿ ಹೂವುಗಳನ್ನು ಬಳಸುತ್ತವೆ. ಹೂವುಗಳು ಸೌಂದರ್ಯ ಕ್ಷೇತ್ರದ ಅವಿಭಾಜ್ಯ ಅಂಗವಾಗಿದೆ, ಮತ್ತು ನೀವು ನಿಮ್ಮ ಚರ್ಮದ ಆರೈಕೆಯಲ್ಲಿ ಹೂವುಗಳನ್ನು ಯಾವುದೇ ಆತಂಕವಿಲ್ಲದೆ ಬಳಸಬಹುದು. ಹೂವುಗಳು ಪ್ರಕೃತಿಯ ಕೊಡುಗೆಯಾಗಿದ್ದು, ಉತ್ತಮ ಪರಿಮಳದೊಂದಿಗೆ ಇಂದ್ರಿಯಗಳನ್ನು ತಾಜಾಗೊಳಿಸುವುದಲ್ಲದೆ, ಚರ್ಮವನ್ನು ಹೊಳೆಯುವಂತೆ ಮಾಡುತ್ತದೆ. ಹೂವುಗಳಿಂದ ತಯಾರಿಸಬಹುದಾದ ವಿವಿಧ ಫೇಸ್ ಮಾಸ್ಕ್ಗಳ ಬಗ್ಗೆ ಇಲ್ಲಿ ತಿಳಿಸಿದ್ದೇವೆ.



**ರೋಸ್ ಪೆಟಲ್ ಫೇಸ್ ಮಾಸ್ಕ್**

ಗುಲಾಬಿ ದಳಗಳು ನೈಸರ್ಗಿಕ ತೈಲಗಳನ್ನು ಹೊಂದಿರುತ್ತವೆ, ಅದು ಚರ್ಮವನ್ನು ತೇವಗೊಳಿಸುತ್ತದೆ ಮತ್ತು ಮೃದು ಮತ್ತು ನಯವಾಗಿಸುತ್ತದೆ. ಅಲ್ಲದೆ ರಕ್ತ ಪರಿಚಲನೆಯನ್ನು ಉತ್ತೇಜಿಸುತ್ತದೆ ಮತ್ತು ಚರ್ಮವು ಮೃದುವಾಗಲು ಸಹಾಯ ಮಾಡುತ್ತದೆ. ಸ್ವಲ್ಪ ಗುಲಾಬಿ ಹೂಗಳನ್ನು ತೆಗೆದುಕೊಂಡು ದಳಗಳನ್ನು ಕಿತ್ತು, ಅವುಗಳನ್ನು ಬಿಸಿಲಿನಲ್ಲಿ ಒಣಗಿಸಿ ಪುಡಿಮಾಡಿಟ್ಟುಕೊಳ್ಳಿ.

**ತಯಾರಿಸುವ ವಿಧಾನ**

2 ಟೀಸ್ಪೂನ್ ಹಾಲು ಮತ್ತು 1 ಟೀಸ್ಪೂನ್ ಗೋಧಿ ಹುಡಿ, ಅರ್ಧ ಚಮಚ ಗುಲಾಬಿ ದಳದ ಹುಡಿಯನ್ನು ಸೇರಿಸಿ ಚೆನ್ನಾಗಿ ಮಿಶ್ರಗೊಳಿಸಿ. ತಯಾರಿಸಿದ ಪೇಸ್ಟ್‌ನ್ನು ನೈಸರ್ಗಿಕ ಹೊಳಪಿಗಾಗಿ ಮುಖ ಮತ್ತು ಕುತ್ತಿಗೆಗೆ ಹಚ್ಚಿ. ಇದನ್ನು 20 ನಿಮಿಷಗಳ ಕಾಲ ಬಿಡಿ ಮತ್ತು ನಂತರ ಸಾಮಾನ್ಯ ನೀರಿನಿಂದ ತೊಳೆಯಿರಿ.

**ಮಾರಿಗೋಲ್ಡ್ ಫೇಸ್ ಮಾಸ್ಕ್**

ಚೆಂಡು ಹೂವು ವಿಟಮಿನ್ ಸಿ ಹೊಂದಿರುವ ಒಂದು ಹೂವು. ಇದು ಹೊಳೆಯುವ ಮತ್ತು ಕಾಂತಿಯುತ ಚರ್ಮವನ್ನು ನೀಡಲು ಸಹಾಯ ಮಾಡುತ್ತದೆ. ವಿಟಮಿನ್ ಸಿ ಒಂದು ಪ್ರಮುಖ ಉತ್ಕರ್ಷಣ ನಿರೋಧಕ ವಾಗಿದ್ದು, ಇದು ವಯಸ್ಸಾದ ಚಿಹ್ನೆಗಳು ಮತ್ತು ಸೂರ್ಯನ ಕಿರಣಗಳ ಹಾನಿ ಸೇರಿದಂತೆ ಇತರ ಸಮಸ್ಯೆಗಳಿಂದ ಚರ್ಮವನ್ನು ರಕ್ಷಿಸುತ್ತದೆ.

ತಯಾರಿಸುವ ವಿಧಾನ: ಎರಡು ಚೆಂಡು ಹೂವಿನ ದಳಗಳನ್ನು ತೆಗೆದು ಕೊಂಡು ದಳಗಳನ್ನು ಪುಡಿ ಮಾಡಿ. ಈಗ, ಮಿಶ್ರಣಕ್ಕೆ ಒಂದು ಟೀಸ್ಪೂನ್ ಜೇನುತುಪ್ಪ ಮತ್ತು ಅರ್ಧ ಟೀಸ್ಪೂನ್ ನೀರನ್ನು ಸೇರಿಸಿ. ಈ ಪೇಸ್ಟ್ ಅನ್ನು ಚರ್ಮದ ಮೇಲೆ ಸಮನಾಗಿ ಹಚ್ಚಿ ಮತ್ತು ಸುಮಾರು 20 ನಿಮಿಷಗಳ ಕಾಲ ಬಿಡಿ. ನಂತರ ಉಗುರು ಬೆಚ್ಚಗಿನ ನೀರಿನಿಂದ ತೊಳೆಯಿರಿ.



**ದಾಸವಾಳ ಹೂವಿನ ಪ್ಯಾಕ್**

ನಿಮ್ಮ ಚರ್ಮದಿಂದ ಕಲ್ಮಶಗಳನ್ನು ತೆಗೆದುಹಾಕಲು ಮತ್ತು ಹೊಳೆಯು ವಂತೆ ಮಾಡಲು ದಾಸವಾಳ ಹೂವಿನ ಫೇಸ್ ಪ್ಯಾಕ್ ಅತ್ಯುತ್ತಮ. ಈ ಹೂವಿನ ಫೇಸ್ ಪ್ಯಾಕ್ ಚರ್ಮದ ಕೊಳಕನ್ನು ತೆಗೆದುಹಾಕಿ ಚರ್ಮವನ್ನು ಶುದ್ಧೀಕರಿಸುತ್ತದೆ. ಮುಖದಲ್ಲಿ ಎಣ್ಣೆಯಂಶವನ್ನು ಕಡಿಮೆ ಮಾಡಲು ಮತ್ತು ಮೊಡವೆಗಳನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ.

ತಯಾರಿಸುವ ವಿಧಾನ: ದಾಸವಾಳದ ಹೂವುಗಳ ದಳಗಳನ್ನು ತಣ್ಣೀರಿನಲ್ಲಿ ನೆನಸಿಟ್ಟು, ಬೆಳಿಗ್ಗೆ ರುಬ್ಬಿಕೊಂಡು ನೀರನ್ನು ಸೋಸಿ. ಈ ನೀರಿಗೆ 3 ಟೇಬಲ್ ಚಮಚ ಓಟ್ಸ್ ಮತ್ತು ಸ್ವಲ್ಪ ಟ್ರೀ ಟೀ ಎಣ್ಣೆಯನ್ನು ಸೇರಿಸಿ ಪೇಸ್ಟ್ ತಯಾರಿಸಿ.


**ಮಲ್ಲಿಗೆ ಪ್ಯಾಕ್**

ಮಲ್ಲಿಗೆ ಹಿತಕರ ಪರಿಮಳ ನೀಡುವುದಲ್ಲದೆ ಚರ್ಮದ ಆರೈಕೆಗೂ ಉತ್ತಮ. ಇದು ನಿಮಗೆ ತುರಿಕೆ ಅಥವಾ ಒಣ ಚರ್ಮವನ್ನು ಹೊಂದಿದ್ದರೆ ಪರಿಹಾರ ವನ್ನು ನೀಡುತ್ತದೆ. ಚರ್ಮದ ಮಾಯಿಶ್ಚರೈಸರ್ ಆಗಿ ಕೆಲಸ ಮಾಡುತ್ತದೆ. ನೈಸರ್ಗಿಕ ನಂಜುನಿರೋಧಕ ಗುಣಲಕ್ಷಣಗಳನ್ನು ಹೊಂದಿದ್ದು, ವಯಸ್ಸಾದ ಚಿಹ್ನೆಗಳನ್ನು ಮರೆಮಾಚುತ್ತದೆ.

**ತಯಾರಿಸುವ ವಿಧಾನ**

ಮಲ್ಲಿಗೆ ದಳಗಳನ್ನು ಚೆನ್ನಾಗಿ ರುಬ್ಬಿಕೊಳ್ಳಿ. ಒಂದು ಚಮಚ ಮೊಸರು ಮತ್ತು ಒಂದು ಟೀಸ್ಪೂನ್ ಸಕ್ಕರೆಯನ್ನು ಸೇರಿಸಿ. ಈ ಮಿಶ್ರಣವನ್ನು ಮುಖಕ್ಕೆ ಹಚ್ಚಿ ಒಣಗಲು ಬಿಡಿ. ಹಚ್ಚಿದ 15-20 ನಿಮಿಷಗಳ ನಂತರ ತೊಳೆಯಿರಿ.

# ಹಳದಿ ಹಲ್ಲಿನ ಸಮಸ್ಯೆಗೆ ಮನೆ ಮದ್ದು



ಜನರಿಂದ ನಿಮ್ಮನ್ನು ದೂರವಿಡುವಂತೆ ಈ ಹಲ್ಲುಗಳು ಮಾಡುವುದರಿಂದ ಕೆಲವೊಂದು ಸೂಕ್ತ ಮನೆಮದ್ದುಗಳ ಸಹಾಯವನ್ನು ತೆಗೆದುಕೊಳ್ಳಲೇಬೇಕು. ದಿನಕ್ಕೆ ಎರಡು ಬಾರಿ ಹಲ್ಲುಜ್ಜುವುದು, ಹಲ್ಲಿನ ಆರೋಗ್ಯವನ್ನು ಪಾಲನೆ ಮಾಡುವುದು ಹಲ್ಲಿಗೆ ಉತ್ತಮವಾಗಿದೆ.

**ಫ್ಲೂರಿಡೇಟೆಡ್ ಟೂತ್‌ಪೇಸ್ಟ್ ಬಳಸಿ**

ಹಲ್ಲಿನಿಂದ ಹಳದಿಯ ನಿವಾರಣಗೆ ಈ ಪೇಸ್ಟ್ ಸಹಕಾರಿ. ಫ್ಲುರೈಡ್ ನಿಮ್ಮ ಹಲ್ಲುಗಳನ್ನು ಬಲಶಾಲಿಯಾಗಿಸುವುದರಿಂದ ಹಲ್ಲಿನ ಹುಳುಕನ್ನು ನಿವಾರಿಸುತ್ತದೆ. ನೀವು ಸರಿಯಾದ ಟೂತ್‌ಪೇಸ್ಟ್ ಬಳಸುತ್ತಿದ್ದೀರಿ ಎಂಬುದನ್ನು ಖಾತ್ರಪಡಿಸಿಕೊಳ್ಳಿ.

ಒಂದು ಚಮಚದಷ್ಟು ಬೇಕಿಂಗ್ ಸೋಡಾಗೆ ಸ್ವಲ್ಪ ಉಪ್ಪು ಸೇರಿಸಿ. ಪೇಸ್ಟ್ ಬದಲಿಗೆ ಇದನ್ನು ಹಲ್ಲುಜ್ಜಲು ಬಳಸಿ. ಹಲ್ಲಿನ ಹಳದಿಗಟ್ಟುವಿಕೆ ಮತ್ತು ಕರೆಯನ್ನು ನಿವಾರಿಸಿ ವಾರದಲ್ಲಿ ಫಲಿತಾಂಶವನ್ನು ನೀಡುತ್ತದೆ.

**ಕಿತ್ತಳೆ ಸಿಪ್ಪೆಯ ಮ್ಯಾಜಿಕ್**

ಈ ತಂತ್ರ ನಿಮ್ಮ ಬಾಯಿಯಲ್ಲಿ ಸುವಾಸನೆಯನ್ನು ಹೊಮ್ಮಿಸುವುದು ಖಂಡಿತ. ಹಲ್ಲಿನ ಕರೆಯ ನಿವಾರಣಗೆ ಈ ಟ್ರಿಕ್ಸ್ ಅತ್ಯದ್ಭುತವಾದುದು. ಹಲ್ಲಿನ ಮೇಲೆ ನೇರವಾಗಿ ಕಿತ್ತಳೆ ಸಿಪ್ಪೆಯನ್ನು ಉಜ್ಜಿ ನಂತರ ಬಾಯಿ ಮುಕ್ಕಳಿಸಿ. ಆಗಾಗ್ಗೆ ಇದನ್ನು ಬಳಸುವುದರಿಂದ ಹಲ್ಲಿನ ಕರೆಯನ್ನು ನಿವಾರಿಸಿಕೊಳ್ಳಬಹುದು.

**ಹಸಿತರಕಾರಿಗಳು ಮತ್ತು ಹಣ್ಣುಗಳು**

ಫೈಬರ್ ಅಂಶವನ್ನು ಒಳಗೊಂಡಿರುವ ಹಸಿತರಕಾರಿಗಳು ಮತ್ತು ಹಣ್ಣುಗಳ ಸೇವನೆಯನ್ನು ಮಾಡಿ. ಇವುಗಳನ್ನು ಸೇವಿಸುವುದೂ ಕೂಡ ಹಲ್ಲಿನ ಹಳದಿ ಕರೆಯನ್ನು ದೂರಮಾಡಲು ಸಹಕಾರಿಯಾಗಿದೆ.

ಹಲ್ಲಿನ ಹಳದಿ ಕಲೆ ನಿವಾರಣೆಗೆ ಎಳ್ಳಿನ ಬೀಜ ಅತ್ಯುತ್ತಮವಾದುದು. ಎಳ್ಳನ್ನು ಕೊಂಚ ಬಿರುಸಾಗಿ ಹುಡಿಮಾಡಿಟ್ಟುಕೊಳ್ಳಿ. ನಂತರ ಈ ಹುಡಿಯನ್ನು ಬಳಸಿ ಹಲ್ಲುಜ್ಜಿ. ನಿಮ್ಮ ಹಲ್ಲಿನಿಂದ ಕರೆ ಮಾಯವಾಗಿ ಫಳಫಳನೆ ಹೊಳೆಯುತ್ತದೆ.

**ಖಾರವಾದ ಆಹಾರಗಳನ್ನು ಸೇವಿಸಿ**

ಇದು ಕೊಂಚ ಅಚ್ಚರಿಯನ್ನುಂಟು ಮಾಡಿದರೂ ನಿಜವಾದ ವಿಷಯವಾಗಿದೆ. ಆದಷ್ಟು ಹೆಚ್ಚು ಖಾರದ ಆಹಾರ ಪದಾರ್ಥಗಳನ್ನು ಸೇವಿಸಿ. ಜೊಲ್ಲು ಗ್ರಂಥಿಗಳಲ್ಲಿ ಲಾಲಾರಸ ಸ್ರವಿಸುವಿಕೆಯನ್ನು ಹೆಚ್ಚಿಸಿ ನಿಮ್ಮ ಹಲ್ಲುಗಳನ್ನು ಸ್ವಚ್ಛವಾಗಿರಿಸಲು ಖಾರದ ಆಹಾರ ಸಹಾಯ ಮಾಡುತ್ತದೆ.

## ಸಿರಿಧಾನ್ಯ- ಮರೆತು ಹೋದ ಖಾದ್ಯಗಳ ಪಾಕ ಸ್ಪರ್ಧೆಗೆ ಚಾಲನೆ

# ವಿವಿಧ ಬಗೆ ಸಿರಿಧಾನ್ಯದ ಖಾದ್ಯಗಳನ್ನು ಸವಿದ ಡಿಸಿ, ಸಿಇಓ, ಎಸ್‌ಪಿ

ಬಾಗಲಕೋಟೆ: : ನವನಗರದ ಎಪಿಎಂಸಿ ಹತ್ತಿರವಿರುವ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಜಿಲ್ಲಾ ಮಟ್ಟದ ಸಿರಿಧಾನ್ಯ ಹಾಗೂ ಸಾವಯವ ಮೇಳದ ಅಂಗವಾಗಿ ಹಮ್ಮಿಕೊಂಡ ಸಿರಿಧಾನ್ಯ ಮತ್ತು ಮರೆತುಹೋದ ಖಾದ್ಯಗಳ ಪಾಕ ಸ್ಪರ್ಧೆಯಲ್ಲಿ ಜಿಲ್ಲಾಧಿಕಾರಿ ಜಾನಕಿ ಕೆ. ಎಂ, ಜಿ.ಪಂ ಸಿಇಓ ಶಶಿಧರ ಕುರೇರ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ ವಿವಿಧ ಬಗೆಯ ಖಾದ್ಯಗಳನ್ನು ಸವಿದರು.

ಗುರುವಾರ ಜಿಲ್ಲಾಡಳಿತ, ಜಿ.ಪಂ, ಧಾರವಾಡ ಕೃಷಿ ವಿಶ್ವವಿದ್ಯಾಲಯ, ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಹಾಗೂ ಕೃಷಿ ತಂತ್ರಜ್ಞಾನ ಸಂಸ್ಥೆ ಸಹಯೋಗದಲ್ಲಿ ನಡೆದ ಪಾಕ ಸ್ಪರ್ಧೆಗೆ ಜಿಲ್ಲಾಧಿಕಾರಿ ಜಾನಕಿ ಕೆ.ಎಂ ಚಾಲನೆ ನೀಡಿ ಮಾತನಾಡಿದ ಅವರು ವಿವಿಧ ಸಿರಿಧಾನ್ಯಗಳಿಂದ ತಯಾರಿಸಿದ ಬಗೆ ಬಗೆಯ ಖಾದ್ಯಗಳು ರುಚಿಕರವಾಗಿದ್ದು, ಇವುಗಳನ್ನು ತಯಾರಿವವರು ಮುನ್ನಲೆಗೆ ಬರೆಯಬೇಕಾಗಿದೆ. ಈ ಎಲ್ಲ ಬಗೆಯ ಅಪಾರ ಪದಾರ್ಥಗಳ ಮಾಹಿತಿಯನ್ನು ಪುಸ್ತಕದ ರೂಪದಲ್ಲಿ ಹೊರತಂದು ಪ್ರತಿಯೊಬ್ಬರೂ ತಯಾರಿಸಿ ಅದರ



ರುಚಿ ಪಡೆಯುವಂತಬೇಕು. ಇಂಥ ಸಿರಿಧಾನ್ಯ ಅಧಿಕ ಪ್ರಮಾಣದಲ್ಲಿ ಬೆಳೆಯುವಂತಾಗಬೇಕು ಎಂದರು.

ಪಾಕ ಸ್ಪರ್ಧೆಯಲ್ಲಿ ಸಮೃದ್ದ ಪೋಷಕಾಂಶಕ್ಕೆ ಪೂರಕವಾಗಿರುವ ಆಧುನಿಕ ಜೀವನ ಶೈಲಿಗೆ ಅನಿವಾರ್ಯವಾಗಿರುವ ಸಿರಿಧಾನ್ಯಗಳ ಬಗೆ ಬಗೆಯ ಭಕ್ಷ ಬೋಜಗಳು ಬಾಯಲ್ಲಿ ನೀರೂರಿಸುವಂತಾಗಿದ್ದವು. ಸಿರಿಧಾನ್ಯದಿಂದ ತಯಾರಿಸಿದ ಖಾರ ಖಾದ್ಯ, ಸಿಹಿ ಖಾದ್ಯ ಹಾಗೂ ಮರೆತು ಹೋದ 100ಕ್ಕೂ ಹೆಚ್ಚು ಖಾದ್ಯಗಳನ್ನು ಸ್ಪರ್ಧೆಗಳಲ್ಲಿ ಇಡಲಾಗಿದ್ದು, ಮುಖ್ಯವಾಗಿ ಸಜ್ಜೆರೊಟ್ಟಿ, ಹುಣಸೆ, ರಾಗಿ ಶಂಕರಪಾಳೆ, ತಾಲಿಪಟ್ಟು, ಜೋಳದ, ಸಜ್ಜೆಯ ಚಕ್ಕುಲಿ, ರಾಗಿ ನಮಕಿನ್, ಜೋಳದ ಕಿಚಡಿ, ವಡೆ, ದೋಸೆ, ಕಡಬು, ಇಡ್ಲಿ, ಉಪ್ಪಿಟ್ಟು, ನುಚ್ಚು, ಖಾರದ ವಡೆ ಖಾರದ ಖಾದ್ಯ ಸ್ಪರ್ಧೆಗೆ ಇಡಲಾಗಿತ್ತು.

ಸಿಹಿ ಖಾದ್ಯದಲ್ಲಿ ನವಣೆ ಹೋಳಿಗೆ, ಉಂಡೆ, ಸಜ್ಜೆ ಮಾದಲಿ, ರಾಗೆ ಹಾಲುಬಾಯಿ, ರಾಗಿ ಹಲ್ವಾ, ಸಜ್ಜೆ ಸಿಹಿ ಕಡಬು, ಸಾಮೆ ಹಿಟ್ಟಿನ ಹಲ್ವಾ, ನವಣಕ್ಕಿ ಹೋಳಿಗೆ, ನವಣೆಯ ಬಾದಾಮಿ ಪುರಿ ಹಾಗೂ ಮರೆತು ಹೋದ ಖಾದ್ಯಗಳಾದ ಅಕ್ಕಿ ಉಂಡೆ, ಕುಂಬಳಕಾಯಿ ಹಲ್ವಾ, ಕಜ್ಜಾಯ, ಹುರುಳಿ ಸಂಗಟಿ, ಹೆಸರು ಬೇಳೆ ಖಾರದ ಹೋಳಿಗೆ, ಅಲಸಂದಿ ಸೆಂಡಿಗೆ, ಗೆಣಸಿನ ಹೋಳಿಗೆ, ಗುಲಕಂದ ರೋಜ, ಬಳವಲಕಾಯಿ ಹಣ್ಣಿನ ರಸ, ಕೊಬ್ಬರಿ ಕಡಬು, ಕುಂಬಳಕಾಯಿ ಗಾರ್ಗಿ, ಬದನೆಕಾಯಿ ರೊಟ್ಟಿ ಸಿಹಿ ತಿಂಡಿ ಸೇರಿದಂತೆ ಇತರೆ ಬಗೆಯ ಖಾದ್ಯಗಳನ್ನು ಪ್ರದರ್ಶನಕ್ಕೆ ಇಡಲಾಗಿತ್ತು.

ಸ್ಪರ್ಧೆಯಲ್ಲಿ ಭಾಗವಹಿಸಿದವರಿಗೆ ಪ್ರತ್ಯೇಕವಾಗಿ ಮೂರು ವಿಭಾಗದಲ್ಲಿ ಪ್ರತ್ಯೇಕ ಬಹುಮಾನ ನೀಡಲಾಗುತ್ತದೆ. ಆಯ್ಕೆಯಾದವರಿಗೆ ಇದೇ ಡಿಸೆಂಬರ 14 ರಂದು ನವನಗರದ ಕಲಾಭವನದಲ್ಲಿ ಜರಗುವ ಜಿಲ್ಲಾ ಮಟ್ಟದ ಸಿರಿಧಾನ್ಯ ಮೇಳ ಕಾರ್ಯಕ್ರಮದಲ್ಲಿ ಬಹುಮಾನ ನೀಡಲಾಗುವುದೆಂದು ಜಂಟಿ ಕೃಷಿ ನಿರ್ದೇಶಕ ಲಕ್ಷ್ಮಣ ಕಳ್ಳೇನ್ನವರ ತಿಳಿಸಿದರು. ಕಾರ್ಯಕ್ರಮದಲ್ಲಿ ಕೃಷಿ ಇಲಾಖೆಯ ಉಪನಿರ್ದೇಶಕ ರೂಢಗಿ, ಜಿ.ಪಂ ಮುಖ್ಯ ಯೋಜನಾಧಿಕಾರಿ ಪುನಿತ್ ಆರ್, ಮುಖ್ಯ ಲೆಕ್ಕಾಧಿಕಾರಿ ಸಿದ್ದರಾಮೇಶ್ವರ ಉಕ್ಕಲಿ ಸೇರಿದಂತೆ ಕೃಷಿ ಇಲಾಖೆಯ ತಾಲೂಕಾ ಮಟ್ಟದ ಅಧಿಕಾರಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ೨೦ ಕಂಪನಿಗಳಿಂದ ನಿರುದ್ಯೋಗಿಗಳಿಗೆ ಉದ್ಯೋಗದ ಅವಕಾಶ

## ಡಿ.15 ರಂದು ಬೃಹತ್ ಉದ್ಯೋಗ ಮೇಳ: ಜಾಲಿಹಾಳ



ಜಮಖಂಡಿ: ಬಾಗಲಕೋಟೆ, ವಿಜಯಪೂರ, ಬೆಳಗಾವಿಭಾಗದ 1200ಕ್ಕೂ ಹೆಚ್ಚು ನಿರುದ್ಯೋಗಿಗಳಿಗೆ ಉದ್ಯೋಗ ಕಲ್ಪಿಸುವ ನಿಟ್ಟಿನಲ್ಲಿ ಡಿಸೆಂಬರ್ 15ರಂದು ನಗರದ ಸರಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ಆವರಣದಲ್ಲಿ ಬೃಹತ್ ಉದ್ಯೋಗ ಮೇಳವನ್ನು ಹಮ್ಮಿಕೊಳ್ಳಲಾಗಿದೆ ಎಂದು ರಾಮತೀರ್ಥ ರೋಟರಿ ಸಂಸ್ಥೆಯ ಅಧ್ಯಕ್ಷ ಕಿರಣ ಜಾಲಿಹಾಳ ಹೇಳಿದರು.

ನಗರದ ರಮಾನಿವಾಸ ಸಭಾಭವನದಲ್ಲಿ ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸ್ಥಳೀಯ ರಾಮತೀರ್ಥ ರೋಟರಿ ಸಂಸ್ಥೆ, ಸರ್ಕಾರಿ ಪ್ರಥಮದರ್ಜೆ ಮಹಿಳಾ ಕಾಲೇಜು, ಆರ್.ಸಿ.. ಡಬ್ಲ್ಯು, ಕನೆಕ್ಟ ಧಾರವಾಡ ಸಹಿತ ವಿವಿಧ ಸಂಸ್ಥೆಗಳ ಸಹಯೋಗದಲ್ಲಿ ಬೃಹತ್ ಉದ್ಯೋಗಮೇಳವನ್ನು ಆಯೋಜಿಸಲಾಗಿದೆ. 20ಕ್ಕೂ ಹೆಚ್ಚು ಹೆಸರಾಂತ ಕಂಪನಿಗಳು ಉದ್ಯೋಗಮೇಳದಲ್ಲಿ ಭಾಗವಹಿಸಿ ಅಭ್ಯರ್ಥಿಗಳನ್ನು ಆಯ್ಕೆ ಮಾಡಿಕೊಳ್ಳಲಿದೆ. 10ನೇ ತರಗತಿಯಿಂದ ಪದವಿವರೆಗೆ ಮತ್ತು ಐಟಿಐ, ಡಿಪ್ಲೋಮಾ ವಿದ್ಯಾರ್ಥಿಗಳು ಉದ್ಯೋಗ ಮೇಳದಲ್ಲಿ ಭಾಗವಹಿಸ ಬಹುದು ಎಂದರು.

ವಿಕಲಚೇತನರಿಗೆ ಹಾಗೂ ತೃತಿಯ ಲಿಂಗ ವಿದ್ಯಾರ್ಥಿಗಳಿಗೆ ಉದ್ಯೋಗ ಅವಕಾಶ ಕಲ್ಪಿಸಲು ಬಹುತೇಕ ಕಂಪನಿಗಳು ಹೆಚ್ಚಿನ ಆಸಕ್ತಿ ತೋರಿದ್ದು ಅಂಥವರಿಗೆ ಸ್ಥಳದಲ್ಲಿ ನೇಮಕಾತಿ ಪತ್ರ ನೀಡಲಾಗುವುದು. ಮೇಳದಲ್ಲಿ ಭಾಗವಹಿಸುವ ಉದ್ಯೋಗ ಆಕಾಂಕ್ಷಿಗಳಿಗೆ ಅಲ್ಪೋಪಹಾರದ ವ್ಯವಸ್ಥೆ ಮಾಡಲಾಗಿದೆ. ಈಗಾಗಲೇ 455 ಜನರು ಆನಲೈನ್ ಮೂಲಕ ತಮ್ಮ ಹೆಸರುಗಳನ್ನು ನೋಂದಾಯಿಸಿಕೊಂಡಿದ್ದಾರೆ. ಬೆಂಗಳೂರು, ಬಾಗಲಕೋಟೆ, ವಿಜಯಪುರ, ಧಾರವಾಡ, ಕಾರವಾರದ ಸಹಿತ ಹೆಸರಾಂತ ಕಂಪನಿಗಳ ಪ್ರತಿನಿಧಿಗಳು ಭಾಗವಹಿಸಲಿದ್ದಾರೆ. 1200 ಜನರಿಗೆ ಉದ್ಯೋಗ ಅವಕಾಶ ನೀಡುವ ಗುರಿ ಹೊಂದಲಾಗಿದೆ. ಡಿಸೆಂಬರ್ 15ರಂದು ಆರಂಭಕ್ಕೂ ಮುಂಚೆವರೆಗೆ ಹೆಸರು ನೊಂದಣಿ ವ್ಯವಸ್ಥೆ ಮಾಡಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಾಧಿಕ್ 9448042120, ನಾಗರಾಜ 9353276359, ಎಸ್.ವೈ.ಪಾಟೀಲ 8073064396, ಜಾಧವ 7019654302 ಇವರನ್ನು ಸಂಪರ್ಕಿಸಬಹುದು ಎಂದರು.

ಪತ್ರಿಕಾಗೋಷ್ಠಿಯಲ್ಲಿ ಎಸ್.ವೈ.ಪಾಟೀಲ, ಚಿದಾನಂದ ಸಿದ್ದಾಪೂರಮಠ, ಜಗದೀಶ ಮನ್ನಿಕೇರಿ, ಮಹಾಂತೇಶ ನರಸನಗೌಡ, ವಿಶ್ವನಾಥ ಸಾವಳಗಿ, ಅಜಿತ ತಿಕೊಟೆಕರ, ಸುರೇಶ ಹಿರೇಮಠ, ಸಿದ್ದು ನ್ಯಾಮಗೌಡ ಡಾ.ರವಿ ಉಮದಿ ಸಹಿತ ಹಲವರು ಇದ್ದರು.

### ಕಂಪ್ಯೂಟರ್ ಡಿಟಿ, ಗ್ರಾಫಿಕ್ ಡಿಸೈನ್ ತರಬೇತಿಗೆ ಡಿ.18 ರಂದು ನೇರ ಸಂದರ್ಶನ

ಬೆಳಗಾವಿ : ಗ್ರಾಮೀಣ ನಿರುದ್ಯೋಗಿ ಯುವಕ-ಯುವತಿಯರಿಗೆ ರುಡ್‌ಸೆಟ್ ಸಂಸ್ಥೆಯ ವತಿಯಿಂದ ಕಂಪ್ಯೂಟರ್ ಡಿಟಿಪಿ ಕುರಿತ 45 ದಿನಗಳ ಉಚಿತ ತರಬೇತಿಗಾಗಿ ಡಿ.18 ರಂದು ನೇರ ಸಂದರ್ಶನವನ್ನು ಆಯೋಜಿಸಲಾಗಿದೆ.

ಆಸಕ್ತರು 18 ರಿಂದ 45 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಬಿಪಿಎಲ್ ಕಾರ್ಡ್ ಅಥವಾ ಜಾಬ್ ಕಾರ್ಡ್ ಹಾಗೂ ಆಧಾರ್ ಕಾರ್ಡ್‌ನ್ನು ಕಡ್ಡಾಯವಾಗಿ ಹೊಂದಿರಬೇಕು. ತರಬೇತಿಯು ಕಡ್ಡಾಯವಾಗಿ ವಸತಿಯುತವಾಗಿದ್ದು, ತರಬೇತಿಯ ಅವಧಿಯಲ್ಲಿ ಉಚಿತವಾಗಿ ಊಟ ಮತ್ತು ವಸತಿ ನೀಡಲಾಗುವುದು. ತರಬೇತಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು.

ಆಸಕ್ತರು ಸಂದರ್ಶನದಲ್ಲಿ ಭಾಗವಹಿಸಲು ಹಾಗೂ ಹೆಚ್ಚಿನ ಮಾಹಿತಿಗಾಗಿ ರುಡ್‌ಸೆಟ್ ಸಂಸ್ಥೆಯ ದೂರವಾಣಿ:9380162042, 9241482541, 9740982585 ಸಂಖ್ಯೆಗೆ ಸಂಪರ್ಕಿಸಬಹುದಾಗಿದೆ ಎಂದು ರುಡ್‌ಸೆಟ್ ಸಂಸ್ಥೆಯ ಬೆಂಗಳೂರು ಶಾಖೆಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಘನತೆಯಿಂದ ಬದುಕಲು ನಿರ್ಬಂಧಗಳು ಬೇಡ:ಡಾ.ಪ್ರಕಾಶ



ಜಮಖಂಡಿ: ಮನುಷ್ಯರು ಘನತೆಯಿಂದ ಬದುಕಬೇಕಾದರೆ ಹಕ್ಕುಗಳು ಹುಟ್ಟಿನಿಂದ ಯಾವುದೇ ನಿರ್ಬಂಧ ಇಲ್ಲದೆ ಲಭಿಸಬೇಕು ಎಂದು ರಾಜ್ಯ ಮಾನವ ಹಕ್ಕುಗಳ ಹಿತರಕ್ಷಣಾ ಮಂಡಳಿ ಪ್ರಧಾನ ಕಾರ್ಯದರ್ಶಿ ಡಾ. ಪ್ರಕಾಶ ಐಹೊಳ್ಳಿ ಹೇಳಿದರು.

ನಗರದ ಸರಕಾರಿ ಪ್ರಥಮದರ್ಜೆ ಮಹಿಳಾ ಕಾಲೇಜು ಮತ್ತು ಸ್ನಾತಕೋತ್ತರ ಕೇಂದ್ರ ಸಭಾಭವನದಲ್ಲಿ ರಾಜ್ಯಶಾಸ್ತ್ರ ವಿಭಾಗ, ಐ.ಕ್ಯೂ.ಎ.ಸಿ. ಮತ್ತು ಕರ್ನಾಟಕ ರಾಜ್ಯ ಮಾನವಹಕ್ಕುಗಳ ಹಿತರಕ್ಷಣಾ ಮಂಡಳಿ ಬೆಳಗಾವಿ ಆಶ್ರಯದಲ್ಲಿ 76ನೇ ಅಂತರ್‌ರಾಷ್ಟ್ರೀಯ ಮಾನವ ಹಕ್ಕುಗಳ ದಿನಾಚರಣೆ ನಿಮಿತ್ತ ಮಾನವ ಹಕ್ಕುಗಳ ಚಿಂತನ-ಮಂಥನ ಎಂಬ ವಿಶೇಷ ಉಪನ್ಯಾಸ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಅಂತರಾಷ್ಟ್ರೀಯ ಮಾನವ ಹಕ್ಕುಗಳ ಘೋಷಣೆಗೆ ಮುಂಚೆಯೆ ಭಾರತದಲ್ಲಿ ಬುದ್ಧ, ಬಸವ, ಮತ್ತು ಅಂಬೇಡ್ಕರ ಸಹಿತ ಅನೇಕರು ಸಮಾಜದ ಕಟ್ಟಕಡೆ ವ್ಯಕ್ತಿಗೂ ಮಾವನ ಹಕ್ಕುಗಳನ್ನು ದೊರಕಿಸಿಕೊಡಲಿಕ್ಕೆ ತಮ್ಮದೇ ಮಾರ್ಗಗಳ ಮೂಲಕ ಹೋರಾಟಗಳನ್ನು ಮಾಡಿ ಅದರಲ್ಲಿ ಯಶಸ್ವಿಯಾಗಿರುವುದನ್ನು ಕಾಣಬಹುದು ಎಂದರು.

ಕರ್ನಾಟಕ ಉಚ್ಚ ನ್ಯಾಯಾಲಯ ನಿವೃತ್ತ ನ್ಯಾಯಾಧೀಶ ಅರಳಿನಾಗರಾಜ ಮಾತನಾಡಿ, 1948 ಡಿಸೆಂಬರ್ 10 ರಂದು ವಿಶ್ವಸಂಸ್ಥೆಯು ಮಾನವ ಹಕ್ಕುಗಳನ್ನು ಘೋಷಣೆ ಮಾಡಿತು. ಮಾನವ ಹಕ್ಕುಗಳನ್ನು ನಮ್ಮ ಸಂವಿಧಾನದ 3 ಮತ್ತು 4ನೇ ಅಧ್ಯಾಯಗಳಲ್ಲಿ ಕಾಣುತ್ತೇವೆ. 3ನೇ ಅಧ್ಯಾಯದಲ್ಲಿ ಬರುವ ಮೂಲಭೂತ ಹಕ್ಕುಗಳು ಮಾನವ ಹಕ್ಕುಗಳ ಸ್ವರೂಪವನ್ನು ಹೊಂದಿವೆ. ಈ ಹಕ್ಕುಗಳು ವ್ಯಕ್ತಿಯ ವ್ಯಕ್ತಿತ್ವವನ್ನು ವಿಕಸನಗೊಳಿಸುವ ಉದ್ದೇಶವನ್ನು ಹೊಂದಿದೆ. ಪ್ರತಿಯೊಬ್ಬ ವಿದ್ಯಾರ್ಥಿಯು ಆಯುಷ್ಯ, ಆರೋಗ್ಯ, ಅವಕಾಶಗಳನ್ನು ಸರಿಯಾಗಿ ಬಳಸಿಕೊಂಡರೇ ವ್ಯಕ್ತಿತ್ವ ವಿಕಾಸವಾಗುತ್ತದೆ. ಆ ವ್ಯಕ್ತಿತ್ವದ ವಿಕಾಸಕ್ಕೆ ಪೂರಕವಾದ ಅವಕಾಶಗಳೇ ಮಾನವ ಹಕ್ಕುಗಳಾಗಿವೆ ಎಂದರು.

ಅಧ್ಯಕ್ಷತೆ ವಹಿಸಿದ ಡಾ. ಸುನಂದಾ ಎಸ್. ಶಿರೂರ ಮಾತನಾಡಿ, ಮಾನವ ಹಕ್ಕುಗಳು ಮಹಿಳೆಯರಿಗೆ ವಿಶೇಷ ಸ್ಥಾನಮಾನ ನೀಡಿದೆ. ವಿದ್ಯಾರ್ಥಿನಿಯರು ಬಳಸಿಕೊಂಡು ಶೈಕ್ಷಣಿಕವಾಗಿ ಪ್ರಗತಿ ಹೊಂದಿ ಸಮಾಜದ ಪ್ರಗತಿಯಲ್ಲಿ ಭಾಗಿಯಾದಾಗ ಮಾತ್ರ ಶಿಕ್ಷಣ ಸಾರ್ಥಕತೆ ಪಡೆಯುತ್ತದೆ ಎಂದರು.

ವೇದಿಕೆಯಲ್ಲಿ ಗಡಿತಜ್ಞರು, ಸಾಹಿತಿ ಡಾ. ರವೀಂದ್ರ ತೋಟಿಗೇರ, ಕಾಶಿನಾಥ ಶಿಂಧೆ, ರಾಜ್ಯ ಮಾನವಹಕ್ಕುಗಳ ಹಿತರಕ್ಷಣಾ ಜಿಲ್ಲಾಧ್ಯಕ್ಷ ಲಕ್ಷಣ ಕಾಂಬಳೆ, ಶಶಿಕಾಂತ ದೊಡಮನಿ, ಸುಭಾಷ ಪುಠಾಣಿ, ಸೋಮಪ್ಪ ಕೆ.ಎಂ., ಎಸ್.ಕೆ.ಡೇಂಬರೆ, ಆರ್.ಎಸ್. ಜಾಧವ, ಬಿ.ಎನ್.ಜಾಧವ, ಡಾ.ಎಸ್. ಎನ್. ಮಣಕವಾಡ, ಎ.ಎಸ್.ಪೂಜಾರಿ, ಡಿ.ಬಿ.ಚನ್ನಪ್ಪಗೋಳ, ಎ.ಬಿ.ಮಾಳಿ, ಸಿ.ವಿ.ಗುಣದಾಳ, ಡಾ. ಜಯಮ್ಮ ಇದ್ದರು.

ಲಕ್ಷ್ಮೀ ಲಮಾಣಿ ಪ್ರಾರ್ಥಿಸಿದರು. ಡಾ.ಎಂ.ಎಂ.ಅಂಬಲಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಡಾ.ವಿ.ಆರ್. ದಳವಾಯಿ ಸ್ವಾಗತಿಸಿದರು. ಎಸ್.ಜಿ.ಕಾಂಬಳೆ, ಎಸ್.ಪಿ.ಆಲಗೂರ ನಿರೂಪಿಸಿದರು. ಎಸ್. ಎಲ್.ಕೋಟ್ಯಾಳ ವಂದಿಸಿದರು.

# ಕಲ್ಲೋಳಿಯಲ್ಲಿ ಬಸವೇಶ್ವರ ಸರ್ಕಲ್ ಹತ್ತಿರ ರಸ್ತೆ ತಡೆ ಪ್ರತಿಭಟನೆ



ಮೂಡಲಗಿ : ಲಿಂಗಾಯತ ಪಂಚಮಸಾಲಿ ಸಮಾಜದ 2ಎ ಮೀಸಲಾತಿಗೆ ಒತ್ತಾಯಿಸಿ ಶಾಂತಿಯುತವಾಗಿ ಪ್ರತಿಭಟನೆ ಮಾಡುತ್ತಿರುವಂತಹ ಪಂಚಮಸಾಲಿ ಸಮಾಜದ ಸ್ವಾಮೀಜಿಗಳು, ಮುಖಂಡರು ಹಾಗೂ ಕಾರ್ಯಕರ್ತರ ಮೇಲೆ ರಾಜ್ಯ ಸರ್ಕಾರ ಮನಸೋ ಇಚ್ಛೆ ಹಲ್ಲೆ ಮಾಡಿ ಸಾಕಷ್ಟು ಜನರು ತೊಂದರೆಗೊಳಗಾಗಿದ್ದನ್ನು ಖಂಡಿಸಿ ಇವತ್ತು ಸ್ವಾಮೀಜಿಗಳ ಕರೆಯ ಮೇರೆಗೆ ರಾಜ್ಯಾದಾದ್ಯಂತ ಪ್ರತಿಭಟನೆ ನಡೆಸಲಾಗುತ್ತಿದೆ ಎಂದು ರಾಜ್ಯಸಭಾ ಸಂಸದ ಈರಣ್ಣ ಕಡಾಡಿ ಹೇಳಿದರು.

ಕಲ್ಲೋಳಿ ಪಟ್ಟಣದ ಬಸವೇಶ್ವರ ಸರ್ಕಲ್ ಹತ್ತಿರ ರಸ್ತೆ ತಡೆ ಪ್ರತಿಭಟನೆ ನಡೆಸಿ ಮಾತನಾಡಿದ ಸಂಸದ ಈರಣ್ಣ ಕಡಾಡಿ ಅವರು ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಹೋರಾಟ ನಮ್ಮ ಹಕ್ಕು. ಸಮಾಜದ ಜನರಿಗೆ ಶಿಕ್ಷಣ ಮತ್ತು ಉದ್ಯೋಗ ಮೀಸಲಾತಿಗೆ ಒತ್ತಾಯಿಸಿ ನಮ್ಮ ಹೋರಾಟ ನಡೆದಿದೆ. ಮುಂಬರುವ ದಿನಗಳಲ್ಲಿ ಯಶಸ್ವಿಯಾಗುತ್ತದೆ. ಒಗ್ಗಟ್ಟಿನಿಂದ ನಾವೆಲ್ಲರೂ ಸೇರಿ ಶಾಂತಿಯುತ ಹೋರಾಟ ಮಾಡೋಣ ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗಬಾರದು ಎಂದು ಪ್ರತಿಭಟನಾಗಾರರಿಗೆ ಮನವಿ ಮಾಡಿದರು.

ರಾಜ್ಯ ಸರ್ಕಾರ ಆದಷ್ಟು ಬೇಗ ಕ್ರಮ ತೆಗೆದುಕೊಳ್ಳದಿದ್ದರೇ ಸಾರ್ವಜನಿಕರ ಮತ್ತು ಸಮಾಜದ ಆಕ್ರೋಶಕ್ಕೆ ಗುರಿಯಾಗಬೇಕಾಗುತ್ತದೆ ಎಂದು ಎಚ್ಚರಿಗೆ ನೀಡಿದರು.

ಬಸವರಾಜ ಕಡಾಡಿ, ಅಜೀತ ಬೆಳಕೂಡ, ಪ್ರಭು ಕಡಾಡಿ, ಸಿದ್ದಪ್ಪ ಮುಗಳಿ, ಭೀಮರಾಯ ಕಡಾಡಿ ಸಿದ್ದಪ್ಪ ಖಾನಾಪೂರ, ಶಿವಾನಂದ ಹೆಬ್ಬಾಳ, ಅಜೀತ ಚಿಕ್ಕೋಡಿ ಧರೆಪ್ಪಾ ಖಾನಗೌಡ್ರ, ಮಲ್ಲಪ್ಪ ಹೆಬ್ಬಾಳ, ರಾಮಪ್ಪ ಹಡಗಿನಾಳ, ಶಂಕರ ಗೋರೋಶಿ, ಹಣಮಂತ ಕಡಾಡಿ ಮುತ್ತೆಪ್ಪ ದಬಾಡಿ, ಭೀಮಶಿ ಹೆಬ್ಬಾಳ, ಮಲ್ಲಪ್ಪ ಮಟಗಾರ, ರಾಮಪ್ಪ ಹೆಬ್ಬಾಳ, ಬಾಳಪ್ಪ ಮಟಗಾರ, ಶಂಕರ ಕಡಾಡಿ ಸೇರಿದಂತೆ ಲಿಂಗಾಯರ ಸಮಾಜದ ಅನೇಕರು ಉಪಸ್ಥಿತರಿದ್ದರು.

# ಮಹಾಲಿಂಗೇಶ್ವರ ಕಾರ್ತಿಕೋತ್ಸವ ಸಂಪನ್ನ : ಮಹಾಲಿಂಗಪುರ ಜನತೆ ಪ್ರಸನ್ನ

**ಶಿವಲಿಂಗ ಸಿದ್ನಾಳ**

ಮಹಾಲಿಂಗಪುರ: ಪವಾಡ ಪುರುಷ, ಭಕ್ತರ ಕಾಮಧೇನು ಕಲ್ಪವೃಕ್ಷ ಶ್ರೀ ಮಹಾಲಿಂಗೇಶ್ವರ ಕಾರ್ತಿಕೋತ್ಸವ ಗುರುವಾರ ಮುಸ್ಸಂಜೆ ದೀಪ ಹಚ್ಚುವುದರಿಂದ ಆರಂಭವಾಗಿ ಶುಕ್ರವಾರ ಕಾಯಿ ಒಡೆದು ನೈವೇದ್ಯ ಅರ್ಪಸುವ ಮೂಲಕ ಸಂಪನ್ನಗೊಂಡಿತು. ಕಾರ್ತಿಕೋತ್ಸವ ಮುಗಿಯುತ್ತಿದ್ದಂತೆ ಮಹಾಲಿಂಗಪುರ ಜನತೆ ಪ್ರಸನ್ನಗೊಂಡಿತು. ಕಾರಣವೇನೆಂದರೆ ದೀಪಾವಳಿಯಿಂದ ಸ್ಥಗಿತಗೊಂಡಿದ್ದ ಶುಭಕಾರ್ಯ, ವ್ಯಾಪಾರ, ವಹಿವಾಟು ಈ ದಿನದಿಂದ ಮತ್ತೆ ಆರಂಭಗೊಂಡವು.

**ವಿಶೇಷ ನಂಬಿಕೆ:** ದೀಪಾವಳಿ ಪಾಡ್ಯದ ದಿನದಿಂದ ಈ ಪಟ್ಟಣ ಹಗೂ ಸುತ್ತಲಿನ ಗ್ರಾಮಗಳಲ್ಲಿ ಯಾವುದೇ ಶುಭ ಕಾರ್ಯ ಮಾಡುವುದಿಲ್ಲ, ಗೃಹಪ್ರವೇಶ, ಕನ್ಯಾನ್ವೇಷನೆ, ನಿಶ್ಚಿತಾರ್ಥ, ಮದುವೆ, ಸೀಮಂತ ಕಾರ್ಯ ಮಾಡುವುದಿಲ್ಲ, ಗರ್ಭಿಣಿಯರನ್ನು ಹೆರಿಗೆಗೆ ತವರಿಗೆ ಕಳಿಸುವುದಿಲ್ಲ, ಯಾವುದೇ ಖರೀದಿ, ಹೊಸ ವ್ಯವಹಾರ



ಮಾಡುವುದಿಲ್ಲ, ಪೊರಕೆ, ಪಾದರಕ್ಷೆ ಖರೀದಿಸುವುದಿಲ್ಲ. ಹೀಗಾಗಿ ವ್ಯಾಪಾರವಿಲ್ಲದೇ ಪಟ್ಟಣದ ಅಂಗಡಿ ಮುಂಗಟ್ಟೆಗಳು ಬಿಕೋ ಎನ್ನುತ್ತಿರುತ್ತವೆ. ಆದ್ದರಿಂದಲೇ ಕಾರ್ತಿಕೋತ್ಸವ ಸಂಪನ್ನವಾದ ಮೇಲೆ ಸಾರ್ವಜನಿಕರು ಪ್ರಸನ್ನರಾಗುತ್ತಾರೆ.

ಗುರುವಾರ ಜರುಗಿದ ಕಾರ್ತಿಕೋತ್ಸವ ನಿಮಿತ್ತ ಭಕ್ತರು ಮನೆ ಶುಚಿಗೊಳಿಸಿ ಬೀಗರನ್ನು ಆಹ್ವಾನಿಸಿ ಸಂಜೆ ಮಹಾಲಿಂಗೇಶ್ವರ ದೇವಸ್ಥಾನಕ್ಕೆ ತೆರಳಿ ದೀಪಗಳಿಗೆ ಎಣ್ಣೆ ಹಾಕಿ, ಪೂಜೆ ಸಲ್ಲಿಸಿದರು. ಬೆಳಗ್ಗೆ ಮಹಾಲಿಂಗೇಶ್ವರ ಗದ್ದುಗೆಗೆ ವಿಶೇಷ ಪುಷ್ಪಾಲಂಕಾರ ಮಾಡಿ ಪೂಜೆ ಸಲ್ಲಿಸಲಾಯಿತು. ತಳಿರು-ತೋರಣ ಹಾಗೂ ದೀಪಗಳಿಂದ ದೇವಾಲಯ ಸಿಂಗರಿಸಲಾಗಿತ್ತು.

ನಂತರ ರೇವಡಿಗಿಡದ ಮಹಾಲಿಂಗೇಶ್ವರ, ಬುದ್ನಿಪಿಡಿಯ ಮಹಾಲಿಂಗೇಶ್ವರ ದೇವಸ್ಥಾನಗಳಿಗೂ ಪೂಜೆ ಸಲ್ಲಿಸಿ ಕಾರ್ತಿಕೋತ್ಸವಕ್ಕೆ ಶ್ರೀಗಳು ಚಾಲನೆ ನೀಡಿದರು. ಮಹಾಲಿಂಗೇಶ್ವರ ದೇವಸ್ಥಾನದಿಂದ ಚನ್ನಗೀರೇಶ್ವರ ದೇವಸ್ಥಾನದವರೆಗೆ ಪಲ್ಲಕ್ಕಿ ಮತ್ತು ನಂದಿಕೋಲ ಉತ್ಸವ ಜರುಗಿತು.

ಚನ್ನಗಿರೇಶ್ವರ ದೇವಸ್ಥಾನ ಹಾಗೂ ಮಹಾಲಿಂಗೇಶ್ವರರ ಅಷ್ಟಲಿಂಗ ಮುದ್ರೆಗಳ ದೇವಸ್ಥಾನಗಳಲ್ಲಿ ವಿಶೇಷ ಪೂಜೆ, ಅನ್ನ ಸಂತರ್ಪಣೆ ಕಾರ್ಯಕ್ರಮ ನಡೆದವು. ತಡರಾತ್ರಿ 12ವರೆಗೆ ದೇವಸ್ಥಾನಕ್ಕೆ ಸಾವಿರಾರು ಭಕ್ತರು ದೇವಸ್ಥಾನ ದೀಪಗಳಿಗೆ ಎಣ್ಣೆ ಹಾಕಿ ಭಕ್ತಿಯ ಸೇವೆ ಸಲ್ಲಿಸಿದರು.

ಕಾರ್ತಿಕೋತ್ಸವ ದಿನ ಇಡೀ ಊರಲ್ಲಿ ಒಂದು ಹಬ್ಬದ ವಾತಾವರಣವೇ ಸೃಷ್ಟಿಯಾಗಿತ್ತು. ವಾಡಿಕೆಯಂತೆ ದೀಪಾವಳಿ ಪಾಡ್ಯದಿನ ಪರಸ್ಥಳಕ್ಕೆ ಹೋದ ಸ್ಥಳೀಯರು ಅಂದು ಕಡ್ಡಾಯವಾಗಿ ಮರಳಿ ಪಟ್ಟಣಕ್ಕೆ ಬಂದು ಕಾರ್ತಿಕೋತ್ಸವದಲ್ಲಿ ಭಾಗವಹಿಸಿದರು. ಕರಡಿ ಮಜಲು ಕಲಾವಿದರು ಕರಡಿ ಮಜಲು ಸೇವೆ ಸಲ್ಲಿಸಿದರು. ಜನದಟ್ಟನೆಯ ನಿಯಂತ್ರಣಕ್ಕಾಗಿ ಪೊಲೀಸರು ಬ್ಯಾರಿಕೇಡ್‌ಗಳನ್ನು ಅಳವಡಿಸಿ ಸೂಕ್ತ ಬಂದೋಬಸ್ತ ಒದಗಿಸಿದ್ದರು.

### ಬೆಂಗಳೂರು ಉಚ್ಚ ನ್ಯಾಯಾಲಯದ ಪ್ರಧಾನ ಪೀಠದಲ್ಲಿಯೇ ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ, ಶಿವಮೊಗ್ಗ, ಚಿಕ್ಕಮಗಳೂರು, ಕೊಡಗು ಜಿಲ್ಲೆಗಳ ಸಾರ್ವಜನಿಕರ ವ್ಯಾಜ್ಯಗಳ ನಿರ್ವಹಣೆ

ಬೆಳಗಾವಿ ಸುವರ್ಣಸೌಧ : ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ, ಶಿವಮೊಗ್ಗ, ಚಿಕ್ಕಮಗಳೂರು ಮತ್ತು ಕೊಡಗು ಜಿಲ್ಲೆಗಳ ಸಾರ್ವಜನಿಕರ ವ್ಯಾಜ್ಯಗಳನ್ನು ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಇಲ್ಲಿನ ಪ್ರಧಾನ ಪೀಠದಲ್ಲಿ ನಿರ್ವಹಿಸಲಾಗುತ್ತಿದೆ. ಪ್ರಸ್ತುತ ಈಗ ಇರುವ ವ್ಯವಸ್ಥೆಯಲ್ಲಿಯೇ ಈ ಭಾಗದ ವ್ಯಾಜ್ಯಗಳನ್ನು ಸಮರ್ಥವಾಗಿ ಸದರಿ ಪೀಠದಲ್ಲಿಯೇ ನಿರ್ವಹಿಸಲಾಗುತ್ತಿದೆ ಎಂದು ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ತಿಳಿಸಿದ್ದಾರೆ.

ವಿಧಾನ ಪರಿಷತ್ತನಲ್ಲಿ ಸದಸ್ಯರಾದ ಐವಾನ್ ಡಿ'ಸೋಜಾ ಅವರು, ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ, ಶಿವಮೊಗ್ಗ, ಚಿಕ್ಕಮಗಳೂರು ಮತ್ತು ಕೊಡಗು ಜಿಲ್ಲೆಗಳ ವ್ಯಾಪ್ತಿಗೆ ಬರುವ ಉಚ್ಚ ನ್ಯಾಯಾಲಯ ಪೀಠವನ್ನು ಮಂಗಳೂರಿನಲ್ಲಿ ಸ್ಥಾಪಿಸಲು ಸರ್ಕಾರ ಉಚ್ಚ ನ್ಯಾಯಾಲಯದೊಂದಿಗೆ ಚರ್ಚಿಸಿ ಕ್ರಮಕೈಗೊಳ್ಳಬೇಕೆಂಬ ಬೇಡಿಕೆಯ ಬಗ್ಗೆ ನಿಯಮ 72ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಮುಖ್ಯಮಂತ್ರಿಗಳು ಲಿಖಿತ ಉತ್ತರ ನೀಡಿದ್ದಾರೆ.

ಭಾರತ ಸಂವಿಧಾನದ ಅನುಚ್ಛೇದ 214ರಲ್ಲಿ ಪ್ರತಿ ರಾಜ್ಯಕ್ಕೆ ಒಂದು ಉನ್ನತ ನ್ಯಾಯಾಲಯ ಇರಬೇಕೆಂದು ಆಸ್ಪದ ಕಲ್ಪಿಸಲಾಗಿದೆ. ರಾಜ್ ಪುನರ್ ವಿಂಗಡಣಾ ಕಾಯ್ದೆ 1956 (ಖ್ಷಿಜ ಖಣಚಿಣಜ ಖಜ-ಡಿರಿಂಚಿಟಿಟಿಚಿಣುಠಿ ಂಥಿಣ, 1956) ರ ಕಲಂ 51(3)ರನ್ವಯ, ಆಯಾ ರಾಜ್ಯಗಳ ಉಚ್ಚ ನ್ಯಾಯಾಲಯಗಳ ಮುಖ್ಯ ನ್ಯಾಯಮೂರ್ತಿಗಳು ಮಾನ್ಯ ರಾಜ್ಯಪಾಲರ ಅನುಮೋದನೆಯೊಂದಿಗೆ ರಾಜ್ಯದ ಇತರೆ ಯಾವುದೇ ಸ್ಥಳದಲ್ಲಿ ಸಂಚಾರಿ ಪೀಠವನ್ನು ವ್ಯವಸ್ಥೆಗೊಳಿಸಲು (ಂಣ-ಣುಟಿಧ) ಅಧಿಕಾರ ಹೊಂದಿರುತ್ತಾರೆ. ಅದರಂತೆ, ರಾಜ್ಯ ಉಚ್ಚ ನ್ಯಾಯಾಲಯದ 19.10.2004ರ ಅಧಿಸೂಚನೆಯನ್ವಯ ಕರ್ನಾಟಕ ರಾಜ್ಯದಲ್ಲಿ ಧಾರವಾಡ ಹಾಗೂ ಕಲಬುರಗಿಯಲ್ಲಿ ಉಚ್ಚ ನ್ಯಾಯಾಲಯದ ಸಂಚಾರಿ ಪೀಠಗಳನ್ನು ಆರಂಭಿಸಲಾಗಿದೆ.

ತರುವಾಯ, ಭಾರತದ ರಾಷ್ಟ್ರಪತಿಯವರ ದಿನಾಂಕ: 8.8.2013ರ ಆದೇಶದನ್ವಯ ಹಾಗೂ ಕರ್ನಾಟಕ ಉಚ್ಚ ನ್ಯಾಯಾಲಯದ ದಿನಾಂಕ:23.08.2013ರ ಅಧಿಸೂಚನೆಯನ್ವಯ ರಾಜ್ಯದ ಗುಲ್ಬರ್ಗಾ ಹಾಗೂ ಧಾರವಾಡದ ಸಂಚಾರಿ ಪೀಠಗಳನ್ನು ಖಾಯಂ ಪೀಠಗಳನ್ನಾಗಿ ಸ್ಥಾಪಿಸಲಾಗಿದೆ ಎಂದು ಮುಖ್ಯಮಂತ್ರಿಗಳು ಲಿಖಿತ ಉತ್ತರ ನೀಡಿದ್ದಾರೆ.

### ಉತ್ತರ ಕರ್ನಾಟಕ ಭಾಗದಲ್ಲಿ 432 ನವೋದ್ಯಮಗಳ ನೋಂದಣಿ -ಸಚಿವ ಪ್ರಿಯಾಂಕ್ ಖರ್ಗೆ

**ಬೆಳಗಾವಿ** ಸುವರ್ಣಸೌಧ, -ಉತ್ತರ ಕರ್ನಾಟಕ ಭಾಗದಲ್ಲಿ ಉದ್ಯೋಗ ಸೃಷ್ಟಿಯ ಉದ್ದೇಶದಿಂದ ಬಿಯಾಂಡ್ ಬೆಂಗಳೂರು ಕಾರ್ಯಕ್ರಮದಡಿಯಲ್ಲಿ 432 ನವೋದ್ಯಮ ಉದ್ದಿಮೆಗಳು ಆರಂಭಕ್ಕೆ ನೋಂದಣಿಯನ್ನು ಮಾಡಿಕೊಂಡಿವೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.

ಅವರು ಇಂದು ವಿಧಾನ ಪರಿಷತ್ತಿನಲ್ಲಿ ನಡೆದ ಉತ್ತರ ಕರ್ನಾಟಕ ಭಾಗದ ಜ್ವಲಂತ ಸಮಸ್ಯೆಗಳ ಬಗ್ಗೆ ನಡೆದ ವಿಶೇಷ ಚರ್ಚೆ ಸಂದರ್ಭದಲ್ಲಿ ಉತ್ತರಿಸಿದರು. ಎಲೆಕ್ಟ್ರಾನಿಕ್ ವಸ್ತುಗಳ ತಯಾರಿಕೆ , ಹೊಸ ಆವಿಷ್ಕಾರಗಳನ್ನು ಮಾಡುವ ನಿಟ್ಟಿನಲ್ಲಿ 432 ನವೋದ್ಯಮ ಉದ್ದಿಮೆಗಳ ಆರಂಭಕ್ಕೆ ನೋಂದಣಿ ಮಾಡಿಕೊಂಡಿದ್ದು ಆ ಮೂಲಕ ಈ ಭಾಗದಲ್ಲಿ ಹೆಚ್ಚಿನ ಉದ್ಯೋಗ ಸೃಷ್ಟಿ ಯಾಗಲಿದ್ದು, ನಿಪುಣ ಕರ್ನಾಟಕ ಯೋಜನೆಯಡಿ ಕೂಡಾ ಈ ಭಾಗಕ್ಕೆ ಹೆಚ್ಚಿನ ಅವಕಾಶಗಳನ್ನು ನೀಡಲಾಗುತ್ತಿದೆ ಎಂದರು.

ಸದಸ್ಯ ಕೇಶವ ಪ್ರಸಾದ್ ಮಾತನಾಡಿ, ಉತ್ತರ ಕರ್ನಾಟಕ ಭಾಗದಲ್ಲಿ ಹಲವು ಐತಿಹಾಸಿಕ ಪ್ರಸಿದ್ಧ ದೇವಾಲಯಗಳಿದ್ದು ಇಲ್ಲಿ ಟೆಂಪಲ್ ಟೂರಿಸಮ್ ಅಭಿವೃದ್ಧಿ ಪಡಿಸಬಹುದು ಅಲ್ಲದೆ ಹೆಚ್ಚಿನ ಸಂಖ್ಯೆಯ ಅಣೆಕಟ್ಟುಗಳಿದ್ದು ಅವುಗಳ ಹಿನ್ನೀರಿನಲ್ಲಿ ಜಲ ಸಾಹಸ ಕ್ರೀಡೆಗಳನ್ನು ಆಯೋಜಿಸಬಹುದಾಗಿದೆ. ಕರಡಿಧಾಮ, ಪಕ್ಷಿಧಾಮ ಗಳಿದ್ದು , ರೋಪ್ ವೇ ಮೂಲಕ ಆಕರ್ಷಿಸಬಹುದಾದ ಸ್ಥಳಗಳಿದ್ದು,ರಸ್ತೆ, ರೈಲು ಮಾತ್ತು ವಾಯು ಮಾರ್ಗದ ವ್ಯವಸ್ಥೆಯಿದ್ದು ಇವೆಲ್ಲವುಗಳನ್ನು ಬಳಸಿಕೊಂಡು ಈ ಭಾಗವನ್ನು ಅಭಿವೃದ್ಧಿಗೊಳಿಸಬೇಕು ಎಂದರು.

ಸದಸ್ಯ ಎಂ. ನಾಗರಾಜ್ ಮಾತನಾಡಿ, ಈ ಭಾಗದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಕೈಗಾರಿಕೆಗಳ ಸ್ಥಾಪನೆ ಆಗಬೇಕು, ನೀರಾವರಿ ಸಮಸ್ಯೆಗಳ ಬಗ್ಗೆ ಕೇಂದ್ರದ ಮೇಲೆ ಒತ್ತಡ ತಂದು ಬಗೆಹರಿಸಿಕೊಳ್ಳಬೇಕು ಎಂದರು.

ಸದಸ್ಯರಾದ ಡಿ.ಟಿ.ಶ್ರೀನಿವಾಸ್, ಪ್ರತಾಪ್ ಸಿಂಹ ನಾಯಕ್ ಮಾತನಾಡಿದರು.

# ಲಾಠಿಚಾರ್ಜ್ ಖಂಡಿಸಿ- ಪಂಚಮಸಾಲಿ ಸಮಾಜದಿಂದ ಕಾಗವಾಡದಲ್ಲಿ ರಸ್ತೆ ತಡೆದು ಪ್ರತಿಭಟನೆ; ರಾಜ್ಯ ಸರ್ಕಾರದ ವಿರುದ್ಧ ಆಕ್ರೋಶ..!

ಮೋಳೆ:- ಪಂಚಮಸಾಲಿ ಸಮುದಾಯದ ಶಾಂತಿಯುತ ಹೋರಾಟವನ್ನು ಹತ್ತಿಕ್ಕಲು ಮಂಗಳವಾರ ಬೆಳಗಾವಿಯಲ್ಲಿ ಪ್ರತಿಭಟನೆ ನಿರತರ ಮೇಲೆ ಲಾಠಿಚಾರ್ಜ್ ಮಾಡಿ, ಹೋರಾಟದ ದಿಕ್ಕು ತಪ್ಪಿಸುವ ಪ್ರಯತ್ನ ಸರ್ಕಾರ ಮಾಡುತ್ತಿದ್ದು, ಸರ್ಕಾರದ ನಡೆ ಖಂಡನೀಯವಾಗಿದ್ದು, ಲಾಠಿಚಾರ್ಜ ಮಾಡಲು ಆದೇಶ ನೀಡಿರುವ ಎಡಿಜಿಪಿ ಆರ್. ಹಿತೇಂದ್ರ ಅವರನ್ನು ಕೂಡಲೇ ವಜಾಗೊಳಿಸಬೇಕೆಂದು ಆಗ್ರಹಿಸಿ, ತಾಲೂಕಿನ ಪಂಚಮಸಾಲಿ ಸಮುದಾಯದ ಮುಖಂಡರು ತಹಶೀಲ್ದಾರ ಮುಖಾಂತರ ಮನವಿ ಸಲ್ಲಿಸಿ, ಆಗ್ರಹಿಸಿದ್ದಾರೆ.

ಗುರುವಾರ ದಿ. 12 ರಂದು ಕಾಗವಾಡ ಪಟ್ಟಣದ ಚನ್ನಮ್ಮಾ ವೃತ್‌ದಲ್ಲಿ ಮಾನವ ಸರಪಳಿ ನಿರ್ಮಿಸಿ, ರಸ್ತೆ ತಡೆದು, ಪ್ರತಿಭಟನೆ ನಡೆಸಿ, ಉಪ ತಹಶಿಲ್ದಾರ ಅಣ್ಣಾಸಾಹೇಬ ಕೋರೆ ಅವರ ಮುಖಾಂತರ ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಸಿ, ಆಗ್ರಹಿಸಿದರು.

ತಾಲೂಕು ಪಂಚಮಸಾಲಿ ಸಮಾಜದ ಅಧ್ಯಕ್ಷ ಬಸನಗೌಡ ಪಾಟೀಲ (ಮಮ್ದಾಳ) ಮಾತನಾಡಿ, ಕಳೆದ ಮೂರ್‍ನಾಲ್ಕು ವರ್ಷಗಳಿಂದ ಜಯಬಸವ ಮೃತ್ಯುಂಜಯ ಸ್ವಾಮೀಜಿ ನೇತೃತ್ವದಲ್ಲಿ ಶಾಂತಿಯುತ ಹೋರಾಟ ಮಾಡುತ್ತ ಬಂದಿದ್ದು, ಕಳೆದ ಮಂಗಳವಾರ ಸರ್ಕಾರ ಪೋಲಿಸರ ಮೂಲಕ ಲಿಂಗಾಯತ



ಪಂಚಮಸಾಲಿಗರ ಮೇಲೆ ಲಾಠಿ ಚಾರ್ಜ ಮಾಡಿಸಿದೆ. ಇದಕ್ಕೆ ಪಂಚಮಸಾಲಿ-ಲಿಂಗಾಯತರು ಮುಂಬರುವ ದಿನಗಳಲ್ಲಿ ಉತ್ತರ ಕೊಡಲಿದ್ದಾರೆ. ಕೂಡಲೇ ಲಾಠಿ ಬೀಸಲು, ಆದೇಶಿಸಿದ ತಪ್ಪಿತಸ್ಥ ಪೋಲೀಸ ಅಧಿಕಾರಿಗಳನ್ನು ಅಮಾನತ್ತು ಮಾಡಬೇಕು. ಸರ್ಕಾರ ಸರ್ವಾಧಿಕಾರಿಂತೆ ವರ್ತಿಸದೇ ನಮಗೆ ನಮ್ಮ ನ್ಯಾಯಯುತ ಬೇಡಿಕೆಯಾದ 2-ಎ ಮೀಸಲಾತಿ ನೀಡಬೇಕು. ಇಲ್ಲವಾದಲ್ಲಿ ನಮ್ಮ ಸ್ವಾಮೀಜಿ ನೇತೃತ್ವದಲ್ಲಿ ಎಲ್ಲ ರೀತಿಯ ಹೋರಾಟಕ್ಕೆ ನಾವು ಸದಾ ಸಿದ್ದರಿದ್ದೇವೆ. ನಮ್ಮ ಹೋರಾಟ ಮೀಸಲಾತಿ ಸಿಗುವ ವರೆಗೂ ನಿರಂತರ ನಡೆಯಲಿದೆ ಎಂದು ಹೇಳಿದರು.

ಈ ವೇಳೆ ನ್ಯಾಯವಾದಿ ರಾಹುಲ ಕಟಗೇರಿ ಮಾತನಾಡಿ, ರಾಜ್ಯ ಸರ್ಕಾರ ಪಂಚಮಸಾಲಿ ಸಮಾಜದ ಮೇಲೆ ಅನ್ಯಾಯ ಮಾಡುತ್ತಿದೆ. ಇದನ್ನು ಖಂಡಿಸಿ, ಸರ್ಕಾರದಲ್ಲಿರುವ ನಮ್ಮ ಸಮಾಜದ ಅರ್ಧದಷ್ಟು ಶಾಸಕರು ಮತ್ತು ಸಚಿವರು ಕೂಡಲೇ ರಾಜೀನಾಮೆ ನೀಡಿ, ಹೊರ ಬಂದು ಸರ್ಕಾರಕ್ಕೆ ಬಿಸಿ ಮುಟ್ಟಿಸಬೇಕು. ಯಾವ ಸರ್ಕಾರವು ಲಿಂಗಾಯತ ಪಂಚಮಸಾಲಿಗರ ಮೇಲೆ ಕೈ ಮಾಡಿಲ್ಲಾ. ಆದರೆ ಈಗಿನ ಸರಕಾರ ಕೈ ಮಾಡಿ, ನಮ್ಮ ಮುಖಂಡರು ಹಾಗೂ ವಕೀಲರ ಮೇಲೆ ಪ್ರಕರಣ ದಾಖಲಿಸಿ, ನಮ್ಮ ಹೋರಾಟ ಹತ್ತಿಕ್ಕುವ ಕೆಲಸ ಮಾಡುತ್ತಿದೆ. ಇದನ್ನು ಕೂಡಲೇ ನಿಲ್ಲಿಸಿ, ಪ್ರಕರಣ ಹಿಂಪಡೆದು, ನಮ್ಮ ಸ್ವಾಮೀಜಿಗಳ ಕ್ಷಮೆ ಕೇಳಬೇಕು. ಇಲ್ಲವಾದಲ್ಲಿ ನಮ್ಮ ಹೋರಾಟ ಉಗ್ರವಾಗಲಿದೆ ಎಂದು ಹೇಳಿದರು.

ಮುಂಜಾಗ್ರತಾ ಕ್ರಮವಾಗಿ ಪಿಎಸ್‌ಐ ಜಿ.ಜಿ. ಬಿರಾದರ ಹಾಗೂ ರಾಕೇಶ ಬಗಲಿ ನೇತೃತ್ವದಲ್ಲಿ ಬಂದೋಬಸ್ತ ಮಾಡಲಾಗಿತ್ತು.

ಈ ವೇಳೆ ಮುಖಂಡರಾದ ಬಸನಗೌಡಾ ಪಾಟೀಲ (ಬೊಮ್ಮನಾಳ), ಉಮೇಶಗೌಡ ಪಾಟೀಲ, ಸೌರಭ ಪಾಟೀಲ, ನಾಥಗೌಡ ಪಾಟೀಲ, ಅಣ್ಣಾಗೌಡಾ ಪಾಟೀಲ, ರಮೇಶ ಚೌಗಲೆ, ರಾಜಗೌಡಾ ಪಾಟೀಲ, ಜ್ಯೋತಿಕುಮಾರ ಪಾಟೀಲ, ರಾಘವೇಂದ್ರ ಜಾಯಗೊಂಡೆ ಕಾಕಾಸಾಬ ಪಾಟೀಲ, ರಾಹುಲ ಕಟಗೇರಿ, ತಾತ್ಯಾಸಾಬ ಗಡಗೆ, ಪ್ರಕಾಶ ಪಾಟೀಲ, ಅಶೋಕ ಪಾಟೀಲ, ವಿನಾಯಕ ಚೌಗಲೆ, ಸುಭಾಷ ಅಥಣಿ, ಅಶೋಕ ನಾಂದಣಿ, ಬಾಲಕೃಷ್ಣ ಪಾಟೀಲ, ಮಹಾದೇವ ವಡಗಾಂವೆ, ಶಿವಾನಂದ ಪಾಟೀಲ, ರಾಕೇಶ ಪಾಟೀಲ, ಎ.ಜಿ. ಪಾಟೀಲ, ಚೇತನ ಪಾಟೀಲ, ಸೇರಿದಂತೆ ತಾಲೂಕಿನ ನೂರಾರು ಪಂಚಮಸಾಲಿ ಮುಖಂಡರು ಉಪಸ್ಥಿತರಿದ್ದರು.

## ಬೆಳಗಾವಿ ಪತ್ರಿಕಾ ಭವನಕ್ಕೆ ಶಂಕುಸ್ಥಾಪನೆ

# ಸುಸಜ್ಜಿತ ಪತ್ರಿಕಾ ಭವನ ನಿರ್ಮಾಣ: ಸಚಿವ ಸತೀಶ್ ಜಾರಕಿಹೊಳಿ





ಬೆಳಗಾವಿ : ಮಾಧ್ಯಮ ಪ್ರತಿನಿಧಿಗಳ ಬಹುದಿನಗಳ ಆಶಯದಂತೆ ಬೆಳಗಾವಿಯಲ್ಲಿ ಸುಸಜ್ಜಿತ ಪತ್ರಿಕಾ ಭವನ ನಿರ್ಮಾಣ ಮಾಡಲಾಗುವುದು ಎಂದು ಲೋಕೋಪಯೋಗಿ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ್ ಜಾರಕಿಹೊಳಿ ಅವರು ತಿಳಿಸಿದರು.

ಇಲ್ಲಿನ ವಿಶ್ವೇಶ್ವರಯ್ಯ ನಗರದಲ್ಲಿ ಶುಕ್ರವಾರ(ಡಿ.13) ಪತ್ರಿಕಾ ಭವನ ಹಾಗೂ ತೋಟಗಾರಿಕೆ ಇಲಾಖೆ ಕಚೇರಿ ಕಟ್ಟಡಗಳ ಶಂಕುಸ್ಥಾಪನೆ ನೆರವೇರಿಸಿ ಅವರು ಮಾತನಾಡಿದರು.

ಪತ್ರಿಕಾ ಭವನ ನಿರ್ಮಾಣಕ್ಕೆ ಅಗತ್ಯ ನಿವೇಶನವನ್ನು ಒದಗಿಸುವ ಮೂಲಕ ಅನೇಕ ದಿನಗಳ ಬೇಡಿಕೆಯನ್ನು ಈಡೇ–ರಿಸಲಾಗಿದೆ. ಅದೇ ರೀತಿ ಅಗತ್ಯ ಅನುದಾನ ಒದಗಿಸುವ ಮೂಲಕ ಸುಸಜ್ಜಿತ ಪತ್ರಿಕಾ ನಿರ್ಮಾಣ ಮಾಡಲಾಗುವುದು ಎಂದು ಹೇಳಿದರು.

ಇದೇ ಸ್ಥಳದಲ್ಲಿ ತೋಟಗಾ–ರಿಕೆ ಇಲಾಖೆಯ ಕಟ್ಟಡ ನಿರ್ಮಾಣ ಮಾಡುವದರ ಮೂಲಕ ಸಾರ್ವಜನಿಕರಿಗೆ ಉತ್ತಮ ಸೇವೆ ಒದಗಿಸಲಾಗುವದು. ಇಂತಹ ಉತ್ತಮ ಕಟ್ಟಡಗಳನ್ನು ನಿರ್ಮಿಸುವುದರಿಂದ ಎರಡನೇ ರಾಜಧಾನಿ ಬೆಳಗಾವಿಯನ್ನು ಅಭಿವೃದ್ಧಿಪಡಿಸಲು ಅನುಕೂಲವಾಗಲಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ ಜಾರಕಿಹೊಳಿ ಹೇಳಿದರು.

ತೋಟಗಾರಿಕೆ ಇಲಾಖೆ ಸಚಿವರಾದ ಎಸ್.ಎಸ್.ಮಲ್ಲಿಕಾರ್ಜುನ ಅವರು ಮಾತನಾಡಿ, ಬೆಳಗಾವಿಯಲ್ಲಿ ಸಾರ್ವಜನಿಕ–ರಿಗೆ ಅನುಕೂಲ ಆಗುವ ನಿಟ್ಟಿನಲ್ಲಿ ಉತ್ತಮ ಕಟ್ಟಡಗಳನ್ನು ನಿರ್ಮಾಣ ಮಾಡುತ್ತಿರುವುದು ಸಂತಸದ ಸಂಗತಿಯಾಗಿದೆ. ಇದರಿಂದ ಬೆಳಗಾವಿ ಅಭಿವೃದ್ಧಿ ಪಥದತ್ತ ಸಾಗಲಿದೆ ಎಂದು ಹೇಳಿದರು.

ಪತ್ರಿಕಾ ಭವನ ಹಾಗೂ ತೋಟಗಾ–ರಿಕೆ ಇಲಾಖೆ ಕಚೇರಿ ಕಟ್ಟಡಗಳು ಸುಸಜ್ಜಿತ ಕಟ್ಟಡಗಳಾಗುವ ಮೂಲಕ ಸಾರ್ವಜನಿಕ–ರಿಗೆ ಉತ್ತಮ ಸೇವೆ ಒದಗಿಸುವಂತಾಗಲಿ ಎಂದು ಆಶಿಸಿದರು.

ಅತಿಥಿಗಳನ್ನು ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಉಪ ನಿರ್ದೇಶಕ ಗುರುನಾಥ ಕಡಬೂರ, ಪತ್ರಿಕಾಭವನದ ಶಂಕುಸ್ಥಾಪನೆಯ ಮೂಲಕ ಮಾಧ್ಯಮ ಪ್ರತಿನಿಧಿಗಳ ಬಹುದಿನಗಳ ಕನಸು ನನಸಾಗುತ್ತಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಬೆಳಗಾವಿ ಉತ್ತರ ವಿಧಾನಸಭಾ ಮತಕ್ಷೇತ್ರದ ಶಾಸಕ ಆಸೀಫ್ (ರಾಜು) ಸೇಠ, ಕಿತ್ತೂರು ವಿಧಾನಸಭಾ ಕ್ಷೇತ್ರದ ಶಾಸಕ ಬಾಬಾಸಾಹೇಬ್ ಪಾಟೀಲ, ಸವದತ್ತಿ ವಿಧಾನಸಭಾ ಮತಕ್ಷೇತ್ರದ ಶಾಸಕ ವಿಶ್ವಾಸ ವೈದ್ಯ, ತೋಟಗಾರಿಕೆ ಇಲಾಖೆ ಕಾರ್ಯದರ್ಶಿ ಡಾ. ಶಮ್ಲಾ ಇಕ್ಬಾಲ್, ತೋಟಗಾರಿಕೆ ಇಲಾಖೆ ನಿರ್ದೇಶಕ ಡಿ. ಎಸ್. ರಮೇಶ, ಮಹಾನಗರ ಪಾಲಿಕೆ ಮಹಾಪೌರರಾದ ಸವಿತಾ ಕಾಂಬಳೆ, ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಭೀಮಾಶಂಕರ ಗುಳೇದ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶಿಂಧೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಜಂಟಿ ನಿರ್ದೇಶಕರಾದ ಮಂಜುನಾಥ್ ಡೊಳ್ಳಿನ, ಹಿರಿಯ ಸಹಾಯಕ ನಿರ್ದೇಶಕ ಜಡಿಯಪ್ಪ ಗೆದ್ಲಗಟ್ಟಿ, ತೋಟಗಾರಿಕೆ ಇಲಾಖೆ ಉಪ ನಿರ್ದೇಶಕ ಮಹಾಂತೇಶ ಮುರಗೋಡ ಮತ್ತಿತರರು ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ಪತ್ರಿಕಾ ಭವನ ನಿರ್ಮಾಣಕ್ಕೆ ಅಗತ್ಯ ನಿವೇಶನವನ್ನು ಒದಗಿಸಿದ ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ್ ಜಾರಕಿಹೊಳಿ ಹಾಗೂ ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಅವರನ್ನು ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ದಿಲೀಪ್ ಕುರಂದವಾಡೆ ಹಾಗೂ ರಾಜ್ಯ ಉಪಾಧ್ಯಕ್ಷರಾದ ಪುಂಡಲೀಕ ಬಾಳೋಜಿ ಅವರು ಸನ್ಮಾನಿಸಿದರು. ಸರ್ವೋತ್ತಮ ಜಾರಕಿಹೊಳಿ, ಪತ್ರಕರ್ತರಾದ ರಾಜು ಗವಳಿ, ಮುರುಗೇಶ ಶಿವಪೂಜಿ ವೇದಿಕೆಯಲ್ಲಿದ್ದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ತೋಟಗಾರಿಕೆ ಇಲಾಖೆ ಸಿಬ್ಬಂದಿಗಳು ಮತ್ತು ಬೆಳಗಾವಿಯ ಸಮಸ್ತ ಪತ್ರಿಕಾ ಬಳಗದವರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

## 50 ಸ್ಥಳೀಯ ಸಂಸ್ಥೆಗಳ ಮೇಲ್ದರ್ಜೆಗೆ ಏರಿಸಲು ಪ್ರಸ್ತಾವನೆ ಸ್ವೀಕಾರ

## ಹಂತ ಹಂತವಾಗಿ ಮೇಲ್ದರ್ಜೆಗೆ ಏರಿಸಲು ಕ್ರಮ: ಸಚಿವ ಬಿ.ಎಸ್.ಸುರೇಶ್

ಬೆಳಗಾವಿ : ರಾಜ್ಯದ ವಿವಿಧ ಕಡೆಗಳಿಂದ ಗ್ರಾಮ ಪಂಚಾಯಿತಿಗಳನ್ನು ಪಟ್ಟಣ ಪಂಚಾಯಿತಿಗಳನ್ನಾಗಿ, ಪಟ್ಟಣ ಪಂಚಾಯಿತಿಗಳನ್ನು ಪುರಸಭೆಗಳನ್ನಾಗಿ, ಪುರಸಭೆಗಳನ್ನು ನಗರಸಭೆಗಳನ್ನಾಗಿ ಮೇಲ್ದರ್ಜೆಗೆ ಏರಿಸುವಂತೆ ಕೋರಿ 50ಕ್ಕೂ ಹೆಚ್ಚು ಪ್ರಸ್ತಾವನೆಗಳನ್ನು ರಾಜ್ಯ ಸರ್ಕಾರ ಸ್ವೀಕ–ರಿಸಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರು ಹಣ–ಕಾಸು ಇಲಾಖೆಯೊಂದಿಗೆ ಚರ್ಚಿಸಿ ಹಂತ ಹಂತವಾಗಿ ಮೇಲ್ದರ್ಜೆಗೆ ಏರಿಸಲು ಕ್ರಮ ಕೈಗೊಳ್ಳುವಂತೆ ಸೂಚಿಸಿದ್ದಾರೆ ಎಂದು ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವ ಬಿ.ಎಸ್.ಸುರೇಶ್ ಹೇಳಿದರು.

ಬೆಳಗಾವಿ ಸುವರ್ಣಸೌಧಲ್ಲಿ ನಡೆಯುತ್ತಿರುವ ಚಳಿಗಾಲ ಅಧಿವೇಶನದಲ್ಲಿ ಶುಕ್ರವಾರ (ಡಿ.13) ಪ್ರಶ್ನೋತ್ತರ ಕಲಾಪದ ವೇಳೆ ಅವರು ಸದನಕ್ಕೆ ಮಾಹಿತಿ ನೀಡಿದರು.

20,000 ಸಾವಿರಕ್ಕೂ ಅಧಿಕ ಜನಸಂಖ್ಯೆ ಇದ್ದರೆ ಮಾತ್ರ ಗ್ರಾಮ ಪಂಚಾಯಿತಿಯನ್ನು ಪಟ್ಟಣ ಪಂಚಾಯಿತಿಯಾಗಿ ಮೇಲ್ದರ್ಜೆಗೆ ಏರಿಸಬಹುದು. ಇದರೊಂದಿಗೆ ಪಟ್ಟಣ ಪಂಚಾಯಿತಿಯಾಗಿ ಪರಿವರ್ತನೆಯಾದ ಮೇಲೆ ಅಗತ್ಯ ಅಧಿಕಾರಿ, ಸಿಬ್ಬಂದಿಗಳನ್ನು ನೇಮಿಸಿ ಸೂಕ್ತ ಅನುದಾನವನ್ನು ಸಹ ನೀಡಬೇಕು. ಸ್ವೀಕೃತವಾದ ಎಲ್ಲ ಪ್ರಸ್ತಾವನೆಗಳನ್ನು ಆದ–ೄತೆಯ ಮೇರೆಗೆ ಪರಿಗಣಿಸಲಾಗುವುದು ಎಂದು ಸಚಿವ ಬಿ.ಎಸ್.ಸುರೇಶ್ ಭರವಸೆ ನೀಡಿದರು.

**ಗೋಕರ್ಣ ಪಟ್ಟಣ ಪಂಚಾಯಿತಿ ರಚನೆಗೆ ಮನವಿ:**

ಕುಮುಟ ಕ್ಷೇತ್ರದ ಶಾಸಕ ದಿನಕರ್ ಕೇಶವ್ ಶೆಟ್ಟಿಯವರು ಧಾರ್ಮಿಕ ಶ್ರದ್ಧಾ ಕ್ಷೇತ್ರವಾದ ಗೋಕರ್ಣ ಗ್ರಾಮ ಪಂಚಾಯಿತಿಯನ್ನು ಪಟ್ಟಣ ಪಂಚಾಯಿತಿ ಅಥ–ವಾ ಪುರಸಭೆಯನ್ನಾಗಿ ಮೇಲ್ದರ್ಜೆ ಏರಿಸುವಂತೆ ಕೋರಿ ಪೌರಾಡಳಿತ ಹಾಗೂ ಹಜ್ ಸಚಿವ ರಹೀಂ ಖಾನ್ ಅವರಲ್ಲಿ ಕೋರಿದರು.

ಶಾಸಕ ದಿನಕರ್ ಕೇಶವ್ ಶೆಟ್ಟಿ ಅವರ ಮಾತಿಗೆ ಧ್ವನಿಗೂಡಿಸಿದ ಶಾಸಕರುಗಳಾದ ವಿಜಯೇಂದ್ರ, ಡಾ.ಅಶ್ವತ್ ನಾರಾಯಣ, ಸುನೀಲ್ ಕುಮಾರ್, ಭೈರತಿ ಬಸವರಾಜ್ ಅವರು ಗೋಕರ್ಣ ಪ್ರಕರಣವನ್ನು ವಿಶೇಷ ಎಂದು ಪರಿಗಣಿಸಿ, ಸರ್ಕಾರ ಕೂಡಲೇ ಮೇಲ್ದರ್ಜೆಗೆ ಏರಿಸಲು ಕ್ರಮ ಕೈಗೊಳ್ಳಬೇಕು. ಲಕ್ಷಾಂತರ ಪ್ರವಾಸಿಗರು ಗೋಕರ್ಣಕ್ಕೆ ಆಗಮಿಸುತ್ತಾರೆ. ಆದ್ದರಿಂದ ಸರ್ಕಾರ ಸ್ವಚ್ಛತೆ, ಮೂಲಭೂತ ಸೌಕರ್ಯಗಳನ್ನು ಕಲ್ಪಿಸಬೇಕು ಎಂದು ಮನವಿ ಮಾಡಿದರು.

ಉತ್ತರ ಕನ್ನಡ ಜಿಲ್ಲಾಧಿಕಾರಿಗಳು ಗೋಕರ್ಣವನ್ನು ಪಟ್ಟಣ ಪಂಚಾಯಿತಿಯಾಗಿ ಮೇಲ್ದರ್ಜೆಗೆ ಏರಿಸಲು ಪ್ರಸ್ತಾವನೆಯನ್ನು ಸಲ್ಲಿಸಿದ್ದಾರೆ. 2011 ರ ಜನಗಣತಿಯಂತೆ ಗೋಕರ್ಣದಲ್ಲಿ 13,539 ಜನಸಂಖ್ಯೆ ಇದೆ. ವಿಸ್ತೀರ್ಣ 33.1 ಚದರ ಕಿ.ಮೀ. ಇದ್ದು, ಜನಸಾಂದ್ರತೆ ಪ್ರತೀ ಚದರ ಕಿ.ಮೀ.ಗೆ 409 ಇದೆ. 2015ರಲ್ಲಿ ಸಚಿವ ಸಂಪುಟ ಸಭೆಯಲ್ಲಿ 2011ರ ಜನಗಣತಿಯಲ್ಲಿ 15,000ಕ್ಕಿಂತ ಹೆಚ್ಚು ಜನಸಂಖ್ಯೆ ಇರುವ ಪಂಚಾಯಿತಿಗಳನ್ನು ಮಾತ್ರ ಮೇಲ್ದರ್ಜೆಗೆ ಏರಿಸಲು ಪರಿಗಣಿಸಲು ನಿರ್ಧರಿಸಲಾಗಿದೆ. ಆದಾಗ್ಯೂ ಗೋಕರ್ಣದ ಪ್ರಕರಣವನ್ನು ವಿಶೇಷ ಎಂದು ಪರಿಗಣಿಸಿ, ಶಾಸಕರು, ಅಧಿಕಾರಿಗಳೊಂದಗೆ ಸಭೆ ನಡೆಸಿ ಸಕಾರಾತ್ಮವಾಗಿ ಕ್ರಮ ಕೈಗೊಳ್ಳುವುದಾಗಿ ಪೌರಾಡಳಿತ ಮತ್ತು ಹಜ್ ಸಚಿವ ರಹೀಂ ಖಾನ್ ಭರವಸೆ ನೀಡಿದರು.

ಇದೇ ವೇಳೆ, ಶಾಸಕ ಪ್ರಭು ಚವ್ಹಾಣ್ ಔರಾದ್ ಪಟ್ಟಣ ಪಂಚಾಯಿತಿಯನ್ನು ಪುರಸಭೆಯಾಗಿ ಹಾಗೂ ಕಮಲ್‌ನಗರವನ್ನು ಪಟ್ಟಣ ಪಂಚಾಯಿತಿಯಾಗಿ ಮೇಲ್ದರ್ಜೆಗೆ ಏರಿಸಬೇಕು ಎಂದು ಸಚಿವ ರಹೀಂ ಖಾನ್ ಅವರಲ್ಲಿ ಮನವಿ ಮಾಡಿದರು.

# ಬಾಣಂತಿಯರು-ನವಜಾತ ಶಿಶುಗಳ ಬಗ್ಗೆ ಹೆಚ್ಚಿನ ನಿಗಾ ವಹಿಸಿ: ಸಚಿವೆ ಲಕ್ಷ್ಮೀ ಹೆಬ್ಬಾಳಕರ್



ಬೆಳಗಾವಿ: ಬಾಣಂತಿ – ನವಜಾತ ಶಿಶುಗಳ ಬಗ್ಗೆ ಹೆಚ್ಚಿನ ನಿಗಾವಹಿಸಿ, ಜಿಲ್ಲಾ ಆಸ್ಪತ್ರೆಯಲ್ಲಿ (ಬಿಮ್ಸ್) ಯಾವುದೇ ಕುಂದು ಕೊರತೆಗಳು ಕಂಡು ಬಂದಲ್ಲಿ ಸರ್ಕಾರದ ಗಮನಕ್ಕೆ ತರಬೇಕು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ವೈದ್ಯಕೀಯ ಶಿಕ್ಷಣ ಸಚಿವ ಶರಣ ಪ್ರಕಾಶ್ ಪಾಟೀಲ್ ಜೊತೆಗೂಡಿ ಶುಕ್ರವಾರ ಬೆಳಗಾವಿಯ ಜಿಲ್ಲಾ ಆಸ್ಪತ್ರೆಗಿಂದು (ಬಿಮ್ಸ್) ಭೇಟಿ ನೀಡಿದ ಸಚಿವರು, ಈ ವೇಳೆ ವಿವಿಧ ಘಟಕಗಳಿಗೆ ಭೇಟಿ ನೀಡಿ ವೈದ್ಯರಿಂದ ಮಾಹಿತಿ ಪಡೆದುಕೊಂಡರು. ಬಳಿಕ ನೂತನ ಕಟ್ಟಡಕ್ಕೂ



ಸಚಿವರು ಭೇಟಿ ನೀಡಿದರು. ಬಳಿಕ ಎಲ್ಲಾ ವಿಭಾಗದ ಮುಖ್ಯಸ್ಥರೊಂದಿಗೆ ಸಭೆ ನಡೆಸಿ, ಕುಂದು ಕೊರತೆಗಳ ಬಗ್ಗೆ ವಿಚಾರಿಸಿದರು. ಬಾಣಂತಿಯರು ಹಾಗೂ ಹಸಿಗೂಸುಗಳ ಬಗ್ಗೆ ಹೆಚ್ಚಿನ ನಿಗಾವಹಿಸಿ, ಬಿಮ್ಸ್ ಗೆ ಉತ್ತಮ ಹೆಸರು ತರಲು ಎಲ್ಲರೂ ಪ್ರಯತ್ನಿಸಬೇಕು ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಇದೇ ವೇಳೆ ಬೆಳಗಾವಿ ಜಿಲ್ಲಾಸ್ಪತ್ರೆಯಲ್ಲಿ ಮೂರು ದಿನದ ನವಜಾತ ಹೆಣ್ಣು ಮಗು ಸಾವು ಪ್ರಕರಣ–ಕ್ಕೆ ಸಂಬಂಧಿಸಿದಂತೆ ಸುದ್ದಿಗಾರರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಸಚಿವರು, ಆರೂವರೆ ತಿಂಗಳ ಗರ್ಭಿಣಿ ಕಾಲು ಜಾರಿ ಬಿದ್ದಿದ್ದಾರೆ. ತೀವ್ರ ನೋವಿನ ಕಾರಣಕ್ಕೆ ಬೈಲಹೊಂಗಲ ಆಸ್ಪತ್ರೆಗೆ ದಾಖಲಾಗಿದ್ದಾರೆ. ಹೆಚ್ಚಿನ ಚಿಕಿತ್ಸೆಗೆ ಬೆಳಗಾವಿ ಬಿಮ್ಸ್‌ಗೆ ಕರೆ ತರಲಾಗಿತ್ತು. ಮಗುವಿನ ಅಂಗಾಂಗ ಬೆಳವಣಿಗೆ ಆಗಿರಲಿಲ್ಲ, ಆದರೂ ಸಮರ್ಪಕ ಚಿಕಿತ್ಸೆ ನೀಡಲಾಗಿತ್ತು. ನವಜಾತ ಶಿಶುವನ್ನು ಆಸ್ಪತ್ರೆಯಲ್ಲಿ ಬಿಟ್ಟು ತಾಯಿ ಪರಾರಿ ಆಗಿದ್ದು ದುರ್ದೈವ. ಈಗಾಗಲೇ ಎಫ್ಐಆರ್ ದಾಖಲಾಗಿದೆ, ತನಿಖೆ ನಡೆಯುತ್ತಿದೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಈ ವೇಳೆ ಬೆಳಗಾವಿ ಉತ್ತರ ಕ್ಷೇತ್ರದ ಶಾಸಕರಾದ ರಾಜು ಸೇಠ್, ವೈದ್ಯಕೀಯ ಶಿಕ್ಷಣ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳಾದ ಮೊಹಮ್ಮದ್ ಮೊಸೀನ್, ಬಿಮ್ಸ್ ನಿರ್ದೇಶಕರಾದ ಅಶೋಕ್ ಶೆಟ್ಟಿ, ಅಧೀಕ್ಷಕರಾದ ಡಾ.ವೀರಣ್ಣ ಪಲ್ಲೆದ್, ಮುಖ್ಯ ಆಡಳಿತಾಧಿಕಾರಿ ಸಿದ್ದು ಹುಲ್ಲಳ್ಳಿ, ಜಿಲ್ಲಾ ಸರ್ಜನ್ ಡಾ.ವಿಠಲ್ ಶಿಂಧೆ, ಶಿಲ್ಪಾ ವಾಲಿ, ಡಾ.ಸರೋಜ ತಗಡಿ, ಡಾ.ಉಮೇಶ್ ಕುಲಕರ್ಣಿ ಸೇ–ರಿದಂತೆ ಹಲವ ಉಪಸ್ಥಿತರಿದ್ದರು.

# ಪ್ರವಾಸೋದ್ಯಮ ನೀತಿ 2020-26 ರಡಿ ಬಾಗಲಕೋಟೆ-ವಿಜಯಪುರ ಜಿಲ್ಲೆಯಲ್ಲಿ 44 ಪ್ರವಾಸಿ ತಾಣಗಳ ಗುರುತು: ಸಚಿವ ಎಚ್.ಕೆ.ಪಾಟೀಲ್

**ಬೆಳಗಾವಿ** ಸುವರ್ಣಸೌಧ, : –ಪ್ರವಾಸೋದ್ಯಮ ನೀತಿ 2020–26 ರನ್ವಯ ರಾಜ್ಯದಲ್ಲಿ 810 ಪ್ರವಾಸಿ ತಾಣಗಳನ್ನು ಗುರುತಿಸಲಾಗಿದ್ದು, ಬಾಗಲಕೋಟೆ, ವಿಜಯಪುರ ಜಿಲ್ಲೆಯಲ್ಲಿ 44 ಪ್ರವಾಸಿ ತಾಣಗಳು ಗುರುತಿಸಲಾಗಿದೆ ಎಂದು ಕಾನೂನು,ನ್ಯಾಯ,ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವ ಎಚ್. ಕೆ.ಪಾಟೀಲ್ ಹೇಳಿದರು.

ಅವರು ಇಂದು ವಿಧಾನ ಪರಿಷತ್ತಿನಲ್ಲಿ ಸದಸ್ಯರಾದ ನಿರಾಣಿ ಹನುಮಂತ ರುದ್ರಪ್ಪ ಹಾಗೂ ಕೇಶವ ಪ್ರಸಾದ್ ಅವರ ಗಮನ ಸೆಳೆಯುವ ಸೂಚನೆಗೆ ಉತ್ತ–ರಿಸಿದರು. ಪ್ರವಾಸೋದ್ಯಮವನ್ನು ಉತ್ತೇಜಿಸಿ ಅಭಿವೃದ್ಧಿಪಡಿಸುವ ದೃಷ್ಟಿಯಿಂದ ವಿಜಯಪುರ ಪೂರ್ಣ ಜಿಲ್ಲೆಯನ್ನು ಹಾಗೂ ಬಾಗಲಕೋಟೆ ಜಿಲ್ಲೆಯ ಐಹೊಳೆ, ಬದಾಮಿ, ಪಟ್ಟದಕಲ್ಲು, ಕೂಡಲಸಂಗಮ, ಬೀಳಗಿ ತಾಣಗಳನ್ನು ಆದ್ಯತಾ ಪ್ರವಾಸಿ ತಾಣಗಳಾಗಿ ಗುರುತಿಸಿ, ಈ ತಾಣಗಳ ತಾಲ್ಲೂಕುಗಳಲ್ಲಿ ಬಂಡವಾಳ ಹೂಡಲು ಮುಂದೆ ಬರುವ ಖಾಸಗಿ ಹೂಡಿಕೆದಾರರಿಗೆ ಸಹಾಯಧನ, ರಿಯಾಯಿತಿ ಮತ್ತು ಉತ್ತೇಜನಗಳನ್ನು ನೀಡಲು ಅವಕಾಶ ಕಲ್ಪಿಸಲಾಗಿತ್ತು ಎಂದರು.

ಪ್ರಸ್ತುತ ಜಾರಿಗೆ ತಂದಿರುವ 2024–29ರ ನೂತನ ಕರ್ನಾಟಕ ಪ್ರವಾಸೋದ್ಯಮ ನೀತಿಯಲ್ಲಿ ಬಾಗಲಕೋಟೆ ಹಾಗೂ ವಿಜಯಪುರ ಜಿಲ್ಲೆಗಳಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗೆ ಪ್ರವಾಸೋದ್ಯಮ ಕ್ಷೇತ್ರದ ಯೋಜನೆಗಳಲ್ಲಿ ಹೂಡಿಕೆ ಮಾಡಲು ಮುಂದೆ ಬರುವ ಖಾಸಗಿ ಉದ್ಯಮಿಗಳಿಗೆ ಶೇ.5 ರಷ್ಟು ಹೆಚ್ಚುವರಿ ಸಹಾಯಧನ ಸೌಲಭ್ಯಗಳನ್ನು ಒದಗಿಸಲು ಅವಕಾಶ ಕಲ್ಪಿಸಲಾಗಿದೆ. ಇದಲ್ಲದೆ, ಸದರಿ ಜಿಲ್ಲೆಗಳಲ್ಲಿನ ಪ್ರವಾಸಿ ತಾಣಗಳನ್ನು ನೂತನ ಆದ್ಯತಾ ಪ್ರವಾಸಿ ತಾಣಗಳಾಗಿ ಗುರುತಿಸಲು ಕ್ರಮವಹಿಸಲಾಗುವುದು ಎಂದರು.

ಬಾಗಲಕೋಟೆ ಜಿಲ್ಲೆಯ ಐಹೊಳೆ ಗ್ರಾಮದ ಐತಿಹಾಸಿಕ ಮತ್ತು ಪಾರಂಪ–ರಿಕ ಸ್ಮಾರಕಗಳನ್ನು ಸಂರಕ್ಷಿಸುವ ಸಲುವಾಗಿ ಸ್ಮಾರಕಗಳನ್ನೇ ಮನೆಗಳನ್ನಾಗಿ ಪರಿವರ್ತಿಸಿಕೊಂಡು ವಾಸಮಾಡುತ್ತಿರುವ ಸುಮಾರು 135 ಕುಟುಂಬಗಳನ್ನು ಸ್ಥಳಾಂತರಿಸಿ, ಪುನರ್ ವಸತಿ ಕಲ್ಪಿಸುವ ದೃಷ್ಟಿಯಿಂದ ಐಹೊಳೆ ಗ್ರಾಮದ ಭೂ–ಮಾಲೀಕರಿಂದ ಜಮೀನನ್ನು ಖರೀದಿಸಿ ಸ್ಥಳಾಂತರಿಸಲು ರೂ. 3.50 ಕೋಟಿ ಅನುದಾನವನ್ನು ಚಾಲುಕ್ಯ ಪಾರಂಪ–ರಿಕ ಪ್ರದೇಶ ನಿರ್ವಹಣಾ ಪ್ರಾಧಿಕಾರಕ್ಕೆ ಬಿಡುಗಡೆಗೊಳಿಸಲಾಗಿದೆ. 135 ಕುಟುಂಬಗಳು ಪುನರ್ವಸತಿಗೆ ಒಪ್ಪಿಗೆಯನ್ನು ಮತ್ತು ಈ ಕಾರ್ಯಕ್ಕೆ ರೈತರು ಜಮೀನನ್ನು ನೀಡಲು ಒಪ್ಪಿಗೆ ಸೂಚಿಸಿದ್ದು ಮುಂದಿನ ಪ್ರಕ್ರಿಯೆ ಪ್ರಗತಿಯಲ್ಲಿದೆ ಎಂದರು.

ಈ 135 ಕುಟುಂಬಗಳನ್ನು ಸ್ಥಳಾಂತರಿಸಿ, ಪುನರ್ ವಸತಿ ಕಲ್ಪಿಸಿದ ನಂತರ ಎಂಟು ಸ್ಮಾರಕಗಳ ಸಂರಕ್ಷಣೆಯನ್ನು ಅಂದಾಜು ರೂ. 8–10 ಕೋಟಿಗಳ ವೆಚ್ಚದಲ್ಲಿ ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಧರ್ಮೋತ್ಥಾನ ಟ್ರಸ್ಟ್ ಶೇ.50 ಮತ್ತು ಸರ್ಕಾರದ ವಂತಿಗೆ ಶೇ.50 ರಷ್ಟು ಅನುಪಾತದಲ್ಲಿ ವೆಚ್ಚವನ್ನು ಭರಿಸಿ ಸದರಿ ಟ್ರಸ್ಟ್ ವತಿಯಿಂದ ಸಂರಕ್ಷಣೆಯನ್ನು ಕೈಗೊಳ್ಳಲು ಚಾಲುಕ್ಯ ಪಾರಂಪರಿಕ ಪ್ರದೇಶ ನಿರ್ವಹಣಾ ಪ್ರಾಧಿಕಾರ, ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ಹಾಗೂ ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಧರ್ಮೋತ್ಥಾನ ಟ್ರಸ್ಟ್ ಗಳ ನಡುವೆ ತ್ರಿಪಕ್ಷಿಯ ಒಡಂಬಡಿಕೆ ಮಾಡಿಕೊಳ್ಳಲಾಗಿದೆ ಎಂದರು.

ಪಟ್ಟದಕಲ್ಲು ಪ್ರವಾಸಿ ತಾಣದಲ್ಲಿ ಪ್ರವಾಸಿಗ–ರಿಗೆ ಪಾರ್ಕಿಂಗ್ ಸೌಲಭ್ಯ ಕೆಫೆಟೇರಿಯಾ, ಪ್ರವಾಸಿ ಮಾಹಿತಿ ಕೇಂದ್ರ ಕರಕುಶಲ ಮಳಿಗೆ ಇತ್ಯಾದಿ ಸೌಲಭ್ಯಗಳನ್ನು ಒಂದೇ ಸೂರಿನಲ್ಲಿ ಒದಗಿಸಲು ರೂ.29.25 ಕೋಟಿ ಅಂದಾಜು ವೆಚ್ಚದಲ್ಲಿ ಪ್ರವಾಸಿ ಪ್ಲಾಜಾ ಕಾಮಗಾರಿಯನ್ನು ಕೈಗೊಳ್ಳಲಾಗುತ್ತಿದೆ. ಪ್ರವಾಸೋದ್ಯಮವನ್ನು ಅಭಿವೃದ್ಧಿಪಡಿಸಲು ಬಾಗಲಕೋಟೆ ಜಿಲ್ಲೆಯ ಬದಾಮಿಯಲ್ಲಿ 72 ಕೊಠಡಿಗಳ ತ್ರಿ–ಸ್ಟಾರ್ ಹೋಟೆಲ್ ನಿರ್ಮಾಣ ಕಾಮಗಾರಿಯನ್ನು ರೂ.1832.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳಲು ಅನುಮೋದನೆ ನೀಡಿರುತ್ತದೆ. ರೂ 987.00 ಲಕ್ಷಗಳ ಅನುದಾನವನ್ನು ಅನುಷ್ಠಾನ ಸಂಸ್ಥೆಗೆ ಬಿಡುಗಡೆ ಮಾಡಲಾಗಿದ್ದು, ಕಾಮಗಾರಿ ಪ್ರಗತಿಯಲ್ಲಿದೆ ಎಂದರು. ಪ್ರವಾಸೋದ್ಯಮವನ್ನು ಅಭಿವೃದ್ಧಿಪಡಿಸಲು ವಿಜಯಪುರ ಜಿಲ್ಲೆಯ ಭೂತನಾಳ ಕೆರೆಯ ಪ್ರದೇಶದಲ್ಲಿ ರೂ.1674.00 ಲಕ್ಷಗಳ ಅಂದಾಜು ವೆಚ್ಚದಲ್ಲಿ 75 ಕೊಠಡಿಗಳ ತ್ರಿಸ್ಟಾರ್ ಹೋಟೆಲ್ ಕಾಮಗಾರಿ ಅನುಮೋದನೆ ನೀಡಿದ್ದು, ರೂ.1669.83 ಲಕ್ಷಗಳ ಅನುದಾನವನ್ನು ಅನುಷ್ಠಾನ ಸಂಸ್ಥೆಗೆ ಬಿಡುಗಡೆ ಮಾಡಲಾಗಿದ್ದು ಕಾಮಗಾರಿ ಅಂತಿಮ ಹಂತದಲ್ಲಿದೆ ಎಂದರು

ಬಾಗಲಕೋಟೆ ಜಿಲ್ಲೆಯಲ್ಲಿ ಪ್ರವಾಸೋದ್ಯಮ ಅಭಿವೃದ್ಧಿ ಸಂಬಂಧ ಬಂಡವಾಳ ವೆಚ್ಚಗಳು ಹಾಗೂ ಕೆ.ಟಿ.ವಿ.ಜಿ ಲೆಕ್ಕ ಶೀರ್ಷಿಕೆ ಅಡಿ ಕಳೆದ 5 ವರ್ಷಗಳಲ್ಲಿ ಇಲಾಖೆಯಿಂದ ರೂ.6793.00 ಲಕ್ಷಗಳ ಅಂದಾಜು ವೆಚ್ಚದಲ್ಲಿ 17 ಕಾಮಗಾ–ರಿಗಳನ್ನು ಕೈಗೊಂಡಿದ್ದು, ರೂ.3688.99 ಲಕ್ಷಗಳ ಅನುದಾನವನ್ನು ಸಂಬಂಧಪಟ್ಟ ಅನುಷ್ಠಾನ ಸಂಸ್ಥೆಗಳಿಗೆ ಬಿಡುಗಡೆ ಮಾಡಲಾಗಿದ್ದು ಕಾಮಗಾರಿಗಳು ವಿವಿಧ ಹಂತದಲ್ಲಿವೆ ಎಂದರು. ವಿಜಯಪುರ ಜಿಲ್ಲೆಯಲ್ಲಿ ಪ್ರವಾಸೋದ್ಯಮ ಅಭಿವೃದ್ಧಿ ಸಂಬಂಧ ಬಂಡವಾಳ ವೆಚ್ಚಗಳು ಹಾಗೂ ಕೆ.ಟಿ.ವಿ.ಜಿ ಲೆಕ್ಕಶೀರ್ಷಿಕೆ ಅಡಿ ಕಳೆದ 5 ವರ್ಷಗಳಲ್ಲಿ ಇಲಾಖೆಯಿಂದ ರೂ.3569.00 ಲಕ್ಷಗಳ ಅಂದಾಜು ವೆಚ್ಚದಲ್ಲಿ 26 ಕಾಮಗಾ–ರಿಗಳನ್ನು ಕೈಗೊಂಡಿದ್ದು, ರೂ.2445.88 ಲಕ್ಷಗಳ ಅನುದಾನವನ್ನು ಸಂಬಂಧಪಟ್ಟ ಅನುಷ್ಠಾನ ಸಂಸ್ಥೆಗಳಿಗೆ ಬಿಡುಗಡೆ ಮಾಡಲಾಗಿದ್ದು ಕಾಮಗಾರಿಗಳು ವಿವಿಧ ಹಂತದಲ್ಲಿರುತ್ತವೆ ಎಂದರು.

# ಕರ್ನಾಟಕದಲ್ಲಿ ಈ ವರ್ಷ ವಾಡಿಕೆಗಿಂತ ಹೆಚ್ಚು ಮಳೆ, 133 ಮಂದಿ ಸಾವು: ಕೃಷ್ಣ ಬೈರೇಗೌಡ

**ಬೆಳಗಾವಿ:** ಈ ವರ್ಷ ರಾಜ್ಯದಲ್ಲಿ ಅತಿವೃಷ್ಟಿಯಿಂದಾಗಿ ಉಂಟಾದ ಬೆಳೆ, ಜೀವಹಾನಿ, ಮನೆ ಹಾನಿ ಸೇರಿದಂತೆ ವಿವಿಧ ಹಾನಿಗೆ ಸಂಬಂಧಿಸಿದಂತೆ ಒಟ್ಟು 297 ಕೋಟಿ ರೂ. ಪರಿಹಾರ ಪಾವತಿಸಲಾಗಿದೆ ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ಇಂದು ವಿಧಾನಸಭೆಯಲ್ಲಿ ತಿಳಿಸಿದರು. ಶೂನ್ಯವೇಳೆ ಚರ್ಚೆಯ ಸಂದರ್ಭದಲ್ಲಿ ರಾಜ್ಯದಲ್ಲಿ ಉಂಟಾದ ಮಳೆಹಾನಿ ಹಾಗೂ ಸರ್ಕಾರ ತೆಗೆದುಕೊಂಡ ಕ್ರಮಗಳ ಬಗ್ಗೆ ಸದನಕ್ಕೆ ಸರ್ಕಾರದ ಪರವಾಗಿ ಹೇಳಿಕೆ ನೀಡಿದರು.

ರಾಜ್ಯದಲ್ಲಿ ಈ ವರ್ಷ ಅತಿವೃಷ್ಟಿಯಿಂದ ಕೃಷಿ ಮತ್ತು ತೋಟಗಾರಿಕೆ ಬೆಳೆ, ಮನುಷ್ಯ ಹಾಗೂ ಜಾನುವಾರುಗಳ ಜೀವ ಹಾನಿ, ರಸ್ತೆ–ಸೇತುವೆ, ಇತರೆ ಮೂಲಭೂತ ಸೌಕರ್ಯಗಳಿಗೆ ಹಾನಿ ಉಂಟಾಗಿದೆ. ಕಳೆದ 20 ವರ್ಷಗಳಲ್ಲಿ ಸುಮಾರು 10ರಿಂದ 15 ವರ್ಷ ಒಂದಲ್ಲ ಒಂದು ರೀತಿಯ ಪ್ರಕೃತಿ ವಿಕೋಪವನ್ನು ರಾಜ್ಯ ಎದುರಿಸಿದೆ. 2000ರಿಂದ ಈವರೆಗೆ ಸುಮಾರು 17 ವರ್ಷ ಬರ ಪರಿಸ್ಥಿತಿಯನ್ನು ಎದು–ರಿಸಿದ್ದರೆ, 2019, 2022 ಹಾಗೂ 2024ರಲ್ಲಿ ವಾಡಿಕೆಗಿಂತ ಹೆಚ್ಚು ಮಳೆ ರಾಜ್ಯದಲ್ಲಿ ಆಗಿದೆ.

ರಾಜ್ಯದಲ್ಲಿ ಕೇವಲ ಮಳೆಯಿಂದ ಮಾತ್ರವಲ್ಲ, ಆಲಿಕಲ್ಲು ಮಳೆ, ಸಿಡಿಲು, ಮನೆ ಕುಸಿತ ಸಂದರ್ಭದಲ್ಲಿಯೂ ಹಾನಿ ಉಂಟಾಗಿದೆ. ಇದರ ಜೊತೆಗೆ 2018, 2019 ಮತ್ತು 2024ರಲ್ಲಿ ಭೂ ಕುಸಿತ ಕೂಡ ಸಂಭವಿಸಿ ಹಾನಿಯಾಗಿದೆ. ಹೀಗಾಗಿ ಸರ್ಕಾರ ಇದನ್ನು ತಡೆಗಟ್ಟಲು ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುತ್ತಿದ್ದೇವೆ. ತೀವ್ರ ಬರ ಪರಿಸ್ಥಿತಿ ಬಂದರೂ, ಎನ್‌ಡಿಆರ್‌ಎಫ್?ನಿಂದ ನಿಗದಿತ ಪ್ರಮಾಣದಲ್ಲಿ ಕೇಂದ್ರದಿಂದ ಪರಿಹಾರ ಹಣ ಬಾರದೇ ಇದ್ದಾಗ ನ್ಯಾಯಾಲಯದ ಮೊರೆ ಹೋಗಿ ಪರಿಹಾರ ಹಣ ಕೂಡ ಪಡೆದು, ಸುಮಾರು 45 ಲಕ್ಷ ರೈತರಿಗೆ 4200 ಕೋಟಿ ರೂ. ಪರಿಹಾರ ಕೊಟ್ಟಿದ್ದೇವೆ ಎಂದರು.

ರೈತರಿಗೆ ಬೆಳೆ ನಷ್ಟ ಪರಿಹಾರ ಪಾವತಿ: ಈ ವರ್ಷ 852 ಮಿ.ಮೀ. ಮುಂಗಾರು ವಾಡಿಕೆ



ಮಳೆ ಬದಲಿಗೆ 978 ಮಿ.ಮೀ. ಅಂದರೆ ಶೇ.20ರಷ್ಟು ಹೆಚ್ಚು ಮಳೆಯಾಗಿದೆ. ಹಿಂಗಾ–ರಿನಲ್ಲಿ ಕೂಡ 173 ಮಿ.ಮೀ. ವಾಡಿಕೆ ಮಳೆ ಬದಲಿಗೆ 213 ಮಿ.ಮೀ. ಅಂದರೆ ಶೇ. 23 ರಷ್ಟು ಹೆಚ್ಚು ಮಳೆಯಾಗಿದೆ. ಕೆಲವು ಜಿಲ್ಲೆಗಳಲ್ಲಿ ವಾಡಿಕೆಗಿಂತಲೂ ಕಡಿಮೆ ಮಳೆ ಆಗಿದೆ. ಪ್ರಸಕ್ತ ಮುಂಗಾರು ಅವಧಿಯಲ್ಲಿ 1,59,718 ಹೆಕ್ಟೇರ್ ಪ್ರದೇಶದಲ್ಲಿ ಬೆಳೆಹಾನಿಯಾಗಿದ್ದು, ಒಟ್ಟು ರೂ.94.94 ಕೋಟಿ ಪರಿಹಾರ ವಿತರಿಸಲಾಗಿದೆ. ಹಿಂಗಾರು ಹಂಗಾಮಿನಲ್ಲಿ 1,45,254 ಹೆಕ್ಟೇರ್ ಪ್ರದೇಶದಲ್ಲಿ ಬೆಳೆಹಾನಿಯಾಗಿದ್ದು, ರೂ. 1.12 ಕೋಟಿ ಹಣವನ್ನು ರೈತರಿಗೆ ಪರಿಹಾರವಾಗಿ ಮಂಜೂರು ಮಾಡಲಾಗಿದೆ. ಕೆಲವು ಭಾಗದಲ್ಲಿ ರೈತರಿಗೆ ಪರಿಹಾರ ಹಣ ಖಾತೆಗೆ ಜಮಾ ಆಗಿದೆ. ಮುಂದಿನ ಒಂದೆರಡು ವಾರದಲ್ಲಿ ಎಲ್ಲಾ ರೈತರ ಖಾತೆಗಳಿಗೂ ಪರಿಹಾರ ಹಣ ಸಂದಾಯವಾಗಲಿದೆ ಎಂದರು.

133 ಮೃತ ಕುಟುಂಬಕ್ಕೆ 6.64 ಕೋಟಿ ರೂ. ಪರಿಹಾರ: ನಮ್ಮ ರಾಜ್ಯದಲ್ಲಿ 10 ಹವಾಮಾನ ವಲಯಗಳಿವೆ (ಆಗ್ರೋ ಕ್ಲೈಮ್ಯಾಟಿಕ್ ಝೋನ್). ಇಲ್ಲಿ 450 ಮಿ.ಮೀ ರಿಂದ 4,000 ಮಿ.ಮೀ ವರೆಗೆ ವಾಡಿಕೆ ಮಳೆಯಾಗುವ ವೈವಿಧ್ಯತೆಯ ಪ್ರದೇಶಗಳು ಕರ್ನಾಟಕದಲ್ಲಿದೆ. ದೇಶದ ಯಾವ ರಾಜ್ಯದಲ್ಲೂ ಈ ವೈವಿಧ್ಯತೆ ಇಲ್ಲ. ಇದರಿಂದ ರಾಜ್ಯದಲ್ಲಿ ಕೆಲ ಪ್ರಾಣಹಾನಿಯೂ ಸಂಭವಿಸಿದೆ. ಕೆಲವರು ಹೊಳೆ ಉಕ್ಕಿಹ–ರಿಯುವ ಸಂದರ್ಭದಲ್ಲಿ ನೀರಿನಲ್ಲಿ ಇಳಿದು ಕೊಚ್ಚಿಹೋಗಿದ್ದಾರೆ. ಕೆರೆ ತುಂಬಿದೆ ಎಂದು ಗೊತ್ತಿದ್ದರೂ ಈಜಲು ಹೋಗಿ ಕೆಲವರು ಪ್ರಾಣ ಕಳೆದುಕೊಂಡಿದ್ದಾರೆ. ಸಿಡಿಲು ಬಡಿತದಿಂದ ಮೃತಪಟ್ಟವರೂ ಸೇರಿ ಈ ವರ್ಷ ಒಟ್ಟಾರೆ 133 ಜನ ಪ್ರಾಣ ಕಳೆದುಕೊಂಡಿದ್ದಾರೆ. ಸರ್ಕಾರದ ಕಡೆಯಿಂದ ಇಂತಹ ಘಟನೆಗಳಿಗೆ ನಾನು ವಿಷಾದ ವ್ಯಕ್ತಪಡಿಸುತ್ತೇನೆ. ಅಲ್ಲದೆ, ಈ ಎಲ್ಲಾ 133 ಮೃತರ ಕುಟುಂಬಗಳಿಗೆ ಈಗಾಗಲೇ ತಲಾ 5 ಲಕ್ಷ ದಂತೆ 6.64 ಕೋಟಿ ರೂ. ಪಾವತಿಸಲಾಗಿದೆ ಎಂದರು.

ಎಲ್ಲೆಲ್ಲಿ ಮಳೆಹಾನಿ?: ಈ ವರ್ಷ ಮಹಾರಾಷ್ಟ್ರದಲ್ಲಿ ಹೆಚ್ಚು ಮಳೆಯಾದ ಕಾರಣ ಕೃಷ್ಣಾ ನದಿ ಉಕ್ಕಿ ಹರಿದು ನದಿಪಾತ್ರದ ಜನ–ರಿಗೆ ಹಾನಿಯಾಗಿತ್ತು. ತುಂಗಭದ್ರ, ಭೀಮಾ, ಕಬಿನಿ ಕಾವೇರಿಯಲ್ಲೂ ಹೆಚ್ಚು ನೀರು ಬಂದು ಹಾನಿಯಾಗಿತ್ತು. ಧಾರವಾಡದ ಬೆಣ್ಣೆಹಳ್ಳ, ಬಾಗಲಕೋಟೆ, ಬಳ್ಳಾರಿ, ದಾವಣಗೆರೆ, ಶಿವಮೊಗ್ಗ ಭಾಗದಲ್ಲೂ ಮಳೆಯಿಂದಾಗಿ ನದಿಗಳು ಉಕ್ಕಿಹರಿದು ಸಾರ್ವಜನಿಕ ಆಸ್ತಿಪಾಸ್ತಿಗಳಿಗೆ ಹಾನಿಯಾಗಿದೆ. ರಸ್ತೆ, ಸೇತುವೆ, ಶಾಲಾ ಕೊಠಡಿ, ಅಂಗನವಾಡಿ, ಆರೋಗ್ಯ ಕೇಂದ್ರ ಸೇರಿದಂತೆ ಮಲೆನಾಡು ಪ್ರದೇಶಗಳಲ್ಲಿ ಕೆಲ ವಿದ್ಯುತ್ ಸಂಪರ್ಕ ಕಟ್ಟಡಗಳಿಗೆ ಹಾನಿ ಉಂಟಾಗಿದೆ. ರಿಪೇರಿ ಕೆಲಸಗಳಿಗೆ ರೂ.80.47 ಕೋಟಿ ಅನುದಾನ ನೀಡಲಾಗಿದೆ. ಈ ಪೈಕಿ ರೂ. 60.16 ಕೋಟಿ ಹಣ ಈಗಾಗಲೇ ಬಿಡುಗಡೆ ಮಾಡಿದ್ದು, ಪ್ರಸ್ತುತ ಜಿಲ್ಲಾಧಿಕಾರಿಗಳು ಹಾಗೂ ತಹಶೀಲ್ದಾರರ ಖಾತೆಯಲ್ಲಿ ಮುಂದಿನ ತುರ್ತು ಪರಿಹಾರಕ್ಕಾಗಿ ಸುಮಾರು ರೂ 579 ಕೋಟಿ ಅನುದಾನ ಲಭ್ಯವಿದೆ ಎಂದರು.

ಭೂಕುಸಿತ ತಡೆಗೆ ಶಾಶ್ವತ ಪರಿಹಾರ ಯೋಜನೆ: ಈ ವರ್ಷ ಭೂ ಕುಸಿತ ಪ್ರಕರಣ ನಿರೀಕ್ಷೆಗಿಂತ ಹೆಚ್ಚಾಗಿದೆ. ಕಾರವಾರದ ಘಟನೆ ಆಘಾತಕಾರಿಯಾಗಿದೆ. ಮಲೆನಾಡು ಭಾಗದಲ್ಲೂ ಸಣ್ಣಪುಟ್ಟ ಭೂ ಕುಸಿತದ ಘಟನೆ ಸಂಭವಿಸಿದೆ. ಈ ನಿಟ್ಟಿನಲ್ಲಿ ಭೂ ಕುಸಿತವನ್ನು ತಡೆಗಟ್ಟಲು ಶಾಶ್ವತ ಯೋಜನೆ ರೂಪಿಸಲಾಗಿದೆ ಎಂದು ಸದನಕ್ಕೆ ಸಚಿವ ಕೃಷ್ಣ ಬೈರೇಗೌಡ ಅವರು ಮಾಹಿತಿ ನೀಡಿದರು.

ಭೂ ಕುಸಿತ ತಡೆಗೆ ಶಾಶ್ವತ ಪರಿಹಾರ ನೀಡುವ ನಿಟ್ಟಿನಲ್ಲಿ ಸಿಎಂ ಜೊತೆ ಚರ್ಚಿಸಿ ಅವರ ಸೂಚನೆ ಹಿನ್ನೆಲೆ ಎರಡೂವರೆ ವರ್ಷದ ಅವಧಿಗೆ ರೂ.400 ಕೋಟಿ ರೂಪಾಯಿ ವೆಚ್ಚದಲ್ಲಿ ಭೂ ಕುಸಿತ ತಡೆಗಟ್ಟುವ ಕಾಮಗಾರಿ ಕೈಗೆತ್ತಿಕೊಳ್ಳಬೇಕು ಎಂದು ತೀರ್ಮಾನಿಸಿದ್ದೇವೆ. ಭೂ ಕುಸಿತಕ್ಕೆ ಒಳಗಾಗಬಹುದಾದ ಪ್ರದೇಶಗಳ ಬಗ್ಗೆ ನ್ಯಾಷನಲ್ ಜಿಯೋಲಾಜಿಕಲ್ ಸರ್ವೇ ಎಂಬ ಕೇಂದ್ರ ಸರ್ಕಾರದ ಸಂಸ್ಥೆಯಿಂದ ವರದಿ ತರಿಸಲಾಗಿದೆ. ಆ ವರದಿಯಲ್ಲಿ ದಕ್ಷಿಣ ಕನ್ನಡ, ಉತ್ತರ ಕನ್ನಡ, ಉಡುಪಿ, ಶಿವಮೊಗ್ಗ, ಚಿಕ್ಕಮಗಳೂರು, ಕೊಡಗು ಸೇರಿದಂತೆ 06 ಜಿಲ್ಲೆಗಳ 863 ಗ್ರಾಮ ಪಂಚಾಯಿತಿಗಳನ್ನು ಭೂ ಕುಸಿತ ಉಂಟಾಗಬಹುದಾದ ಪ್ರದೇಶಗಳು ಎಂದು ಗುರುತಿಸಲಾಗಿದೆ. ಈ ಜಿಲ್ಲೆಗಳಲ್ಲಿ ಭೂ ಕುಸಿತ ತಡೆಯುವ ಸಂಬಂಧಿಸಿದ ಯೋಜನೆಗಳ ಕುರಿತು ಈಗಾಗಲೇ ಎಲ್ಲಾ ಜಿಲ್ಲಾಧಿಕಾರಿಗಳಿಂದ ವರದಿ ತರಿಸಿಕೊಳ್ಳಲಾಗಿದೆ. ರೂ.425 ಕೋಟಿ ವೆಚ್ಚದ ಯೋಜನೆಗಳಿಗೆ ಜಿಲ್ಲಾಧಿಕಾರಿಗಳು ಪ್ರಸ್ತಾವನೆ ಸಲ್ಲಿಸಿದ್ದಾರೆ. ಭೂ ಕುಸಿತ ತಡೆಗಟ್ಟುವ ಕಾಮಗಾರಿಗೆ ಹಣ ನೀಡಲು ಸರ್ಕಾರ ಒಪ್ಪಿಗೆ ಸೂಚಿಸಿದೆ. ಅದರ ಭಾಗವಾಗಿ ತಕ್ಷಣ ರೂ.152 ಕೋಟಿ ಹಣವನ್ನು ವಿವಿಧ ಕಾಮಗಾರಿಗಳಿಗೆ ಮಂಜೂರು ಮಾಡಲಾಗಿದೆ. ಇದಲ್ಲದೆ, ಮಳೆ ಹೆಚ್ಚಾದಾಗ ನಗರ ಪ್ರದೇಶಗಳಲ್ಲಿ ನೀರನ್ನು ಹೊರಹಾಕುವ ಮೂಲಭೂತ ವ್ಯವಸ್ಥೆ ಇಲ್ಲ. ಇದೂ ಸಹ ಪ್ರವಾಹಕ್ಕೆ ಕಾರಣವಾಗಿದ್ದು, ಇದಕ್ಕೆ ಸಂಬಂಧಿಸಿದಂತೆ ರೂ.184 ಕೋಟಿ ಮೌಲ್ಯದ 259 ಕಾಮಗಾರಿಗಳಿಗೆ ತಕ್ಷಣ ಅನುಮೋದನೆ ನೀಡಲಿದ್ದೇವೆ ಎಂದು ಸಚಿವರು ತಿಳಿಸಿದರು.

## ಕೋಲ್ಡ್ ಸ್ಟೋರೇಜ್ ನಿರ್ಮಾಣ: ಎ.ಪಿ.ಎಂ.ಸಿ ಸ್ಥಳ ಲೀಜಗೆ: ಸಚಿವ ಶಿವಾನಂದ ಪಾಟೀಲ್

ಬೆಳಗಾವಿ : ಅರಸೀಕೆರೆಯ ಹಬ್ಬನಘಟ್ಟ ಕಾವಲ್(ಗೀಜಿಹಳ್ಳಿ) ಉಪ ಮಾರುಕಟ್ಟೆ ಪ್ರಾಂಗಣದಲ್ಲಿ ಖಾಸಗಿಯವರು ಕೋಲ್ಡ್ ಸ್ಟೋರೇಜ್ ನಿರ್ಮಿಸಿ, ನಿರ್ವಹಣೆ ಮಾಡಲು ಮುಂದೆ ಬಂದರೆ ಕೃಷಿ ಮಾರುಕಟ್ಟೆ ಸ್ಥಳವನ್ನು ಲೀಜಿಗೆ ನೀಡುವುದಾಗಿ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಎಸ್ ಪಾಟೀಲ್ ಸದನದಲ್ಲಿ ಹೇಳಿದರು.

ಬೆಳಗಾವಿ ಸುವರ್ಣಸೌಧಲ್ಲಿ ನಡೆಯುತ್ತಿರುವ ಚಳಿಗಾಲ ಅಧಿವೇಶನದಲ್ಲಿ ಶುಕ್ರವಾರ ಪ್ರಶ್ನೋತ್ತರ ಕಲಾಪದಲ್ಲಿ, ಅರಸಿಕೆರೆ ಶಾಸಕ ಶಿವಲಿಂಗೇಗೌಡ.ಕೆ.ಎಂ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಅವರು ಉತ್ತರಿಸಿದರು.

ಹಬ್ಬನಘಟ್ಟ ಕಾವಲ್ ಉಪ ಮಾರುಕಟ್ಟೆ ಪ್ರಾಂಗಣದಲ್ಲಿ ರೂ.5 ಕೋಟಿ ವೆಚ್ಚದಲ್ಲಿ ಕೋಲ್ಡ್ ಸ್ಟೋರೇಜ್ ಸ್ಥಾಪಿಸಲು ಹೆಚ್ಚುವರಿ ಅನುದಾನ ಕೋರಿ ಹಣಕಾಸು ಇಲಾಖೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಇದರ ಮಧ್ಯಯೇ ಖಾಸಗಿಯವರು ಮುಂದೆ ಬಂದರೆ ಸ್ಥಳ ನೀಡುವುದಾಗಿ ಸಚಿವ ಶಿವಾನಂದ ಎಸ್ ಪಾಟೀಲ್ ತಿಳಿಸಿದರು.

2024–25ನೇ ಸಾಲಿನಲ್ಲಿ ಆರ್ಥಿಕ ಇಲಾಖೆ ಎ.ಪಿ.ಎಂ.ಸಿಗಳಲ್ಲಿ ಕೋಲ್ಡ್ ಸ್ಟೋರೇಜ್ ಮತ್ತು ಇನ್ನಿತರ ಮೂಲಭೂತ ಸೌಕರ್ಯ ಒದಗಿಸಲು ರೂ.144.75 ಕೋಟಿ ಅನುದಾನ ಒದಗಿಸಿತ್ತು. ಆದರೆ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಸದಸ್ಯರು, ಸಚಿವರು, ಶಾಸಕರುಗಳಿಂದ ರೈತರ ಬೆಳೆದ ಬೆಳಗೆ ಯೋಗ್ಯ ದರ ಮತ್ತು ಮಾರುಕಟ್ಟೆ ಒದಗಿಸಲು, ಮಾರುಕಟ್ಟೆಗೆ ಬರುವ ಹೆಚ್ಚಿನ ಆವಕಗಳನ್ನು ಶೇಖ–ರಿಸಲು ಹೆಚ್ಚಿನ ಕೋಲ್ಡ್ ಸ್ಟೋರೇಜ್ ನಿರ್ಮಾಣಕ್ಕೆ ಬೇಡಿಕೆ ಸಲ್ಲಿಸಿದ್ದರು. ಆದ್ದರಿಂದ ರೂ.354.75 ಕೋಟಿಗಳ ಹೆಚ್ಚುವರಿ ಅನುದಾನ ಮಂಜೂರು ಮಾಡುವಂತೆ ಆರ್ಥಿಕ ಇಲಾಖೆ ಕೋರಲಾಗಿದೆ ಎಂದು ಸಚಿವ ಶಿವಾನಂದ ಎಸ್ ಪಾಟೀಲ್ ಮಾಹಿತಿ ನೀಡಿದರು.


ಕರ್ನಾಟಕ ಸರ್ಕಾರ

(ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ)

**ಗ್ರಾಮ ಪಂಚಾಯತಿ ತುರಮುರಿ**

ತಾ॥ ಬೆಳಗಾವಿ ಜಿ॥ ಬೆಳಗಾವಿ

ಕ್ರ.ಸಂ.ಗ್ರಾಪಂತು/15ನೇಹ/2023-24/ಅಲ್ಪಾವಧಿ ಟೆಂಡರ-01/2023-24/ ದಿನಾಂಕ: 13-12 -2024

**ಟೆಂಡರ ಪ್ರಕಟಣೆ (KPPP portal)**

ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ತುರಮುರಿ ಗ್ರಾಮ ಪಂಚಾಯತಿ ಅಡಿಯಲ್ಲಿ ಐಟಂವಾರು ಗುತ್ತಿಗೆಗಳನ್ನು KPPP portal ವೇದಿಕೆ ಮೂಲಕ ಗ್ರಾಮ ಪಂಚಾಯತ್ ಇಲಾಖೆಯ ಚಾಲ್ತಿ ನೋಂದಾಯಿತ ಗುತ್ತಿಗೆದಾರರು ಟೆಂಡರ ಡಾಕ್ಯೂಮೆಂಟ್ ಕೆ.ಡಬ್ಲ್ಯೂ–1ರಲ್ಲಿ ಒಟ್ಟು 9 ಕಾಮಗಾರಿಗಳಿಗೆ ಐಟಂವಾರು ಗುತ್ತಿಗೆಯನ್ನು ಕರೆಯಲಾಗಿದ್ದು, ಗರಿಷ್ಠ ಅಂದಾಜು ಮೊತ್ತ ರೂ. 3.00 ಲಕ್ಷ ಹಾಗೂ ಅದರಂತೆ ಗರಿಷ್ಠ ಮುಂಗಡ ಠೇವಣಿ ಮೊತ್ತ ಅನುಕ್ರಮವಾಗಿ ರೂ. 0.061 ಲಕ್ಷ ಆಗಿರುತ್ತದೆ. ಹಾಗೂ ಕನಿಷ್ಠ ಅಂದಾಜು ಮೊತ್ತ ರೂ. 1.21 ಲಕ್ಷ ಹಾಗೂ ಅದರಂತೆ ಗರಿಷ್ಠ ಮುಂಗಡ ಠೇವಣಿ ಮೊತ್ತ ಅನುಕ್ರಮವಾಗಿ ರೂ. 0.025 ಲಕ್ಷ ಆಗಿರುತ್ತದೆ. ಆಕ್ಷೇಪಣೆಗಳಿದ್ದಲ್ಲಿ ಖುದ್ದಾಗಿ ಕಚೇರಿಗೆ ಹಾಜರಾಗಿ ಸಲ್ಲಿಸುವ ಕೊನೆಯ ದಿನಾಂಕ:20–12–2024 ಸಂಜೆ 17.28 ರೊಳಗಾಗಿ, ಗುತ್ತಿಗೆ ದಾರರಿಂದ ಅರ್ಜಿಗಳನ್ನು ಆನ್‌ಲೈನ್ ಮೂಲಕ ಮನವಿ ಮಾಡಿಕೊಳ್ಳುವ ಕೊನೆಯ ದಿನಾಂಕ:21–12–2024 ಸಂಜೆ 17.30 ಗಂಟೆಯವರೆಗೆ, ಹಾಗೂ ತಾಂತ್ರಿಕ ಬಿಡ್ ತೆರೆಯುವ ದಿನಾಂಕ: 23–12–2024 ರಂದು 10.30 ಗಂಟೆಗೆ ಹಾಗೂ ಆರ್ಥಿಕ ಬಿಡ್ ತೆರೆಯುವ ದಿನಾಂಕ: 23–12–2024 ರಂದು 11.30 ಗಂಟೆಗೆ ಇರುತ್ತದೆ. ಪರಿಷ್ಕೃತ ವೇಳಾ ಪಟ್ಟಿ/ ತಿದ್ದುಪಡಿಗಳು/ ಹೆಚ್ಚಿನ ಮಾಹಿತಿ ಬೇಕಾದಲ್ಲಿ ಗುತ್ತಿಗೆದಾರರು ಈ ಕೆಳಗೆ ಸಹಿ ಮಾಡಿದವರ ಕಚೇರಿಯಲ್ಲಿ ಹಾಗೂ ಅಂತರ್‌ಜಾಲದ ಮೂಲಕ ವೆಬ್‌ಸೈಟ್ ವಿಳಾಸ https://kppp.karnataka.gov.inರಲ್ಲಿ ಪಡೆಯಬಹುದು.

| ಸಹಿ/– | ಸಹಿ/– |
|---|---|
| ಅಧ್ಯಕ್ಷರು (ಪ್ರಭಾರ) | ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು |
| ಗ್ರಾಮ ಪಂಚಾಯತಿ ತುರಮುರಿ | ಗ್ರಾಮ ಪಂಚಾಯತಿ ತುರಮುರಿ |
| ತಾ॥ ಬೆಳಗಾವಿ ತಾ॥ ಬೆಳಗಾವಿ | ತಾ॥ ಬೆಳಗಾವಿ ತಾ॥ ಬೆಳಗಾವಿ |


BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 06, Issue : 261, Postal Reg No. PMG/KA/NK/BM/135/22-24 / POST AT Vantamury Colony Post Office